ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 211
13–2–2025 ಗುರುವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 211

## ವಿಧಾನಸೌಧದ ಮುಂದೆ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ ಪ್ರತಿಭಟನೆ




**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಧಿಕಾರಿಗಳಿಗೆ "ಆತ್ಮಹತ್ಯೆ ಭಾಗ್ಯ ಕರುಣಿಸಿದೆ ಎಂದು ಆರೋಪಿಸಿ ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ ಮತ್ತು ಛಲವಾದಿ ನಾರಾಯಣಸ್ವಾಮಿ ವಿಧಾನಸೌಧದ ಮುಂದೆ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಅಶೋಕ ಅವರು, 'ಸಿದ್ದು ಸರ್ಕಾರದಲ್ಲಿ ಅಧಿಕಾರಿಗಳಿಗೆ ಆತ್ಮಹತ್ಯೆ ಭಾಗ್ಯ' ಎಂಬ ಘೋಷಣೆಯುಳ್ಳ ಭಿತ್ತಿಪತ್ರ ಹಾಗೂ ಛಲವಾದಿ ನಾರಾಯಣಸ್ವಾಮಿ ಅವರು 'ನಿಷ್ಠಾವಂತ ಅಧಿಕಾರಿಗಳಿಗೆ ರಕ್ಷಣೆ ಕೊಡಿ' ಎಂಬ ಭಿತ್ತಿಪತ್ರಗಳನ್ನು ಹಿಡಿದುಕೊಂಡಿದ್ದರು.

ರಾಜ್ಯದಲ್ಲಿ ನಿಷ್ಠಾವಂತ ಅಧಿಕಾರಿಗಳು ಕೆಲಸ ಮಾಡಲು ಆಗದ ಪರಿಸ್ಥಿತಿ ಇದೆ. ವಾಲ್ಮೀಕಿ ನಿಗಮದ ಅಧಿಕಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸಬ್ ಇನ್ ಸ್ಪೆಕ್ಟರ್ ಒಬ್ಬರು ಪ್ರಾಣ ಕಳೆದುಕೊಂಡಿದ್ದಾರೆ. ನಿರಂತರವಾಗಿ ಸರಣಿಯಲ್ಲಿ ಆತ್ಮಹತ್ಯೆ ನಡೆಯುತ್ತಿದೆ. ಅಧಿಕಾರಿಗಳನ್ನು ಬೆದರಿಸುವ ಕೆಲಸ ಮುಂದುವರೆದಿದೆ. ಗೃಹ ಸಚಿವರು ಮತ್ತು ಮುಖ್ಯಮಂತ್ರಿಗಳು ಇದರ ಕುರಿತು ಚಕಾರ ಎತ್ತಿಲ್ಲ ಎಂದು ದೂರಿದರು.

ಸಿ.ಟಿ.ರವಿ ಅವರ ವಿಷಯದಲ್ಲಿ ತರಾತುರಿಯಲ್ಲಿ ಕಾನೂನು ರೀತಿ ಬಿಟ್ಟು ಕ್ರಮ ಕೈಗೊಂಡಿರಿ. ಆದರೆ, ಮೈಸೂರು ಮತ್ತು ಭದ್ರಾವತಿಯಲ್ಲಿ ನಡೆದ ಘಟನೆಗಳಲ್ಲಿ ಯಾರನ್ನು ಬಂಧಿಸಿದ್ದೀರಿ ಎಂದು ಪ್ರಶ್ನಿಸಿದರು.

## ಫ್ರಾನ್ಸ್‌ನಲ್ಲಿ ಭಾರತೀಯ ರಾಯಭಾರ ಕಚೇರಿ ಉದ್ಘಾಟಿಸಿದ ಪ್ರಧಾನಿ ಮೋದಿ




**ಪ್ಯಾರಿಸ್:** ಭಾರತದ ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮಾನ್ಯುಯೆಲ್ ಮ್ಯಾಕ್ರನ್ ಜಂಟಿಯಾಗಿ ಬುಧವಾರ ಫ್ರಾನ್ಸ್‌ನ ಮಾರ್ಸೆಲ್ ನಗರದಲ್ಲಿ ನೂತನ ಭಾರತೀಯ ರಾಯಭಾರ ಕಚೇರಿಯನ್ನು ಉದ್ಘಾಟಿಸಿದರು.

ಈ ವೇಳೆ ನೆರೆದಿದ್ದ ಜನ ಚಪ್ಪಾಳೆ ತಟ್ಟಿ ಸಂಭ್ರಮಿಸಿದರು. ಭಾರತ ಮತ್ತು ಫ್ರಾನ್ಸ್ ಧ್ವಜವನ್ನು ಹಿಡಿದಿದ್ದರು. ಇನ್ನು ಕೆಲವರು ಭಾರತದ ಧ್ವಜದ ಬಣ್ಣವನ್ನು ಹಚ್ಚಿಕೊಂಡು ಬಂದಿದ್ದರು.

ಇದಕ್ಕೂ ಮುನ್ನ ಮೋದಿ ಮತ್ತು ಮ್ಯಾಕ್ರನ್ ಯುದ್ಧದಲ್ಲಿ ಮಡಿದ ಭಾರತೀಯ ಯೋಧರ ಸಮಾಧಿ ಇರುವ ಮಜಾರ್ಗಸ್ ಪ್ರದೇಶಕ್ಕೆ ಭೇಟಿ ನೀಡಿ ನಮನ ಸಲ್ಲಿಸಿದರು. ಬಳಿಕ ಅಲ್ಲಿ ನೆರೆದಿದ್ದ ಜನರೊಂದಿಗೆ ಮಾತುಕತೆ ನಡೆಸಿದ್ದರು.ಅಧ್ಯಕ್ಷ ಮ್ಯಾಕ್ರನ್ ಅವರ ಆಹ್ವಾನದ ಮೇರೆಗೆ ಫ್ರಾನ್ಸ್‌ಗೆ ತೆರಳಿರುವ ಪ್ರಧಾನಿ ಮೋದಿ ಮಂಗಳವಾರ ಎಐ ಆ್ಯಕ್ಷನ್ ಶೃಂಗದಲ್ಲಿ ಭಾಗವಹಿಸಿದ್ದರು.

## ಮೋದಿಯ ಸ್ನೇಹಿತ ಟ್ರಂಪ್ ಭಾರತೀಯರನ್ನು ಹೊರ ಹಾಕುತ್ತಿರುವುದೇಕೆ ? : ಖರ್ಗೆ

**ಕಲಬುರಗಿ:** 'ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತನ್ನ ಸ್ನೇಹಿತ, ತನ್ನ ಮಾತು ಕೇಳುತ್ತಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಯಾವಾಗಲು ಹೇಳುತ್ತಿರುತ್ತಾರೆ. ಹಾಗಾದರೆ, ನಿಮ್ಮನ್ನು ಕೇಳದೇ ಯಾ–ಕೆ ಭಾರತದ ಪ್ರಜೆಗಳನ್ನು ಹೊರಹಾಕುತ್ತಿದ್ದಾರೆ' ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರಶ್ನಿಸಿದರು.



ವಲಸೆ ಹೋಗಿರುವ ಭಾರತ ಪ್ರಜೆಗಳ ಕುರಿತು ನಗರದಲ್ಲಿ ಬುಧವಾರ ಪತ್ರಕರ್ತರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, 'ದೇಶದ ಪ್ರಜೆಗಳ ಕೈಯಲ್ಲಿ, ಕಾಲಲ್ಲಿ ಬೇಡಿ ಹಾಕಿ ಕರೆತರಲಾಗುತ್ತಿದೆ. ಅಂದರೆ, ನಿಮ್ಮ ಸ್ನೇಹಿತ ನಮ್ಮ ದೇಶದ ಪ್ರಜೆಗಳನ್ನು ಗುಲಾಮರಂತೆ ನಡೆಸಿಕೊಳ್ಳುತ್ತಿದ್ದಾರೆ. ಈ ಬಗ್ಗೆ ಮೋದಿ ಯೋಚಿಸಬೇಕು' ಎಂದು ಅಸಮಾಧಾನ ವ್ಯಕ್ತಪಡಿಸಿದರು.

'ಭಾರತ ದೇಶವೇ ಆಗಿರಲಿ, ಅಮೆರಿಕವೇ ಆಗಿರಲಿ, ದೇಶ ಎಂಬುದು ಶಾಶ್ವತ. ವ್ಯಕ್ತಿಗಳು ಬರುತ್ತಾರೆ, ಹೋಗುತ್ತಾರೆ. ಹಿಂದೆ ಟ್ರಂಪ್ ಬಂದ, ಹೋದ. ಈಗ ಮತ್ತೆ ಬಂದಿದ್ದಾರೆ. ನರೇಂದ್ರ ಮೋದಿ ಇಂದು ಇದ್ದಾರೆ, ನಾಳೆ ಇರಲ್ಲ. ಆದರೆ, ದೇಶ ಇರುತ್ತದೆ. ಹೀಗಾಗಿ ದೇಶದ ಹಿತದೃಷ್ಟಿಯಿಂದ ಯೋಚಿಸಬೇಕು. ಅದರ ಬದಲು ಟ್ರಂಪ್ ತನ್ನ ಸ್ನೇಹಿತ. ತನ್ನ ಮಾತು ಕೇಳುತ್ತಾರೆ ಎಂದು ಹೇಳುವುದು ಸಮಂಜಸವಲ್ಲ ಎಂದು ಮೋದಿ ವಿರುದ್ಧ ಹರಿಹಾಯ್ದರು.

## ಜೀತ ಪದ್ದತಿ ನಿರ್ಮೂಲನಾ ದಿನಾಚರಣೆ ಅಂಗವಾಗಿ ಜಾಗೃತಿ ಜಾಥ ಹಾಗೂ ಕಾರ್ಯಗಾರ

**ದಾವಣಗೆರೆ :** ಫೆಬ್ರವರಿ 13 ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜೀತ ಪದ್ದತಿ ನಿರ್ಮೂಲನಾ ದಿನಾಚರಣೆ ಅಂಗವಾಗಿ ಜಾಗೃತಿ ಜಾಥ ಹಾಗೂ ಕಾರ್ಯಗಾರವನ್ನು ಆಯೋಜಿಸಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಹಾಗೂ ಕರ್ನಾಟಕ ಮುಕ್ತಿ ಅಲಯನ್ಸ್ ಇವರುಗಳ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣವರ ಉದ್ಘಾಟಿಸುವರು. ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ. ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣ ನಾಯ್ಕ, ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್, ಮುಕ್ತಿ ಅಲಯನ್ಸ್ ಸಂಚಾಲಕರಾದ ಬೃಂದಾ ಅಡಿಗ, ಕ್ರೀಸ್ಟೋಫರ್ ಸ್ಟ್ಯಾನಿ, ರಾಜೇಂದ್ರನ್ ಭಾಗವಹಿಸುವರು.

ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್ ಅರುಣಕುಮಾರ್ ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಳ್ಳುವರು.

## ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ

**ಚಿಕ್ಕಮಗಳೂರು: ಫೆ. 12:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಾತಿಗೆ ಪ್ರವೇಶ ಪರೀಕ್ಷೆಯನ್ನು ಫೆಬ್ರವರಿ 15 ರಂದು ಸರ್ಕಾರಿ ಪದವಿ ಪೂರ್ವ ಕಾಲೇಜು, ಚಿಕ್ಕಮಗಳೂರು, ಸರ್ಕಾರಿ ಪದವಿ ಪೂರ್ವ ಕಾಲೇಜು, ತರೀಕೆರೆ, ಬಾಲಿಕಾ ಸರ್ಕಾರಿ ಪದವಿ ಪೂರ್ವ ಕಾಲೇಜು, ತರೀಕೆರೆ, ಸರ್ಕಾರಿ ಪದವಿ ಪೂರ್ವ ಕಾಲೇಜು, ಮೂಡಿಗೆರೆ, ಸರ್ಕಾರಿ ಪದವಿ ಪೂರ್ವ ಕಾಲೇಜು, ಕಡೂರು ಎನ್.ಹೆಚ್.206, ಬಾಲಿಕಾ ಸರ್ಕಾರಿ ಪದವಿ ಪೂರ್ವ ಕಾಲೇಜು, ಕಡೂರು, ಬಿ.ಜಿ.ಎಸ್. ವಿಜ್ಞಾನ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜು, ಕಡೂರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಪೊಲೀಸ್ ಸ್ಟೇಷನ್ ಹಿಂಭಾಗ, ಕೊಪ್ಪ ಈ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಯು ನಡೆಯಲಿದೆ, ಪರೀಕ್ಷೆ ಸುವ್ಯವಸ್ಥಿತವಾಗಿ ಶಾಂತಿ ಮತ್ತು ಶಿಸ್ತು ಪಾಲನೆ, ಗೌಪ್ಯತೆಯನ್ನು ಕಾಪಾಡುವ ನಿಟ್ಟಿನಲ್ಲಿ ಈ ಪರೀಕ್ಷಾ ಕೇಂದ್ರಗಳ ಸುತ್ತ ಮಧ್ಯಾಹ್ನ 12.00 ಗಂಟೆಯಿಂದ ಸಂಜೆ 06.00 ಗಂಟೆಯ ವರೆಗೆ ಪರೀಕ್ಷಾ ಕೇಂದ್ರಗಳು ಮತ್ತು ಸುತ್ತಮುತ್ತ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಆದೇಶ ಹೊರಡಿಸಿದ್ದಾರೆ.

## "ಭೀಮಾತೀರ"ದ ಕುಖ್ಯಾತಿಯ ಬಾಗಪ್ಪ ಹರಿಜನ್ ಬರ್ಬರ ಹತ್ಯೆ!

**ವಿಜಯಪುರ:** ಭೀಮಾ ತೀರದ ಕುಖ್ಯಾತ ಹಂತಕ ಚಂದಪ್ಪ ಹರಿಜನ ಸಹಚರ ಹಾಗೂ ಸಹೋದರ ಸಂಬಂಧಿ ಬಾಗಪ್ಪ ಹರಿಜನ್ ಹತ್ಯೆ ಮಾಡಲಾಗಿದೆ. ಮಂಗಳವಾರ ರಾತ್ರಿ 8–50 ರ ಸುಮಾರಿನಲ್ಲಿ ವಿಜಯಪುರದ ಮದಿನಾ ನಗರದಲ್ಲಿ ಮಾರಕಾಸ್ತ್ರಗಳಿಂದ ಮುಖ, ತಲೆ ಸೇರಿದಂತೆ ವಿವಿಧ ಕಡೆಗಳಲ್ಲಿ ಕೊಚ್ಚಿ ಕೊಲೆ ಮಾಡಲಾಗಿದೆ.



ಈ ಹಿಂದೆ ಕೋರ್ಟ್ ಆವರಣದಲ್ಲಿಯೇ ಬಾಗಪ್ಪ ಹರಿಜನ್ ಮೇಲೆ ಗುಂಡಿನ ದಾಳಿಯಾಗಿತ್ತು. ಆದರೆ ಆಗ ಬಾಗಪ್ಪ ಬಚಾವ್ ಆಗಿದ್ದ. ಆದರೆ ಈ ಬಾರಿ ಹಂತಕರು ಯೋಜಿತ ರೀತಿಯಲ್ಲಿ ದಾಳಿ ನಡೆಸಿ ಬಾಗಪ್ಪನನ್ನು ಕೊಂದು ಹಾಕಿದ್ದಾರೆ.

ವಿಜಯಪುರದ ಮದಿನಾ ನಗರದಲ್ಲಿ ಬಾಡಿಗೆ ಮನೆಯಲ್ಲಿ ವಾಸ ಮಾಡುತ್ತಿದ್ದ ಬಾಗಪ್ಪ ರಾತ್ರಿ 8–50 ಸುಮಾರಿಗೆ ಮನೆಯಿಂದ ಹೊರಬರುತ್ತಿದ್ದಂತೆ ದುಷ್ಕರ್ಮಿಗಳು ಮಚ್ಚಿನಿಂದ ದಾಳಿ ನಡೆಸಿ ಹತ್ಯೆ ಮಾಡಿದ್ದಾರೆ. ಬಳಿಕ ಸ್ಥಳದಿಂದ ಪರಾರಿಯಾಗಿದ್ದಾರೆ.

ಘಟನಾ ಸ್ಥಳಕ್ಕೆ ಖಕ ಲಕ್ಷ್ಮಣ ನಿಂಬರಗಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹಂತಕರ ಪತ್ತೆಗಾಗಿ ಂಖಕ ರಾಮನಗೌಡ ನೇತೃತ್ವದಲ್ಲಿ ವಿಶೇಷ ತಂಡ ರಚನೆ ಮಾಡಲಾಗಿದೆ.ಈ ಹಿಂದೆ 2023 ರಲ್ಲಿ ಕೋರ್ಟ್ ಆವರಣದಲ್ಲಿ ಬಾಗಪ್ಪ ಹರಿಜನ್ ಮೇಲೆ ಗುಂಡಿನ ದಾಳಿ ನಡೆಸಲಾಗಿತ್ತು.

ಅಪಚಿತರ ವ್ಯಕ್ತಿಯೊಬ್ಬ ಏಕಾಏಕಿ ಐದು ಸುತ್ತು ಗುಂಡು ಹಾರಿಸಿದ್ದರಿಂದ ಬಾಗಪ್ಪ ಹರಿಜನನ ಎದೆ ಭಾಗಕ್ಕೆ ಹೊಕ್ಕಿತ್ತು. ಕೂಡಲೇ ಆತನನ್ನು ಬಿಎಲ್ ಡಿಇ ಆಸ್ಪತ್ರೆಗೆ ದಾಖಲು ಮಾಡುವ ಮೂಲಕ ಬದುಕುಳಿದಿದ್ದ. ಆದರೆ, ಈಗ ಸುಮಾರು 20 ಜನರಿಂದ ತಂಡ ಯೋಜಿತ ರೀತಿಯಲ್ಲಿ ದಾಳಿ ನಡೆಸಿದ್ದು, ಬಾಗಪ್ಪ ಹರಿಜನ್ ಹತ್ಯೆ ಮಾಡುವಲ್ಲಿ ಯಶಸ್ವಿಯಾಗಿದೆ.

## ಮೈಕ್ರೋ ಫೈನಾನ್ಸ್ ಸುಗ್ರೀವಾಜ್ಞೆಗೆ ರಾಜ್ಯಪಾಲರ ಅಂಕಿತ

**ಬೆಂಗಳೂರು:** ಮಹತ್ವದ ಬೆಳವಣಿಗೆಯೊಂದರಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು, ಮೈಕ್ರೋ ಫೈನಾನ್ಸ್‌ನವರ ಕಿರಿಕುಳ ತಪ್ಪಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಮಂಡಿಸಿದ್ದ ಮೈಕ್ರೋ ಫೈನಾನ್ಸ್ ಸುಗ್ರೀವಾಜ್ಞೆಗೆ ಅಂಕಿತ ಹಾಕಿದ್ದಾರೆ.

ಆರು ತಿಂಗಳುಗಳ ಕಾಲ ಈ ಸುಗ್ರೀವಾಜ್ಞೆ ಜಾರಿಯಲ್ಲಿರಲಿದ್ದು, ಮುಂದಿನ ಸದನದಲ್ಲಿ ಈ ಕುರಿತು ಮಸೂದೆಯನ್ನು ಮಂಡಿಸುವಂತೆ ರಾಜ್ಯಪಾಲರು ರಾಜ್ಯ ಸರ್ಕಾರಕ್ಕೆ ಸೂಚನೆ ನೀಡಿದ್ದಾರೆ.

ಸದ್ಯ ಕೆಲವು ಉಪಯುಕ್ತ ಬದಲಾವಣೆಗಳನ್ನು ಸೂಚಿಸುವ ಮೂಲಕ ಸುಗ್ರೀವಾಜ್ಞೆಗೆ ರಾಜ್ಯಪಾಲರು ಸಮ್ಮತಿ ಸೂಚಿಸಿದ್ದು, ಮಸೂದೆಯನ್ನು ಮಂಡಿಸಲು ರಾಜ್ಯ ಸರ್ಕಾರಕ್ಕೆ ಆರು ತಿಂಗಳ ಕಾಲಾವಕಾಶ ನೀಡಿದ್ದಾರೆ.

ಈ ಕುರಿತು ಅಧಿಕೃತ ಪ್ರಕಟಣೆ ಹೊರಡಿಸಿರುವ ರಾಜಭವನವು "ಮೈಕ್ರೋಫೈನಾನ್ಸ್ ಕಿರುಕುಳ ತಪ್ಪಿಸಲು ಈ ಸುಗ್ರೀವಾಜ್ಞೆ ಒಂದು ಉತ್ತಮ ಹೆಜ್ಜೆ ಎಂದು ಹೇಳಿದ್ದಾರೆ.." ಎಂದು ಸ್ಪಷ್ಟಪಡಿಸಿದೆ.



ಮುಂದುವರೆದು "ಅನಿಯಂತ್ರಿತ ಮತ್ತು ನೋಂದಾಯಿತವಲ್ಲದ ಎಂಎಫ್‌ಐಗಳು ಮತ್ತು ಮನಿ ಲೆಂಡಿಂಗ್ ಏಜೆನ್ಸಿಗಳು ಸಾಲಗಾರರಿಗೆ ಅನಗತ್ಯ ಕಿರುಕುಳ ನೀಡುವುದನ್ನು ತಪ್ಪಿಸಲು ಈ ಸುಗ್ರೀವಾಜ್ಞೆ ಅವಶ್ಯಕ.." ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದಾರೆ.

"ಆರ್ಥಿಕವಾಗಿ ದುರ್ಬಲ ಗುಂಪುಗಳು ಮತ್ತು ವ್ಯಕ್ತಿಗಳು ಅಧಿಕ ಬಡ್ಡಿಯ ಅನಗತ್ಯ ಕಷ್ಟಗಳಿಂದ ಪಾರು ಮಾಡಲು ಈ ಸುಗ್ರೀವಾಜ್ಞೆ ನೆರವಾಗಲಿದ್ದು, ಮುಂದಿನ ಆರು ತಿಂಗಳುಗಳವರೆಗೆ ರಾಜ್ಯದಲ್ಲಿ ಈ ಸುಗ್ರೀವಾಜ್ಞೆ ಜಾರಿಯಲ್ಲಿರಲಿದೆ.." ಎಂದು ರಾಜ್ಯಪಾಲರು ಸ್ಪಷ್ಟಪಡಿಸಿದ್ದಾರೆ.

ಸುಗ್ರೀವಾಜ್ಞೆಯು ಅತ್ಯುತ್ತಮ ಉದ್ದೇಶಗಳನ್ನು ಹೊಂದಿದ್ದರೂ ಸಹ, ಕಾನೂನು ಮತ್ತು ಸುಗ್ರೀವಾಜ್ಞೆಯ ಸಾಮಾಜಿಕ ಪ್ರಭಾವವನ್ನು ವಿವರವಾಗಿ ಚರ್ಚಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಜಾರಿಗೆ ತರಲು ಬಯಸಿರುವ ಸುಗ್ರೀವಾಜ್ಞೆಗೆ ಕೆಲವು ಅಗತ್ಯ ಬದಲಾವಣೆ ತರಲು ನಾನು ಬಯಸುತ್ತೇನೆ.." ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ.

## ಮಹಿಳೆಯರ ಆರ್ಥಿಕ ಸದೃಢತೆಗೆ ಕರವಸೂಲಿ ಸಹಕಾರಿ : ಸುಜಾತ



**ಚಿಕ್ಕಮಗಳೂರು**–ಸಮಾಜದಲ್ಲಿ ಮಹಿಳೆಯರು ಆರ್ಥಿಕ ಸಬಲ–ಪ್ರಬಲರಾಗಬೇಕೆಂಬ ಗುರಿಯೊಂದಿಗೆ ಸ್ವಸಹಾಯ ಸಂಘಗಳ ಮಹಿಳೆಯರಿಗೆ ನಗರಸಭೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ವಸೂಲಿ ಬಗ್ಗೆ ಅರಿವು ಮೂಡಿಸಲಾಗಿದೆ ಎಂದು ನಗರಸಭಾಧ್ಯಕ್ಷೆ ಸುಜಾತ ಶಿವಕುಮಾರ್ ತಿಳಿಸಿದರು.

ಅವರು ಇಂದು ನಗರಸಭೆಯಲ್ಲಿ ಏರ್ಪಡಿಸಲಾಗಿದ್ದ ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯದ ಮಾರ್ಗಸೂಚಿಯಂತೆ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ ಸಮರ್ಪಕ ವಸೂಲಾತಿಗಾಗಿ ಡೇನಲ್ಮ್ ಅಭಿಯಾನದಡಿ ರಾಜ್ಯದ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಅರ್ಹ ಮಹಿಳಾ ಸ್ವಸಹಾಯ ಸಂಘಗಳನ್ನು ತೊಡಗಿಸಿಕೊಂಡು ಆಸ್ತಿ ತೆರಿಗೆ ನೀರಿನ ಶುಲ್ಕವನ್ನು ವಸೂಲಾತಿ ಸಂಗ್ರಹಣೆ ಮಾಡುವ ಬಗ್ಗೆ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಗರಸಭೆ ವ್ಯಾಪ್ತಿಯ ಆಯಾ ವಾರ್ಡಿನ ಸ್ತ್ರೀಶಕ್ತಿ ಸ್ವಸಹಾಯ ಸಂಘಗಳು ಕಂದಾಯ ಮತ್ತು ನೀರಿನ ಕರ ವಸೂಲಿ ಮಾಡಿದರೆ ಶೇ.5 ರಷ್ಟು ಹಣವನ್ನು ಆ ಸಂಘಕ್ಕೆ ನೀಡಲು ಯೋಜನೆ ರೂಪಿಸಲಾಗಿದ್ದು, ಅಂದು ಸಂಗ್ರಹಿಸಿದ ಹಣವನ್ನು ಅಂದೇ ನಗರಸಭೆಗೆ ಪಾವತಿ ಮಾಡಲು ಪೇಟಿಎಂ ಮೂಲಕ ಅವಕಾಶ ಕಲ್ಪಿಸಲಾಗಿದೆ ಎಂದರು.

ಸಂಗ್ರಹಿಸಲಾದ ಕಂದಾಯ ಹಣವನ್ನು ನಿಗದಿತ ಸಮಯದಲ್ಲಿ ಪಾವತಿ ಮಾಡಬೇಕು. ಇದನ್ನು ದುರುಪಯೋಗಪಡಿಸಿಕೊಂಡರೆ ಪೊಲೀಸ್ ಇಲಾಖೆ ಮೂಲಕ ನಗರಸಭೆ ಪೌರಾಯುಕ್ತರು ಮತ್ತು ಸಿಬ್ಬಂದಿ ಪ್ರಕರಣ ದಾಖಲಿಸಿ ದಂಡ ವಿಧಿಸಲು ಅವಕಾಶ ಇದ್ದು, ಇದಕ್ಕೆ ಅವಕಾಶ ಕೊಡದಂತೆ ಕೆಲಸ ಮಾಡಬೇಕೆಂದು ಎಚ್ಚರಿಸಿದರು.

ಕರ ವಸೂಲಾತಿಗೆ ಹೋಗುವ ಮಹಿಳೆಯರಿಗೆ ನಗರಸಭೆ ವತಿಯಿಂದ ಗುರುತಿನ ಚೀಟಿ ನೀಡಲಾಗುವುದು. ವಾರ್ಡಿನಲ್ಲಿ ವಾಸಿಸುವ ನಾಗರೀಕರ ಪರಿಚಯ ಸ್ಥಳೀಯ ಸ್ವಸಹಾಯ ಸಂಘದ ಪದಾಧಿಕಾರಿಗಳಿಗೆ ಇರುವುದರಿಂದ ಮೋಸ ಹೋಗುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಕಂದಾಯ ವಸೂಲಾತಿ ಕಾರ್ಯದಲ್ಲಿ ಮಹಿಳೆಯರು ತೊಡಗಿಸಿಕೊಳ್ಳುವುದರಿಂದ ನಗರಸಭೆ ಅಧಿಕಾರಿ ಎಂಬುವುದರ ಜೊತೆಗೆ ಆರ್ಥಿಕ ಸದೃಢರಾಗಲು ಸಹಕಾರಿಯಾಗಲಿದೆ ಎಂದು ಹೇಳಿದರು.

ನಗರಸಭೆ ಸಿಬ್ಬಂದಿ ಕಂದಾಯ ವಸೂಲಾತಿಗೆ ಹೋದರೆ ಸಾರ್ವಜನಿಕರ ಕೆಲಸಕ್ಕೆ ತೊಂದರೆಯಾಗುತ್ತದೆ ಎಂಬ ಸ್ತ್ರೀಶಕ್ತಿ ಸ್ವಸಹಾಯ ಗುಂಪಿನ ಮಹಿಳೆಯರ ಮೂಲಕ ಕಂದಾಯ ವಸೂಲಿ ಮಾಡಲು ಸರ್ಕಾರ ಆದೇಶಿಸಿರುವ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದ್ದು, ಇದರಿಂದ ಮಹಿಳೆಯರು ಆರ್ಥಿಕ ಸ್ವಾವಲಂಬಿಗಳಾಗಲಿ ಎಂದು ಹಾರೈಸಿದರು.

ಪೌರಾಯುಕ್ತ ಬಿ.ಸಿ. ಬಸವರಾಜ್ ಮಾತನಾಡಿ, ನಗರಸಭೆ ವ್ಯಾಪ್ತಿಯಲ್ಲಿ ಕಂದಾಯ ಬಾಕಿ ಚಾಲ್ತಿ ವಸೂಲಾತಿಗೆ ಸಂಬಂಧಿಸಿದಂತೆ ಸರ್ಕಾರ ಮಾರ್ಗಸೂಚಿ ಹೊರಡಿಸಿದ್ದು ಅದರಂತೆ ಸ್ಥಳೀಯ ಮಹಿಳಾ ಸ್ತ್ರೀಶಕ್ತಿ ಸ್ವಸಹಾಯ ಸಂಘಗಳ ಮೂಲಕ ಕಂದಾಯ ವಸೂಲಾತಿಗೆ ಕ್ರಮವಹಿಸಲಾಗಿದ್ದು, ಸಂಗ್ರಹ ಮಾಡಿದ ಹಣಕ್ಕೆ ಶೇ.5 ರಷ್ಟು ಪ್ರೋತ್ಸಾಹಧನ ನೀಡಲು ನಿರ್ಧರಿಸಲಾಗಿದೆ ಎಂದರು.

ನಗರಸಭೆ ವ್ಯಾಪ್ತಿಯ 35 ವಾರ್ಡಿನ ಎಲ್ಲಾ ಸ್ವಸಹಾಯ ಸಂಘಗಳ ಪದಾಧಿಕಾರಿಗಳನ್ನು ಇಂದು ಆಹ್ವಾನಿಸಿ ಕಂದಾಯ ವಸೂಲಾತಿ ಕುರಿತು ಅರಿವು ಮೂಡಿಸಲಾಗಿದೆ. ಈ ಮೂಲಕ ಮಹಿಳೆಯರ ಆರ್ಥಿಕ ಸದೃಢತೆಗೆ ಹೆಚ್ಚಿನ ಕಾಳಜಿ ವಹಿಸಲಾಗಿದೆ ಎಂದು ಹೇಳಿದರು.

ಫೆ.20 ರ ನಂತರ ವಾರ್ಡ್‌ವಾರು ಸಭೆ ನಡೆಸಿ ಸಾರ್ವಜನಿಕರಿಗೆ ಮನವರಿಕೆ ಮಾಡುವ ಬಗ್ಗೆ ಅಗತ್ಯ ಮಾಹಿತಿ ನೀಡಲಾಗುವುದು. ಏ.1 ರಿಂದ ಆಸ್ತಿ ಮತ್ತು ನೀರಿನ ತೆರಿಗೆ ವಸೂಲಾತಿ ಕಾರ್ಯ ಆರಂಭವಾಗಲಿದೆ ಎಂದು ತಿಳಿಸಿದರು.

ಸಮುದಾಯ ಸಂಘಟನಾಧಿಕಾರಿ ಚಂದ್ರಶೇಖರಪ್ಪ ಸ್ವಾಗತಿಸಿ ಮಾತನಾಡಿ, ನಗರಸಭೆ ವ್ಯಾಪ್ತಿಯಲ್ಲಿ ಡೇನಲ್ಮ್ ಯೋಜನೆಯಡಿ ರಚನೆಯಾಗಿರುವ ಅರ್ಹ ಆಸಕ್ತ ಸ್ವಸಹಾಯ ಸಂಘಗಳಿಂದ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ ಸಮರ್ಪಕ ವಸೂಲಾತಿಗಾಗಿ ಕರ ಸಂಗ್ರಹಣೆಗೆ ಸರ್ಕಾರ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿದೆ ಎಂದು ಹೇಳಿದರು.

ಇದರಂತೆ ನಗರದ ಸ್ವಸಹಾಯ ಸಂಘಗಳಿಂದ ಅರ್ಜಿಗಳನ್ನು ಆಹ್ವಾನಿಸಿದ್ದು, ಈಗಾಗಲೇ 15 ಸ್ವಸಹಾಯ ಸಂಘಗಳಿಂದ ಅರ್ಜಿಗಳು ಬಂದಿವೆ.

## ಮಾರ್ಚ್ ಅಂತ್ಯದೊಳಗೆ ಜೆಜೆಎಂ ಕಾಮಗಾರಿ ಪೂರ್ಣಗೊಳಿಸಿ

### ಸಚಿವ ಮಧು ಬಂಗಾರಪ್ಪ



**ಶಿವಮೊಗ್ಗ :** ಜಿಲ್ಲೆಯಲ್ಲಿ ಪ್ರತಿ ಮನೆಗೆ ಶುದ್ಧ ಕುಡಿಯುವ ನೀರು ಪೂರೈಸುವ ಜಲ ಜೀವನ ಮಿಷನ್ ಕಾಮಗಾರಿಗಳನ್ನು ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಮಧು ಬಂಗಾರಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಲೋಕೋಪಯೋಗಿ ಭವನದ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಲಾಗಿದ್ದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜೆಜೆಎಂ ಯೋಜನೆಯನ್ನು ತ್ವರಿತ ಗತಿಯಲ್ಲಿ ಪೂರೈಸಬೇಕು. ಇಲ್ಲಿಯವರೆಗೆ ಶೇ.60 ರಿಂದ 70 ಭಾಗ ಮಾತ್ರ ಕಾಮಗಾರಿ ಪೂರ್ಣಗೊಂಡಿದೆ. ಕಾಮಗಾರಿಗೆ ಸಂಬಂಧಿಸಿದಂತೆ ಅರಣ್ಯ ಸೇರಿಂದತೆ ಇತರೆ ವಿಷಯಗಳನ್ನು ಜಿಲ್ಲಾಧಿಕಾರಿಗಳು, ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿ, ಸರಿಪಡಿಸಿಕೊಂಡು ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಬೇಕು. ಈ ಕುರಿತು ನಾನು ಸರ್ಕಾರದ ಕಾರ್ಯದರ್ಶಿಯವರೊಂದಿಗೆ ಮಾತನಾಡುತ್ತೇನೆ. ಮಾರ್ಚ್ ಅಂತ್ಯದೊಳಗೆ ಶೇ.95 ರಷ್ಟು ಕೆಲಸ ಆಗಬೇಕು ಎಂದು ಸೂಚಿಸಿದರು.

ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಕಾರ್ಯಪಾಲಕ ಅಭಿಯಂತರ ರೂಪ್ಲಾನಾಯ್ಕ ಮಾತನಾಡಿ, ಜಿಲ್ಲೆಯಲ್ಲಿ ಜೆಜೆಎಂ ಯೋಜನೆಯಡಿ ಶೇ. 67.5 ಪ್ರಗತಿ ಸಾಧಿಸಲಾಗಿದೆ.

2528 ಕಾಮಗಾರಿಗಳಲ್ಲಿ 1707 ಕಾಮಗಾರಿ ಪೂರ್ಣಗೊಂಡಿದ್ದು, 821 ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದರು.

ಸಚಿವರು, ಶಿಕಾರಿಪುರ–ಸೊರಬ–ಆನವಟ್ಟಿ ಸೇರಿ 154 ಗ್ರಾಮಗಳಿಗೆ ನೀರು ನೀಡುವ ಬಹುಗ್ರಾಮ ಯೋಜನೆಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಬಹುಗ್ರಾಮ ಮತ್ತು ಇತರೆ ಯೋಜನೆಗಳಿಗೆ ಒಳಪಡದ ಗ್ರಾಮಗಳನ್ನು ಸಹ ಗುರುತಿಸಿ ನೀರು ಕೊಡಲು ವ್ಯವಸ್ಥೆ ಮಾಡಬೇಕು. ಹಾಗೂ ಕುಂಸಿ ಬಹು ಗ್ರಾಮ ಯೋಜನೆಯನ್ನು ಕೈಗೆತ್ತಿಕೊಂಡು ಕಾರ್ಯಾರಂಭಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ಎಷ್ಟು ಶಾಲೆಗಳು, ಪಿಹೆಚ್‌ಸಿಗಳು ಮತ್ತು ಅಂಗನವಾಡಿಗಳಲ್ಲಿ ಕುಡಿಯುವ ನೀರಿನ ಸಂಪರ್ಕ ಇದೆ ಮತ್ತು ಇಲ್ಲವೆಂದು ಡಿಡಿಪಿಐ, ಡಿಹೆಚ್‌ಓ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಅಧಿಕಾರಿಗಳು ವರದಿ ನೀಡಬೇಕು. ಕುಡಿಯುವ ನೀರಿನ ಸಂಪರ್ಕವಿಲ್ಲದ ಶಾಲೆಗಳು, ಅಂಗನವಾಡಿ ಮತ್ತು ಪಿಹೆಚ್‌ಸಿಗಳಿಗೆ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯಿಂದ ಸಂಪರ್ಕ ಒದಗಿಸಲಾಗುವುದು ಎಂದು ತಿಳಿಸಿದರು.

### ಸಂವಿಧಾನ ಶಿಲ್ಪಿ ಭಾರತ ರತ್ನ ಡಾ. ಬಿ ಆರ್ ಅಂಬೇಡ್ಕರ್ ಓದು ಕಾರ್ಯಕ್ರಮ

## ಗುಲಾಮರನ್ನು ರಾಜ ಮಹಾರಾಜರನ್ನಾಗಿಸಿದವರು ಡಾ. ಬಿ ಆರ್ ಅಂಬೇಡ್ಕರ್

**ಗದಗ.ಫೆ.12:** ಹಲವರು ಮನುಷ್ಯರನ್ನು ಗುಲಾಮರನ್ನಾಗಿ ಮಾಡಿದವರನ್ನು ನಾವು ನೋಡಿದ್ದೇವೆ, ಆದರೆ ಗುಲಾಮರನ್ನು ರಾಜ ಮಹಾ ರಾಜರನ್ನಾಗಿಸಿದವರು ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ್ ಎಂದು ಸಮಾಜ ಕಲ್ಯಾಣ ಇಲಾಖೆ0ಯ ಉಪನಿರ್ದೇಶಕ ಮಹೇಶ್ ಪೋತದಾರ್ ಅವರು ಹೇಳಿದರು.

ಗದಗ ನಗರದ ಆದರ್ಶ ಶಿಕ್ಷಣ ಸಂಸ್ಥೆ0ಯ ವಾಣಿಜ್ಯ ಮಹಾವಿದ್ಯಾಲ0ಯದ ಸಿಲ್ವರ್ ಜುಬ್ಲಿ ಸಭಾಂಗಣದಲ್ಲಿ ಕನ್ನಡ ಸಂಸ್ಕೃತಿ ಇಲಾಖೆ, ಆದರ್ಶ ಶಿಕ್ಷಣ ಸಂಸ್ಥೆ0ಯ ಶ್ರೀ ವಿ ಆರ್ ಕುಷ್ಟಗಿ ಮೆಮೋರಿ0ಯಲ್ ಕಾಲೇಜ್ ಆಫ್ ಕಾಮರ್ಸ್ ಹಾಗೂ ರಾಷ್ಟ್ರೀ0ಯ ಸೇವಾ 0ಯೋಜನೆ ಘಟಕ ಇವರುಗಳ ಸಂ0ಯುಕ್ತ ಆಶ್ರ0ಯದಲ್ಲಿ ಬುಧವಾರ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ. ಬಿ ಆರ್ ಅಂಬೇಡ್ಕರ್ ಅವರ ಓದು ಕಾ0ರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.




ಭಾರತಕ್ಕೆ ಶ್ರೇಷ್ಠ ಸಂವಿಧಾನ ನೀಡುವಲ್ಲಿ ಹಾಗೂ ಪ್ರಭುದ್ಧ ರಾಷ್ಟ್ರ ನಿರ್ಮಾಣದಲ್ಲಿ ಅಂಬೇಡ್ಕರ್ ಅವರ ಪಾತ್ರ ಅಭಿಸ್ಮರಣೀ0ಯ. ತಮ್ಮೆಲ್ಲರಿಗೂ ವಿದ್ಯಾಭ್ಯಾಸ ಶಿಕ್ಷಣ ಓದು ಎಷ್ಟು ಮುಖ್ಯ ಎಂಬುದನ್ನು ಡಾ. ಅಂಬೇಡ್ಕರ್ ನೋಡಿ ಅರಿ0ಯಬೇಕಿದೆ. ಓದಬೇಕು ಓದಿದ್ದುದನ್ನು ಅರ್ಥ ಮಾಡಿಕೊಳ್ಳುವ ಪ್ರವೃತ್ತಿ ಬೆಳೆಸಿಕೊಳ್ಳಬೇಕು. ನಮ್ಮಲ್ಲಿ ಸಾಧನೆ ಮಾಡಲು ಇಚ್ಛಾಶಕ್ತಿ ಬೇಕು, ಇಚ್ಛಾಶಕ್ತಿ ಇದ್ದಲ್ಲಿ ಸಾಧನೆ ಸಾಧ್ಯ ಎಂದು ಹೇಳಿದರು.

ಶೋಷಿತ ವರ್ಗದ ಧ್ವನಿ0ಯಾಗಿ ಬಡವರ ಕಣ್ಮಣಿ0ಯಾಗಿ ಡಾ. ಬಿ ಆರ್ ಅಂಬೇಡ್ಕರ್ ಅವರು ಅಗಾಧ ಸಾಧನೆ ಮಾಡುವ ಮೂಲಕ ನಮ್ಮೆಲ್ಲರಿಗೂ ಸ್ಫೂರ್ತಿ0ಯಾಗಿದ್ದಾ–ರೆ. ಸಕಲರಿಗೂ ಸ್ಫೂರ್ತಿ ಸಿಂಚನ ಡಾ. ಬಿಆರ್ ಅಂಬೇಡ್ಕರ್ ಎಂದು ಅಂಬೇಡ್ಕರ್ ಅವರನ್ನು ಅವರ ಸಾಧನೆಗಳನ್ನು ಬಣ್ಣಿಸಿದರು.

ಭಾರತದ ದಿವ್ಯ ಚೇತನ ಸಂವಿಧಾನ ಶಿಲ್ಪಿ ಡಾಕ್ಟರ್ ಬಿಆರ್ ಅಂಬೇಡ್ಕರ್ ಎಂಬ ಸ್ವರಚಿತ ಗೀತೆ ಹಾಡುವ ಮೂಲಕ ನೆರೆದ ವಿದ್ಯಾರ್ಥಿಗಳಿಗೆ ಮನರಂಜ0ಯ ಮೂಲಕ ಸಂವಿಧಾನ ಓದಿನ ಕುರಿತು ಮಹೇಶ್ ಪೋತದಾರ್ ಅರಿವು ಮೂಡಿಸಿದರು.

ಹುಲಕೋಟಿ ಜಿಸಿಟಿಎಂ ಪದವಿ ಪೂರ್ವ ಮಹಾವಿದ್ಯಾಲ0ಯದ ಪ್ರಾಧ್ಯಾಪಕ ಡಾ. ಅರ್ಜುನ್ ಗೋಳಸಂಗಿ ವಿಶೇಷ ಉಪನ್ಯಾಸ ನೀಡುತ್ತಾ ಸಮತಾ ಭಾರತ ನಿರ್ಮಾಣ ಆಗಬೇಕಿದೆ ಎಂದರು. ಅಂಬೇಡ್ಕರ್ ಅವರ ಬಾಲ್ಯ, ಶಿಕ್ಷಣದ ಕುರಿತು ಅವರು ಅನುಭವಿಸಿದ ಶೋಷಣೆ0ಯ ಬಗ್ಗೆ, ಸಮಾಜದಲ್ಲಿ ಮೇಲು–ಕೀಳು ಬಡವ ಬಲ್ಲಿದ ಕುರಿತ ಶೋಷಣೆಗಳ ಬಗ್ಗೆ ವಿವರವಾಗಿ ತಿಳಿಸುವ ಮೂಲಕ, ಶೋಷಣೆ ಮುಕ್ತ ಸಮಾಜ ನಿರ್ಮಿಸಲು ಎಲ್ಲರೂ ಒಟ್ಟಾಗಿ ಶ್ರಮಿಸೋಣ ಎಂದರು.

ಸಮ ಸಮಾಜ ನಿರ್ಮಾಣಕ್ಕೆ ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ್ ಅವರ ವಿಚಾರಧಾ–ರೆ, ಜೀವನ ತತ್ವ, ಸಿದ್ಧಾಂತ ಓದು, ಪ್ರೇರಕ ಶಕ್ತಿ0ಯಾಗಿದೆ ಎಂದು ಅಭಿಪ್ರಾ0ಯಪಟ್ಟರು. ಸಂವಿಧಾನವು ಸರ್ವರಿಗೂ ಸಂಬಂಧಿಸಿದಾಗಿದ್ದು ಅದೇ ತರಹ ಡಾ. ಬಿಆರ್ ಅಂಬೇಡ್ಕರ್ ಅವರು ಸಹ ಸರ್ವರಿಗೂ ಸಂಬಂಧಿಸಿದವರು ಎಂಬುದನ್ನು ನಾವೆಲ್ಲರೂ ಅರಿ0ಯಬೇಕಿದೆ. ಸಂವಿಧಾನದ ಆಶ0ಯಗಳ ಈಡೇರಿಕೆಗಾಗಿ ನಾವೆಲ್ಲ ಪಣತೊಡೋಣ ಎಂದು ಕರೆ ನೀಡಿದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಆಸಕ್ತಿಗಳನ್ನು ಮುಂದುವರಿಸಲು ಅಥವಾ ನೀವು ತುಂಬ ಆನಂದಿಸುವ ಕೆಲಸಗಳನ್ನು ಮಾಡಲು ಹೆಚ್ಚು ಸಮಯ ಕಳೆಯಬೇಕು. ಕೆಲವರಿಗೆ ಪ್ರಯಾಣದ ಗಡಿಬಿಡಿ ಮತ್ತು ಒತ್ತಡದಿಂದ ಕೂಡಿರುತ್ತವೆ – ಆದರೆ ಆರ್ಥಿಕವಾಗಿ ಲಾಭದಾಯಕವಾಗಿರುತ್ತವೆ. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ. ಒಬ್ಬ ಸುಂದರ ನಗುವಿನಿಂದ ನಿಮ್ಮ ಪ್ರೇಮಿಯ ದಿನವನ್ನು ಪ್ರಕಾಶಮಾನವಾಗಿಸಿ. ನೀವು ಕೆಲಸದಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ.

### ವೃಷಭ ರಾಶಿ

ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ಸ್ನೇಹಿತರು, ವ್ಯಾಪಾರ ಪಾಲುದಾರರು ಹಾಗೂ ಸಂಬಂಧಿಗಳ ಜೊತೆ ವ್ಯವಹರಿಸುವಾಗ ನಿಮ್ಮ ಹಿತಾಸಕ್ತಿಯನ್ನು ರಕ್ಷಿಸಿಕೊಳ್ಳಿ – ಅವರು ನಿಮ್ಮ ಅಗತ್ಯಗಳಿಗೆ ಸಂವೇದನೆ ಹೊಂದದಿರಬಹುದು. ನೀವು ಹಂಚಿಕೊಂಡ ಉತ್ತಮ ಸಮಯವನ್ನು ನೆನಪಿಸಲು ನಿಮ್ಮ ಸ್ನೇಹವನ್ನು ನೆನಪು ಮಾಡಿಕೊಳ್ಳುವ ಸಮಯ.

### ಮಿಥುನ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ.

### ಕರ್ಕ ರಾಶಿ

ಧಾರ್ಮಿಕ ಭಾವನೆಗಳನ್ನು ಉದ್ಭವಿಸಿ ಒಬ್ಬ ಪವಿತ್ರ ವ್ಯಕ್ತಿಯಿಂದ ದೈವಿಕ ಜ್ಞಾನವನ್ನು ಪಡೆಯಲು ನೀವು ಒಂದು ಧಾರ್ಮಿಕ ಸ್ಥಳಕ್ಕೆ ಭೇಟಿ ನೀಡುವಂತೆ ಮಾಡುತ್ತವೆ. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ – ಹಣವನ್ನು ಹೂಡುವ ಪ್ರಶ್ನೆ ಬಂದಾಗ ಆತುರದ ನಿರ್ಧಾರಗಳನ್ನು ಮಾಡಬೇಡಿ. ಹಳೆಯ ಸಂಬಂಧಿಗಳು ಅವಿವೇಕದ ಬೇಡಿಕೆಗಳನ್ನು ಮಾಡುವ ಸಾಧ್ಯತೆಯಿದೆ. ಇಂದು ನೀವು ನಿಮ್ಮ ಸಂಗಾತಿಯ ಹೃದಯ ಬಡಿತಗಳ ಜೊತೆಗಿರುತ್ತೀರಿ.

### ಸಿಂಹ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ಸ್ನೇಹಿತರು, ವ್ಯಾಪಾರ ಪಾಲುದಾರರು ಹಾಗೂ ಸಂಬಂಧಿಗಳ ಜೊತೆ ವ್ಯವಹರಿಸುವಾಗ ನಿಮ್ಮ ಹಿತಾಸಕ್ತಿಯನ್ನು ರಕ್ಷಿಸಿಕೊಳ್ಳಿ – ಅವರು ನಿಮ್ಮ ಅಗತ್ಯಗಳಿಗೆ ಸಂವೇದನೆ ಹೊಂದದಿರಬಹುದು. ನಿಮ್ಮ ಪ್ರೇಮಿಯನ್ನು ಭೇಟಿ ಮಾಡುತ್ತಿದ್ದ ಹಾಗೆ ನಿಮ್ಮ ಮನಸ್ಸನ್ನು ಪ್ರಣಯ ಆವರಿಸಿಕೊಳ್ಳುತ್ತದೆ.

### ಕನ್ಯಾ ರಾಶಿ

ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ.

ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸೆಗಳನ್ನು ದೂರ ಮಾಡಬಹುದು. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ. ನಿಮ್ಮ ಪ್ರೀತಿಯ ಕಥೆ ಇಂದು ಒಂದು ಹೊಸ ತಿರುವು ತೆಗೆದುಕೊಳ್ಳಬಹುದು, ಇಂದು ನಿಮ್ಮ ಸಂಗಾತಿ ಮದುವೆಯ ಬಗ್ಗೆ ನಿಮ್ಮೊಂದಿಗೆ ಮಾತನಾಡಬಹುದು

### ತುಲಾ ರಾಶಿ

ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ.

### ವೃಶ್ಚಿಕ ರಾಶಿ

ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ.

### ಧನು ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಕೆಲಸದ ಸ್ಥಳದಲ್ಲಿ ಅಥವಾ ವ್ಯಾಪಾರದಲ್ಲಿ ನಿಮ್ಮ ಯಾವುದೇ ಅಜಾಗರೂಕತೆ ಇಂದು ನಿಮಗೆ ಆರ್ಥಿಕ ನಷ್ಟವನ್ನು ಉಂಟುಮಾಡಬಹುದು ನಿಮ್ಮ ನಿರ್ಲಕ್ಷತನದ ಮತ್ತು ಊಹಿಸಲಾಗದ ವರ್ತನೆಯಿಂದ ನಿಮ್ಮ ಜೊತೆಗಿರುವ ಯಾರಾದರೂ ಬೇಸರಗೊಳ್ಳಬಹುದು. ಸಾಮಾಜಿಕ ಅಡೆತಡೆಗಳನ್ನು ದಾಟಲು ಸಾಧ್ಯವಾಗುವುದಿಲ್ಲ. ಹೊಸ ಯೋಜನೆಗಳು ಮತ್ತು ವಿಚಾರಗಳನ್ನು ಕಾರ್ಯರೂಪಕ್ಕೆ ತರಲು ಒಳ್ಳೆಯ ದಿನ.

### ಮಕರ ರಾಶಿ

ನಿಮ್ಮ ಮಗುವಿನ ಸಾಧನೆ ನಿಮಗೆ ಅಪಾರ ಸಂತೋಷ ನೀಡಬಹುದು. ನೀವು ಜನರು ನಿಮ್ಮಿಂದ ಏನು ಬಯಸುತ್ತಾರೆಂದು ನಿಖರವಾಗಿ ತಿಳಿದಿರುವಂತೆ ತೋರುತ್ತದೆ –ಆದರೆ ಇಂದು ನಿಮ್ಮ ಖರ್ಚುಗಳಲ್ಲಿ ತುಂಬಾ ಉದಾರಿಯಾಗದಿರಲು ಪ್ರಯತ್ನಿಸಿ. ಸಾಮಾಜಿಕ ಚಟುವಟಿಕೆಗಳು ಆನಂದಮಯವಾಗಿದ್ದರೂ ನೀವು ಇತರರೊಂದಿಗೆ ನಿಮ್ಮ ರಹಸ್ಯಗಳನ್ನು ಹಂಚಿಕೊಳ್ಳಬಾರದು. ನಿಮ್ಮ ಸಂಗಾತಿಯ ಅನುಪಸ್ಥಿತಿ ಕಾಡುವ ಸಾಧ್ಯತೆಯಿದೆ.

### ಕುಂಭ ರಾಶಿ

ವಿಶೇಷವಾಗಿ ಹೊರಗಿಟ್ಟ ಆಹಾರ ತಿನ್ನುವಾಗ ವಿಶೇಷ ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು. ಆದರೆ ಅನಗತ್ಯ ಒತ್ತಡ ಕೇವಲ ನಿಮಗೆ ಮಾನಸಿಕ ಉದ್ವೇಗ ಉಂಟುಮಾಡುತ್ತದೆ. ನೀವು ನಿಮ್ಮ ಕಳೆದ ಸಮಯದಲ್ಲಿ ಬಹಳಷ್ಟು ಹಣವನ್ನು ಖರ್ಚುಮಾಡಿದ್ದಿರಿ ಇದರ ತೊಂದರೆ ನೀವು ಇಂದು ಅನುಭವಿಸಬೇಕಾಗಬಹುದು. ಇಂದು ನಿಮಗೆ ಹಣದ ಅಗತ್ಯವಿರಬಹುದು ಆದರೆ ಅದು ನಿಮಗೆ ದೊರೆಯುವುದಿಲ್ಲ.

### ಮೀನ ರಾಶಿ

ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ–ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಬಯಸದೆ ಇರುವ ಯಾವುದೇ ಅತಿಥಿ ಇಂದು ನಿಮ್ಮ ಮನೆಗೆ ಬರಬಹುದು , ಅವರು ಬರುವುದರಿಂದಾಗಿ ನೀವು ಬರುವ ತಿಂಗಳಿಗೆ ಮುಂದೂಡಲಾಯಿಸಿರುವ ಮನೆಯ ಆ ವಸ್ತುಗಳ ಮೇಲು ಖರ್ಚು ಮಾಡಬಹುದು . ನಿಮ್ಮ ಮನೆಯಲ್ಲಿ ಸ್ವಲ್ಪ ಸ್ವಚ್ಛತಾ ಕಾರ್ಯವನ್ನು ತಕ್ಷಣ ಕೈಗೊಳ್ಳಬೇಕು.

# ಅಡಿಕೆ ಸಿಪ್ಪೆಯಿಂದ ಕಾಂಪೋಸ್ಟ್ ತಯಾರಿಕೆ ಡಾ|| ಬಿ.ಜಿ. ಯಮುನಾ

**ಚಿಕ್ಕಮಗಳೂರು:** ನಮ್ಮ ರಾಜ್ಯವು ಅಡಿಕೆ ಉತ್ಪಾದನೆಯಲ್ಲಿ ದೇಶದಲ್ಲಿಯೇ ಪ್ರಥಮ ಸ್ಥಾನದಲ್ಲಿದ್ದು, ಆರ್ಥಿಕ ಲಾಭ ತಂದು ಕೊಡುವ ಬೆಳೆಯಾಗಿದೆ ಎಂದು ಮೂಡಿಗೆರೆ ಕೃಷಿ ವಿಜ್ಞಾನ ಕೇಂದ್ರದ ಬೇಸಾಯ ಶಾಸ್ತ್ರದ ವಿಜ್ಞಾನಿ ಡಾ. ಬಿ.ಜಿ. ಯಮುನಾ ಅವರು ಹೇಳಿದ್ದಾರೆ.

ಚಿಕ್ಕಮಗಳೂರು ತಾಲ್ಲೂಕು ಕುನ್ನಾಳು ಗ್ರಾಮದ ಸಾವಯವ ಕೃಷಿಕ ಕೆ.ಹೆಚ್. ಕುಮಾರಸ್ವಾಮಿ ಅವರ ತೋಟದಲ್ಲಿ ಜಿಲ್ಲಾ ತೋಟಗಾರಿಕೆ ಉತ್ಪನ್ನಗಳ ಮಾರಾಟ ಮತ್ತು ಸಂಸ್ಕರಣಾ ಸಹಕಾರ ಸಂಘ ಕೃಷಿ ವಿಜ್ಞಾನ ಕೇಂದ್ರ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಡಿಕೆ ಸಿಪ್ಪೆಯಿಂದ ಸಾವಯವ ಗೊಬ್ಬರ ತಯಾರಿಕೆಯ ಕಾರ್ಯಗಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಡಿಕೆ ಸುಲಿಯುವ ಸಮಯದಲ್ಲಿ ದೊರೆಯುವ ಅಡಿಕೆ ಸಿಪ್ಪೆ ತ್ಯಾಜ್ಯವನ್ನು ಎಲ್ಲೆಂದರಲ್ಲಿ ರಸ್ತೆ ಬದಿಯಲ್ಲಿ ಸುರಿದು ಅಥವಾ ಸುಟ್ಟು ಹಾಕಿ ಪರಿಸರಕ್ಕೆ ಸಮಸ್ಯೆಯುಂಟು ಮಾಡುವ ಬದಲು ಅಡಿಕೆ ಸಿಪ್ಪೆಯು ಒಂದು ಸಾವಯವ ಪದಾರ್ಥವಾಗಿದ್ದು ವ್ಯರ್ಥ ಮಾಡುವ ಬದಲಿಗೆ ಕಾಂಪೋಷಿಣಿಕರಣಗೊಳಿಸಿ ತೋಟದ ಮಣ್ಣಿಗೆ ಸೇರಿಸಿ. ಮಣ್ಣಿನಲ್ಲಿರುವ ಸಾವಯವ ಪ್ರಮಾಣ ಹೆಚ್ಚಿಸಿ ಮಣ್ಣಿನ ನೀರು ಹಿಡಿದಿಡುವ ಶಕ್ತಿ ಪೋಷಕಾಂಶ ಸುಧಾರಣೆ ಆಗಲಿದೆ ಎಂದ ಅವರು. ಅಡಿಕೆ ಸಿಪ್ಪೆಯಿಂದ ಇಷ್ಟೊಂದು ಉಪಯೋಗಗಳು ಇದ್ದರು ಸಹ ಅಡಿಕೆ ಸಿಪ್ಪೆಯನ್ನು ಎಲ್ಲೆಂದರಲ್ಲಿ ಎಸೆದರೆ ಪೋಷಕಾಂಶ ನಷ್ಟ ಆಗುವ ಜೊತೆಗೆ ವಾತಾವರಣ ಕಲುಷಿತಗೊಳ್ಳುತ್ತದೆ ಎಂದರು.

ಅಡಿಕೆ ಸಿಪ್ಪೆಯಲ್ಲಿ ಯಥೇಚ್ಛವಾಗಿ ಲಿಗ್ನಿನ್, ಸೆಲ್ಯುಲೋಸ್, ಹೆಮಿ ಸೆಲ್ಯುಲೋಸ್ ಇರುವುದರಿಂದ ಕಳೆಯುವಿಕೆ ನಿಧಾನ



ವೈಜ್ಞಾನಿಕವಾಗಿ ಒಂದು ವಸ್ತು ಬೇಗ ಕಳೆಯಬೇಕಾದರೆ ಅದರಲ್ಲಿನ ಸಾರಜನಕ ಹಾಗೂ ಇಂಗಾಲ ಅನುಪಾತ 1:30 ರ ಅಸುಪಾಸಿನಲ್ಲಿರಬೇಕು. ಆದರೆ ಅಡಿಕೆ ಸಿಪ್ಪೆಯಲ್ಲಿ ಸರಜನಕ ಹಾಗೂ ಇಂಗಾಲ ಅನುಪಾತ 1:110 ರ ಅಸುಪಾಸಿನಲ್ಲಿದೆ. ಇದನ್ನು ವೈಜ್ಞಾನಿಕವಾಗಿ ತೊಟ್ಟಿಗಳಲ್ಲಿ ಅಥವಾ ಗುಂಡಿಗಳಲ್ಲಿ

ಒಣಗಿದ ಅಡಿಕೆ ಸಿಪ್ಪೆಯನ್ನು ಹಾಕಿ ಯೂರಿಯಾ, ಸೂಕ್ಷ್ಮ ಜೀವಿಗಳ ಮಿಶ್ರಣ ಪದರ ಪದರವಾಗಿ ಹಾಕಿ, ಸಗಣಿ ಬಗ್ಗಡದಿಂದ ಚೆನ್ನಾಗಿ ನೆನೆಸಿ ಮುಚ್ಚಿ 2–3 ದಿನಗಳಿಗೊಮ್ಮೆ ನೀರು ಮತ್ತು ಮಿಶ್ರಣ ಮಾಡಿದರೆ ಉತ್ತಮವಾದ ಕಾಂಪೋಸ್ಟ್ ತಯಾರಿಕೆ ಆಗುತ್ತದೆ ಎಂದು ಹೇಳಿದರು.

ರೈತರು ತಮ್ಮ ತೋಟಗಳಲ್ಲಿ ಈ ಕ್ರಮವನ್ನು ಅನುಸರಿಸಿ ಉತ್ತಮ ಸಾವಯವ ಗೊಬ್ಬರ ತಯಾರಿ ಮಾಡಿಕೊಂಡು ತಾವೇ ತಮ್ಮ ಕೃಷಿಯಲ್ಲಿ ಬಳಸಿದರೆ ಆರ್ಥಿಕವಾಗಿ ಹಾಗೂ ಉತ್ತಮ ಇಳುವರಿ ಪಡೆಯಬಹುದಾಗಿದೆ ಎಂದರು.

ಹಾಪ್ ಕಾಮ್ಸ್ ಅಧ್ಯಕ್ಷರಾದ ಕೆ.ಹೆಚ್. ಕುಮಾರಸ್ವಾಮಿ ಅವರು ಗಿಡಕ್ಕೆ ನೀರು ಹಾಕುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಸುತ್ತಮುತ್ತಲಿನ ರೈತರು ತಮ್ಮ ತೋಟಗಳಲ್ಲಿ ಈ ರೀತಿಯ ಅಡಿಕೆ ಸಿಪ್ಪೆಯ ಹಲವಾರು ಪ್ರಯೋಜನಗಳನ್ನು ಆಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಸಾವಯವ ಕೃಷಿಕರಾದ, ಗರ್ಜಿ ಜಿ.ಎಂ. ಈಶ್ವರಪ್ಪ ಚಂದ್ರಪ್ಪ, ವಿಜಯಕುಮಾರ್, ಮತ್ತಿತರರು ಉಪಸ್ಥಿತರಿದ್ದು, ಈ ಭಾಗದ ಹಲವು ರೈತರು ಕಾರ್ಯಗಾರ ಮತ್ತು ಪ್ರಾತ್ಯಕ್ಷೆ ಕಾರ್ಯಕ್ರಮದಲ್ಲಿ ಭಾಗವಹಸಿದ್ದರು.

## ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿಕಾರಿಪುರ ತೋಟಗಾರಿಕೆ ಇಲಾಖೆಯು 2024–25ನೇ ಸಾಲಿನಲ್ಲಿ ತರಕಾರಿ ಬೆಳೆಯಲು ಉತ್ತೇಜನ ನೀಡುವ ಉದ್ದೇಶದಿಂದ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ರೈತರಿಗೆ ರೂ. 2000/– ಮೊತ್ತದ ತರಕಾರಿ ಬೀಜಗಳ ಕಿಟ್‌ನ್ನು ವಿತರಣೆ ಮಾಡಲಾಗುತ್ತಿದ್ದು, ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ, ಸಣ್ಣ ಮತ್ತು ಅತಿ ಸಣ್ಣ ಹಾಗೂ ಇತರೆ ರೈತರಿಂದ ಅರ್ಜಿ ಆಹ್ವಾನಿಸಿದೆ.ಆಸಕ್ತ ರೈತರು ನಿಗದಿತ ನಮೂನೆ ಅರ್ಜಿಯನ್ನು ಶಿಕಾರಿಪುರ ತೋಟಗಾರಿಕೆ ಇಲಾಖೆಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ಪಹಣಿ, ಆಧಾರ್‌ಕಾರ್ಡ್ ಜೇರಾಕ್, ಬ್ಯಾಂಕ್ ಪಾಸ್ ಬುಕ್ ಜೇರಾಕ್, ಜಾತಿ ಪ್ರಮಾಣ ಪತ್ರ(ಪ.ಜಾ/ಪ.ಪಂ.ದವರಿಗೆ ಮಾತ್ರ) ಗಳನ್ನು ಸಲ್ಲಿಸಿ ಫೆ. 11 ರಿಂದ ತರಕಾರಿ ಬೀಜಗಳ ಕಿಟ್‌ನ್ನು ಪಡೆಯುವಂತೆ ಶಿಕಾರಿಪುರ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಕುವೆಂಪು ರಂಗಮಂದಿರದಲ್ಲಿ ಮೈ ಫ್ಯಾಮಿಲಿ ನಾಟಕ ಪ್ರದರ್ಶನ

**ಶಿವಮೊಗ್ಗ:** ಶಿವಮೊಗ್ಗ ರಂಗಾಯಣದ ಆಯೋಜನೆಯಲ್ಲಿ ಫೆ. 13 ರಂದು ಸಂಜೆ 6.30ಕ್ಕೆ ನಗರದ ಕುವೆಂಪು ರಂಗಮಂದಿರದಲ್ಲಿ ಮೈಸೂರು ರಂಗಾಯಣ ಪ್ರಸ್ತುತಿಯ, ಸತೀಶ್ ತಿಪಟೂರು ರಚನೆಯ, ಗಣೇಶ್ ಹೆಗ್ಗೋಡು ವಿನ್ಯಾಸ ಮತ್ತು ನಿರ್ದೇಶನದ, ಶ್ರವಣ್ ಹೆಗ್ಗೋಡು ಗೊಂಬೆಗಳ ಪರಿಕಲ್ಪನೆ ಮತ್ತು ವಿನ್ಯಾಸದ "ಮೈ ಫ್ಯಾಮಿಲಿ" ನಾಟಕವು ಪ್ರದರ್ಶನಗೊಳ್ಳಲಿದ್ದು, ರಂಗಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ರಂಗಭೂಮಿಯನ್ನು ಪ್ರೋತ್ಸಾಹಿಸುವಂತೆ ಶಿವಮೊಗ್ಗ ರಂಗಾಯಣದ ಆಡಳಿತಾಧಿಕಾರಿ ಡಾ. ಶೈಲಜಾ ಎ.ಸಿ. ಪ್ರಕಟಣೆಯಲ್ಲಿ ಕೋರಿರುತ್ತಾರೆ.ಟಿಕೇಟ್ ದರ ಒಬ್ಬರಿಗೆ ರೂ. 30/– ಇದ್ದು, ಹನ್ನೆರಡು ವರ್ಷದೊಳಗಿನ ಮಕ್ಕಳಿಗೆ ಉಚಿತ ಪ್ರವೇಶವಿರುತ್ತದೆ.

## ಆಕ್ಷೇಪಣೆ ಸಲ್ಲಿಕೆಗೆ ಅಹ್ವಾನ

**ದಾವಣಗೆರೆ:** 2023ರ ಮುಂಗಾರು ಹಂಗಾಮಿನಲ್ಲಿ ರೈತರು ಸಲ್ಲಿಸಿದ್ದ ಪ್ರಸ್ತಾವನೆಗಳನ್ನು ವಿಮಾ ಸಂಸ್ಥೆಯವರು ಪರಿಶೀಲಿಸಿ ದಾವಣಗೆರೆ ತಾಲ್ಲೂಕಿನಲ್ಲಿ 2023–24ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ 280 ರೈತರ ವಿಮಾ ಪಾಲಿಸಿ ತಿರಸ್ಕರಿಸಲಾಗಿದ್ದು. ವಿಮೆ ಮಾಡಿಸಿರುವ ರೈತರು ಆಕ್ಷೇಪಣೆಗಳನ್ನು ಮೂಲ ದಾಖಲೆಗಳಾದ 2023–24ರ ಪಹಣಿ, ಬೆಂಬಲ ಬೆಲೆಯ ರಶೀದಿ, ಎಪಿಎಂಸಿ ಮಾರುಕಟ್ಟೆಯ ದಾಖಲೆ ರಸೀದಿಯನ್ನು ಫೆಬ್ರವರಿ 28 ರೊಳಗೆ ಸಲ್ಲಿಸಲು ತಿಳಿಸಲಾಗಿದೆ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಲು ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ನಟನಂ ಕಲಾ ಸಂಸ್ಕೃತಿ ಉತ್ಸವ– 2025" ಕಾರ್ಯಕ್ರಮದ ನಾಟ್ಯಸಂಭ್ರಮ



ಶಿವಮೊಗ್ಗ: ಶಿವಮೊಗ್ಗ ರಾಜೇಂದ್ರ ನಗರದ ಪ್ರತಿಷ್ಠಿತ ನಟನಂ ಬಾಲ ನಾಟ್ಯ ಕೇಂದ್ರವು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಕರ್ನಾಟಕ ಕಲಾಶ್ರೀ ವಿದ್ವಾನ್ ಡಾ.ಎಸ್. ಕೇಶವಕುಮಾರ್ ಪಿಳ್ಳೈ ಅವರ ನೇತೃತ್ವದಲ್ಲಿ ಆಯೋಜಿಸಿದ್ದ "ನಟನಂ ಕಲಾ ಸಂಸ್ಕೃತಿ ಉತ್ಸವ–2025" ಕಾರ್ಯಕ್ರಮದಲ್ಲಿ ನಾಟ್ಯಸಂಭ್ರಮ ಮನಮೋಹಕವಾಗಿತ್ತು.

ಇದರಲ್ಲಿ ವಿಶೇಷವಾಗಿ ಒಡಿಸ್ಸಿ ನೃತ್ಯವನ್ನು ಬೆಂಗಳೂರಿನ ನವಭಾವ ನೃತ್ಯ ಶಾಲೆಯ ಫೌಂಡರ್ ಗುರು ಸೌಮ್ಯ ರಂಗಸ್ವಾಮಿ, ಬೆಂಗಳೂರಿನ ನಾಟ್ಯಪ್ರಿಯ ಕಲಾನಿಕೇತನ ಕೇಂದ್ರದ ಫೌಂಡರ್ ವಿದುಷಿ ಸುಪ್ರಿಯ ಕಾರ್ತಿಕೇಯನ್ ಕೂಚುಪುಡಿ ನೃತ್ಯ,

ಮೋಹಿನಿ ಆಟಂ ನಾಟ್ಯವನ್ನು ಶಿವಮೊಗ್ಗ ಬೊಮ್ಮನಕಟ್ಟೆಯ ಶ್ರೀ ಶಿವಾನಿ ಭರತನಾಟ್ಯ ಕಲಾ ಕೇಂದ್ರದ ವಿದುಷಿ ಚೈತ್ರ ಕಾರ್ತಿಕ್, ಭರತನಾಟ್ಯಂ ಅನ್ನು ನಟನಂ ಕೇಂದ್ರದ ವಿಧುಷಿ ನಾಟ್ಯಶ್ರೀ ಚೇತನ್ ಹಾಗೂ ವಿದ್ವಾನ್ ಚೇತನ್ ಎಸ್. ಸಿ. ಬೆಂಗಳೂರಿನ ರಾಜರಾಜೇಶ್ವರಿ ನಗರದ ನಾಟ್ಯಶಂಕರ ನೃತ್ಯಾಲಯದ ವಿದ್ವಾನ್ ಮಾಲತೇಶ್ ಟಿಕಾರೆ ಪ್ರದರ್ಶಿಸಿದರು.

ವಿಶೇಷ ಆಕರ್ಷಣೆಯಾಗಿ ದಕ್ಷ ಯಜ್ಞ ನೃತ್ಯ ರೂಪಕವನ್ನ ವಿದ್ವಾನ್ ಡಾ. ಎಸ್. ಕೇಶವಕುಮಾರ್ ಪಿಳ್ಳೈ ಪ್ರದರ್ಶಿಸಿದ್ದು. ಈ ಸಂದರ್ಭದಲ್ಲಿ ಜಪಾನಿನ ಫ್ಯಾನ್ ಡ್ಯಾನ್ಸ್ ಹಾಗೂ ಈಜಿಪ್ಟಿನ ವಿಂಗ್ ಡ್ಯಾನ್ಸನ್ನು ಕಲಾವಿದರು ಪ್ರದರ್ಶಿಸಿ ಅಭಿಮಾನಿಗಳ ಮೆಚ್ಚುಗೆ ಗಳಿಸಿದರು.

# ಸುಸಂಪನ್ನಗೊಂಡ ಶ್ರೀ ಗಾಯತ್ರಿ ಪೂಜೆ, ಉಪಾಸನೆ



**ದಾವಣಗೆರೆ:** ದಾವಣಗೆರೆಯ ಆಧ್ಯಾತ್ಮ ಪರಂಪರೆಯ ಕ್ರಿಯಾತ್ಮಕ ಸಂಸ್ಥೆ ಶ್ರೀ ಗಾಯತ್ರಿ ಪರಿವಾರದ ಆಶ್ರಯದಲ್ಲಿ ಪ್ರತೀ ತಿಂಗಳು ಹುಣ್ಣಿಮೆಯಂದು ನಿರಂತರ 25 ವರ್ಷಗಳಿಂದ ನಡೆದು ಬಂದ ಶ್ರೀ ಗಾಯತ್ರಿ ಪೂಜೆ ಉಪಾಸನೆ ಭಾರತ ಹುಣ್ಣಿಮೆ ಪ್ರಯುಕ್ತ ನಗರದ ಜಯದೇವ ವೃತ್ತದಲ್ಲಿರುವ ಶ್ರೀ ಶಂಕರಮಠದ ಸಭಾಂಗಣದಲ್ಲಿ ನಡೆದ ಈ ಧಾರ್ಮಿಕ ಸೇವೆ ಪೂಜೆ ಸುಸಂಪನ್ನಗೊಂಡಿತು ಎಂದು ಪರಿವಾರದ ಪ್ರಧಾನ ಕಾರ್ಯದರ್ಶಿ ಸಾಲಿಗ್ರಾಮ ಗಣೇಶ್‌ಶೆಣೈ ತಿಳಿಸಿದ್ದಾರೆ.

ಈ ಅಪ್ಪಟ ಆಧ್ಯಾತ್ಮ ಸಮಾರಂಭದ ಪೂಜಾ ಸೇವಾಕರ್ತರಾದ ಬಿ. ಸತ್ಯನಾರಾ ಯಣಮೂರ್ತಿ ಸೇರಿದಂತೆ ಶ್ರೀ ಗಾಯತ್ರಿ ಪರಿವಾರದ ಅಧ್ಯಕ್ಷರಾದ ಡಾ. ರಮೇಶ್ ಪಟೇಲ್, ಖಜಾಂಚಿ ಪುರುಷೋತ್ತಮ ಪಟೇಲ್, ಗೌರವ ಅಧ್ಯಕ್ಷರಾದ ಕೆ.ಹೆಚ್. ಮಂಜುನಾಥ್, ಸಂಚಾಲಕರಾದ ಭಾವನ್ನಾರಾಯಣ, ವಿಕ್ರಂಜೈನ್, ಸತೀಶ್ ಆರ್. ಎಂ., ವಿ.ಕೃಷ್ಣಮೂರ್ತಿ, ಸಮಿತಿ ಸದಸ್ಯರಾದ ಶ್ರೀಮತಿ ನಿರ್ಮಲಾ ಜನಾರ್ಧನ ಗುಪ್ತಾ ದಂಪತಿಗಳು, ವೀರಭದ್ರಪ್ಪ ದಂಪತಿಗಳು ಮುಂತಾದವರು ಉಪಸ್ಥಿತರಿದ್ದರು.

# ಪ್ರತಿ ಬಾಲ್ಯ ವಿವಾಹ ಪ್ರಕರಣವನ್ನು ಹಾಟ್‌ಸ್ಪಾಟ್ ಎಂದು ಪರಿಗಣಿಸಿ : ಗುರುದತ್ತ ಹೆಗಡೆ

**ಶಿವಮೊಗ್ಗ:** ಜಿಲ್ಲೆಯಲ್ಲಿ ಎಲ್ಲೇ ಬಾಲ್ಯ ವಿವಾಹ ಪ್ರಕರಣ ನಡೆದರೂ ಅದನ್ನು ಹಾಟ್‌ಸ್ಪಾಟ್ ಎಂದು ಪರಿಗಣಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ಸಮುದಾಯವನ್ನೊಳಗೊಂಡ ಪರಿಣಾಮಕಾರಿ ಕ್ರಮ ಕೈಗೊಂಡು ಶಾಶ್ವತ ಪರಿಹಾರಕ್ಕೆ ಒತ್ತು ನೀಡಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ವಿವಿಧ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ಒಂದು ಬಾಲ್ಯ ವಿವಾಹ ಪ್ರಕರಣವನ್ನು ಹಾಟ್‌ಸ್ಪಾಟ್ ಎಂದು ಪರಿಗಣನೆಗೆ ತೆಗೆದುಕೊಂಡು ಚಟುವಟಿಕೆ ಕೈಗೊಳ್ಳಬೇಕು. ಶಾಶ್ವತ ಪರಿಹಾರ ಒದಗುವಂತಹ ಕ್ರಮ ಕೈಗೊಳ್ಳಬೇಕು. ಸ್ಥಳೀಯ ಮುಖಂಡರು, ಧಾರ್ಮಿಕ ಮುಖಂಡರು, ಜನಪ್ರತಿನಿಧಿಗಳು ಮತ್ತು ಪ್ರಭಾವಿ ವ್ಯಕ್ತಿಗಳ ಸಹಾಯ ತೆಗೆದುಕೊಂಡು ಸಮುದಾಯದಲ್ಲಿ ಮತ್ತು ಪೋಷಕರಲ್ಲಿ ಅರಿವು ಮೂಡಿಸುವಂತಾಗಬೇಕು. ಬಾಲ್ಯ ವಿವಾಹ ತಡೆಯುವಲ್ಲಿ ಶ್ರಮಿಸಿದ ಮುಖಂಡರು, ಪ್ರೇರಕರನ್ನು ಗೌರವಿಸಬೇಕು. ಸ್ಥಳೀಯವಾಗಿ ಕಾರ್ಯವೆಸಗುವ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರನ್ನು ಸದ್ಬಳಕೆ ಮಾಡಿಕೊಂಡು ಅವರನ್ನೂ ಗೌರವಿಸಬೇಕು.

ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಬಾಲ್ಯ ವಿವಾಹ ತಡೆ ಕಾರ್ಯದೊಂದಿಗೆ ಸಮುದಾಯಗಳಲ್ಲಿ ಶಾಶ್ವತವಾಗಿ ಬಾಲ್ಯ ವಿವಾಹ ತಡೆಯುವ ಚಟುವಟಿಕೆಗಳನ್ನು ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಹಾಗೂ ಪ್ರಾಥಮಿಕ ಹಂತದ ಶಾಲೆಗಳಿಂದ ಹಿಡಿದು ಶೈಕ್ಷಣಿಕ ಸಂಸ್ಥೆಗಳಲ್ಲಿ ಪ್ರತಿ ದಿನ ಪೋಕ್ಸೋ ಮತ್ತು ಬಾಲ್ಯ ವಿವಾಹ ಜಾಗೃತಿ ಕುರಿತು ಪ್ರತಿಜ್ಞಾ ವಿಧಿ ಬೋಧನೆ, ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮದಡಿ ಕಾರ್ಯಾಗಾರ ಸೇರಿದಂತೆ ಉತ್ತಮ ಫಲಿತಾಂಶ ಬರುವಂತಹ, ಶಾಶ್ವತ ಪರಿಹಾರ ಒದಗುವಂತಹ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕು. ಜಿಲ್ಲಾಡಳಿತದಿಂದ ಸಹ ಬಾಲ್ಯ ವಿವಾಹ ತಡೆಗೆ



ಸಹಕರಿಸಿದ ಪ್ರೇರಕರು, ಮುಖಂಡರನ್ನು ಗೌರವಿಸಲಾಗುವುದು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುನಾಥ್, ಜಿಲ್ಲೆಯಲ್ಲಿ 2024 ರ ಏಪ್ರಿಲ್ ನಿಂದ ಡಿಸೆಂಬರ್ ಅಂತ್ಯದವರೆಗೆ ಬಾಲ್ಯ ವಿವಾಹದ ಬಗ್ಗೆ ಒಟ್ಟು 89 ದೂರುಗಳನ್ನು ಸ್ವೀಕರಿಸಲಾಗಿದ್ದು ಒಟ್ಟು 26 ಬಾಲ್ಯ ವಿವಾಹ ತಡೆಯಲಾಗಿದೆ. 63 ಬಾಲ್ಯ ವಿವಾಹ ನಡೆದಿದೆ.

ಅಂಗನವಾಡಿ ಕೇಂದ್ರಗಳಿಗೆ ಗ್ರಾಮೀಣ ಭಾಗದಲ್ಲಿ 145 ಸೇರಿದಂತೆ ಒಟ್ಟು 258 ನಿವೇಶನಗಳ ಅಗತ್ಯವಿದ್ದು, ಗ್ರಾಮೀಣ ಭಾಗದಲ್ಲಿ ಆದ್ಯತೆಯಲ್ಲಿ ತಹಶೀಲ್ದಾರರು ನಿವೇಶನ ಗುರುತಿಸಿ ಒದಗಿಸಲು ಸೂಚಿಸಿದರು.

ಪ್ರಧಾನ ಮಂತ್ರಿ ಮಾತೃ ವಂದನ ಯೋಜನೆಗೆ ಆರೋಗ್ಯ ಇಲಾಖೆಯಿಂದ ತಾಯಿ ಕಾರ್ಡ್ ಸರಬರಾಜಿನಲ್ಲಿ ಕೊರತೆಯಿದ್ದು,

ಶೀಘ್ರವಾಗಿ ಪೂರೈಸಬೇಕು. ಹಾಗೂ ರಾಜ್ಯ ಮಹಿಳಾ ನಿಲಯದ ನಿವಾಸಿಗಳಿಗೆ ಔಷಧಿ ಮತ್ತು ಮಾತ್ರೆಗಳನ್ನು ಬೇಡಿಕೆಯನ್ವಯ ಆರೋಗ್ಯ ಇಲಾಖೆಯಿಂದ ಸರಬರಾಜು ಮಾಡಲು ಕ್ರಮ ವಹಿಸುವಂತೆ ಡಿಹೆಚ್‌ಓ ರವರಿಗೆ ಸೂಚನೆ ನೀಡಿದರು.

ಜಿಲ್ಲೆಯ ಸ್ತ್ರೀಶಕ್ತಿ ಭವನಗಳ ದುರಸ್ತಿ, ಮಳಿಗೆಗಳ ಮರು ಹಂಚಿಕೆ, ಒಕ್ಕೂಟಗಳ ಪುನರ್ ರಚನೆ ಕಾರ್ಯ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣಪ್ಪ ಮಾತನಾಡಿ, ಲೈಂಗಿಕ ಕಾರ್ಯಕರ್ತರು/ ಲೈಂಗಿಕ ಶೋಷಣೆಗೊಳಗಾದವರ ಪುನರ್ವಸತಿಗಾಗಿ ಚೇತನ ಯೋಜನೆಯಡಿ ಪ್ರತಿ ಫಲಾನುಭವಿಗೆ ನೇರವಾಗಿ ರೂ. 30,000 ಪ್ರೋತ್ಸಾಹ ನೀಡಲಾಗುತ್ತಿದೆ. ಅದರಂತೆ ಜಿಲ್ಲೆಯಲ್ಲಿ ಈವರಗೆ ರೂ.3 ಲಕ್ಷ ಬಿಡುಗಡೆಯಾಗಿದೆ. ಇತರರಿಗೆ ರೂ. 1,50,000, ಎಸ್‌ಸಿ ರೂ. 90 ಸಾವಿರ, ಎಸ್‌ಟಿ ರೂ. 60 ಸಾವಿರ, ಪ್ರೋತ್ಸಾಹ ಧನ ನೀಡಲಾಗಿದೆ.2024–25 ನೇ ಸಾಲಿನ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಯಡಿ 87 ಪ್ರಕರಣಗಳು ಬಾಕಿ ಇದ್ದು, ಇದರಲ್ಲಿ ಸಂರಕ್ಷಣಾಧಿಕಾರಿಗಳ ಬಳಿ 40 ಹಾಗೂ ನ್ಯಾಯಾಲಯದಲ್ಲಿ 47 ಪ್ರಕರಣಗಳು ಬಾಕಿ ಇವೆ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಶಿರೇಖಾ ಮಾತನಾಡಿ, ರಾಜ್ಯ ಮಹಿಳಾ ನಿಲಯದಲ್ಲಿ 81 ಮಾನಸಿಕ ಅಸ್ವಸ್ಥರು ನಿವಾಸಿಯಾಗಿರುತ್ತಾರೆ. ಪ್ರಸ್ತುತ ಸಂಸ್ಥೆಯ ದುರಸ್ತಿ ಕಾಮಗಾರಿ ಪ್ರಗತಿಯಲ್ಲಿದೆ . ನಿಲಯಕ್ಕೆ ಓರ್ವ ನರ್ಸ್ ನಿಯೋಜನೆ ಹಾಗೂ ಸಾಗರ ಸಖಿ ಒನ್ ಸ್ಟಾಪ್ ಸೆಂಟರ್‌ಗೆ ಖಾಯಂ ಪೊಲೀಸ್ ನಿಯೋಜನೆ ಮಾಡುವಂತೆ ಕೋರಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸುಜಾತಾ, ಡಿಹೆಚ್‌ಓ ಡಾ.ನಟರಾಜ್, ನಿರೂಪಣಾಧಿಕಾರಿ ಡಾ.ಸಂತೋಷ್ ಕುಮಾರ್, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ತಾಜುದ್ದೀನ್ ಖಾನ್, ತಾಲ್ಲೂಕುಗಳ ಸಿಡಿಪಿಓ, ಇತರೆ ಅಧಿಕಾರಿಗಳು ಹಾಜರಿದ್ದರು.

## ಮಾಹಿತಿ ಆಯೋಗ ನ್ಯಾಯಾಲಯ ಪೀಠ– 2 ರಲ್ಲಿ ಫೆ.12 ರಂದು ವಿಚಾರಣೆ

**ಬೆಂಗಳೂರು :** ಕರ್ನಾಟಕ ಮಾಹಿತಿ ಆಯೋಗ ನ್ಯಾಯಾಲಯ ಪೀಠ–2 ರ ವಿಚಾರಣೆಯನ್ನು ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿರುವ ಆಯೋಗದ ಪೀಠದಲ್ಲಿ ನಾಳೆ ಫೆ.12 ರಂದು ಏರ್ಪಡಿಸಲಾಗಿದೆ.ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಗೂ ಕಕ್ಷಿದಾರರು ಹಾಜರಾಗಬಹುದು.ಈ ಹಿಂದೆ ಕಳುಹಿಸಿದ್ದ ನೋಟಿಸಿನಲ್ಲಿ ಬೆಳಗಾವಿ ಪೀಠ ಎಂದು ನಮೂದಿಸಿರುವುದನ್ನು ಕರ್ನಾಟಕ ಮಾಹಿತಿ ಆಯೋಗದ ನ್ಯಾಯಾಲಯ ಪೀಠ –2 ಎಂದು ಓದಿಕೊಳ್ಳಲು ಆಯೋಗದ ಕಾರ್ಯದರ್ಶಿಗಳಾದ ಸುಷಮಾ ಗೋಡಬೋಲೆ ಅವರು ಪ್ರಕಟಣೆ ಮೂಲಕ ಕೋರಿದ್ದಾರೆ.

## ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಗದಗ:** ಪ್ರತಿ ವರ್ಷ ಏಪ್ರಿಲ್ 05 ರಂದು ಡಾ. ಬಾಬು ಜಗಜೀವನರಾಮರವರ ಹಾಗೂ ಏಪ್ರೀಲ್ 14 ರಂದು ಡಾ. ಬಿ ಆರ್ ಅಂಬೇಡ್ಕರ್ ರವರ ಜನ್ಮ ದಿನಾಚರಣೆಯನ್ನು ರಾಜ್ಯ ಮಟ್ಟದಲ್ಲಿ ಸರ್ಕಾರದ ವತಿಯಿಂದ ವಿಜೃಂಭಣೆಯಿಂದ ಆಚರಿಸಲಾಗುತ್ತದೆ.

ಈ ಸಂದರ್ಭದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಜನಾಂಗದವರ ಶ್ರೇಯಸ್ಸಿಗಾಗಿ ಪ್ರೋತ್ಸಾಹಿಸಿ ಶ್ರಮಿಸಿ, ಗಣನೀಯ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿಗಳನ್ನು ಗುರುತಿಸಿ 2025–26ನೇ ಸಾಲಿನಲ್ಲಿ ಡಾ. ಬಾಬು ಜಗಜೀವನರಾಮ್ ಹಾಗೂ ಡಾ. ಬಿಆರ್ ಅಂಬೇಡ್ಕರ್ ಪ್ರಶಸ್ತಿಗಳನ್ನು ನೀಡಿ ಗೌರವಿಸಲು ಉದ್ದೇಶಿಸಲಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸಮುದಾಯದವರು ಮತ್ತು ಸಾರ್ವಜನಿಕರು ಡಾ. ಬಾಬು ಜಗಜೀವನರಾಮ್ ಹಾಗೂ ಡಾ. ಬಿಆರ್ ಅಂಬೇಡ್ಕರ್‌ರವರ ಪ್ರಶಸ್ತಿಗಳಿಗೆ ಅರ್ಜಿ ಸಲ್ಲಿಸಲು ಕೋರಿದ್ದು, ಭರ್ತಿ ಮಾಡಿದ ಅರ್ಜಿಗಳನ್ನು ಉಪನಿರ್ದೇಶಕರ ಕಛೇರಿ ಸಮಾಜ ಕಲ್ಯಾಣ ಇಲಾಖೆ ಗದಗ, ಇಲ್ಲಿ ದಿನಾಂಕ:25–02–2025 ರೊಳಗೆ ಸಲ್ಲಿಸಲು ಕೋರಿದೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಛೇರಿ ಸಮಾಜ ಕಲ್ಯಾಣ ಇಲಾಖೆ ಗದಗ ಇಲ್ಲಿ ಸಂಪರ್ಕಿಸಲು ಕೋರಿದೆ.

## ಕರ್ನಾಟಕ ಮಹಿಳಾ ಸಹಕಾರ ಬ್ಯಾಂಕ್‌ನಅಧ್ಯಕ್ಷರಾಗಿ ಬಿ.ಸಿ.ಗೀತಾ ಅವಿರೋಧಆಯ್ಕೆ

**ಚಿಕ್ಕಮಗಳೂರು ಎಕ್ಸ್‌ಪ್ರೆಸ್ :** ಕರ್ನಾಟಕ ಮಹಿಳಾ ಸಹಕಾರ ಬ್ಯಾಂಕ್ ಸ. ಚಿಕ್ಕಮಗಳೂರು ಇದರ ಆಡಳಿತ ಮಂಡಳಿಗೆ ಚುನಾವಣೆಯುಫೆಬ್ರವರಿ 02ರಂದುನಡೆದಿದ್ದು, ಬ್ಯಾಂಕಿನ ಆಡಳಿತ ಮಂಡಳಿಗೆ ಎಲ್ಲಾ ಸದಸ್ಯರುಅವಿರೋಧವಾಗಿಆಯ್ಕೆಯಾಗಿರುತ್ತಾರೆ ಮತ್ತು ಮುಂದಿನ 5 ವರ್ಷಗಳ ಅವಧಿಗೆ ಬ್ಯಾಂಕಿನಅಧ್ಯಕ್ಷರಾಗಿಕುಮಾರಿ ಬಿ.ಸಿ.ಗೀತಾರವರು ಹಾಗೂ ಉಪಾಧ್ಯಕ್ಷರಾಗಿ ಸುಧಾ.ಹೆಚ್.ಆರ್‌ರವ 'ರುಅವಿರೋಧವಾಗಿಆಯ್ಕೆಯಾಗಿದ್ದಾರೆಎಂದು ಸಹಕಾರ ಸಂಘಗಳ ಉಪನಿಬಂಧಕರು ಹಾಗೂ ರಿಟರ್ನಿಂಗ್‌ಆಫೀಸರ್ ಡಾ.ತೇಜಸ್ವಿನಿ ಡಿ.ಎಸ್‌ರವರು ಘೋಷಿಸಿರುತ್ತಾರೆ.ಈ ಸಂದರ್ಭದಲ್ಲಿ ಬ್ಯಾಂಕಿನ ನಿರ್ದೇಶಕರುಗಳಾದ.ಸುಜಾತ ಕೃಷ್ಣಮೂರ್ತಿ,.ಕಮಲಾ ಬಸವರಾಜ್, ಜಯಶ್ರೀನಂಜರಾಜ್, ಜಯಲಕ್ಷ್ಮೀ ಟಿ.ಪಿ. ಸೌಭಾಗ್ಯ ಗೋಪಾಲನ್, ಬನಶಂಕರಿಜೋಷಿ, ತಾರ ಮೋಹನ್, ಆಶಾ ಹೆಚ್.ಓ, ಕವಿತ ಎಂ ರಾಹುಲ್ ನಾಯಕ್, ಮೀನಾ.ಪಿ, ಸ್ಮಿತ ಬಿ.ಎಮ್, ಸೌಜನ್ಯಕೆ.ಆರ್ ಹಾಜರಿದ್ದರು.

# ಅಮೆರಿಕದ ಅಮಾನವೀಯ ವರ್ತನೆ: ಸಂಸತ್ತಿನ ಉಭಯ ಸದನಗಳಲ್ಲಿ ಗದ್ದಲ

ನವದೆಹಲಿ: ಅಕ್ರಮ ವಲಸೆಹೋಗಿರುವ ಭಾರತೀಯರ ಜತೆ ಅಮೆರಿಕದ 'ಅಮಾನವೀಯ ವರ್ತನೆ'ಯುಸಂಸತ್ತಿನಲ್ಲಿ ಗುರುವಾರ ಪ್ರತಿಧ್ವನಿಸಿತು. ಈ ವಿಚಾರದಲ್ಲಿ ಕೇಂದ್ರ ಸರ್ಕಾರದ ಸ್ಪಷ್ಟನೆ ಕೋರಿ ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ವಿರೋಧ ಪಕ್ಷಗಳು ಭಾರಿ ಪ್ರತಿಭಟನೆ ನಡೆಸಿದವು.

ವಲಸಿಗರಿಗೆ ಕೈಕೋಳ ತೊಡಿಸಿದ ಕ್ರಮವನ್ನು ವಿರೋಧಿಸಿ ವಿಪಕ್ಷಗಳ ಸದಸ್ಯರು ಸ್ಪೀಕರ್ ಪೀಠದ ಮುಂದೆ ಪ್ರತಿಭಟನೆ ನಡೆಸಿದ್ದರಿಂದ ಲೋಕಸಭೆ ಕಲಾಪವನ್ನು ನಾಲ್ಕು ಸಲ ಮುಂದೂಡಲಾಯಿತು.

ಬೆಳಿಗ್ಗೆ ಪ್ರಶ್ನೋತ್ತರ ಅವಧಿಯಲ್ಲಿ ಕಲಾಪವನ್ನು ಮೊದಲ ಬಾರಿ ಮುಂದೂಡಿದರೆ, ಆ ಬಳಿಕ ಮಧ್ಯಾಹ್ನ 12 ಮತ್ತು 2ಕ್ಕೆ ಮುಂದೂಡಲಾಯಿತು. ವಿದೇಶಾಂಗ ವ್ಯವಹಾರಗಳ ಸಚಿವರು ಮಧ್ಯಾಹ್ನ 3.30ಕ್ಕೆ ಲೋಕಸಭೆಯಲ್ಲಿ ಹೇಳಿಕೆ ನೀಡುವರು ಎಂದು ಸಚಿವ ಅರ್ಜುನ್ ರಾಮ್ ಮೇಘವಾಲ್ ತಿಳಿಸಿದರು.

ವಿಪಕ್ಷಗಳ ಸದಸ್ಯರ ಗದ್ದಲದ ನಡುವೆಯೇ ಎಸ್. ಜೈ ಶಂಕರ್ ಅವರು ಮಧ್ಯಾಹ್ನ 3.30ಕ್ಕೆ ಪ್ರಕಟಣೆ ಓದಿದರು. ಆ ಬಳಿಕವೂ ಗದ್ದಲ ಮುಂದುವರಿದ ಕಾರಣ ಸ್ಪೀಕರ್ ಓಂ ಬಿರ್ಲಾ ಅವರು ಕಲಾಪವನ್ನು ದಿನದ ಮಟ್ಟಿಗೆ ಮುಂದೂಡಿದರು.

ಅವಮಾನ ಸಹಿಸದು:

ಭಾರತೀಯರಿಗೆ ಆಗಿರುವ ಅವಮಾನವನ್ನು 'ಇಂಡಿಯಾ' ಮೈತ್ರಿಕೂಟ ಸಹಿಸದು ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದರು. ಅಮೆರಿಕವು ವಾಪಸ್ ಕಳುಹಿಸಿದ ವಲಸಿಗರಲ್ಲಿ ಒಬ್ಬರುಮಾಡಿರುವ ವಿಡಿಯೊಹಂಚಿಕೊಂಡ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, 'ಪ್ರಧಾನಿ ಅವರೇ , ಈ ವ್ಯಕ್ತಿಯ ನೋವನ್ನು

ಆಲಿಸಿ. ಭಾರತೀಯರು ಘನತೆ ಮತ್ತು ಮಾನವೀಯತೆಗೆ ಅರ್ಹರು.

ಕೈಕೋಳಕ್ಕೆ ಅರ್ಹರಲ್ಲ' ಎಂದು ಹೇಳಿದರು.

'ಅಮೆರಿಕದಲ್ಲಿ ಅಕ್ರಮವಾಗಿ ನೆಲಸಿರುವ ತನ್ನ ದೇಶದ ಪ್ರಜೆಗಳನ್ನು ಕರೆಸಿಕೊಳ್ಳಲು ಕೊಲಂಬಿಯಾವು ವಿಶೇಷ ವಿಮಾನವನ್ನು ಕಳುಹಿಸಿದೆ. ಭಾರತ ಏಕೆ ಅಂತಹ ಕೆಲಸ ಮಾಡಿಲ್ಲ' ಎಂದು ರಾಜ್ಯಸಭೆ




ಸದಸ್ಯರಾದ ರಣದೀಪ್ ಸುರ್ಜೇ ವಾಲಾ, ಸಾಕೇತ್ ಗೋಖಲೆ ಮತ್ತು ಜಾನ್ ಬ್ರಿಟ್ಟಾಸ್ ಅವರು ಪ್ರಶ್ನಿಸಿದರು.

ಕೈಗಳಿಗೆ ಸರಪಳಿ ಬಿಗಿದು ಪ್ರತಿಭಟನೆ

ವಲಸಿಗರನ್ನು ಕೆಟ್ಟದಾಗಿ ನಡೆಸಿಕೊಂಡದ್ದನ್ನು ಖಂಡಿಸಿ ವಿರೋಧ ಪಕ್ಷಗಳ ನಾಯಕರು ಗುರುವಾರ ಕಲಾಪಕ್ಕೂ ಮುನ್ನ ಸಂಸತ್ ಭವನದ ಆವರಣದಲ್ಲಿ ಪ್ರತಿಭಟನೆ ನಡೆಸಿದರು.ಕಾಂಗ್ರೆಸ್ ಮುಖಂಡರಾದ ಮಲ್ಲಿಕಾರ್ಜುನ ಖರ್ಗೆ , ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರಾ, ಎಸ್ಪಿ ಮುಖ್ಯಸ್ಥ ಅಖಿಲೇಶ್ಯಾದವ್, ಎಡ ಪಕ್ಷಗಳ ಸದಸ್ಯರು ಪ್ರತಿಭಟನೆಯಲ್ಲಿ ಪಾಲ್ಗೊಂಡರು. ಕೆಲವು ಸಂಸದರು ತಮ್ಮ ಕೈಗಳಿಗೆ ಸಾಂಕೇತಿಕವಾಗಿ ಸರಪಳಿ ಬಿಗಿದು ಪ್ರತಿಭಟಿಸಿದರು.

ವಲಸಿಗರ ನೆರವಿಗೆಹೊಸ ಕಾನೂನು

ಉದ್ಯೋಗಕ್ಕಾಗಿ ವಿದೇಶಕ್ಕೆ ತೆರಳುವವರ 'ಸುರಕ್ಷಿತ ಮತ್ತು ಕ್ರಮಬದ್ಧ ವಲಸೆ'ಗೆ ನೆರವಾಗಲುಹೊಸ ಕಾನೂನು ಜಾರಿಗೆ ಸರ್ಕಾರ ಗಂಭೀರ ಚಿಂತನೆ ನಡೆಸಿದೆ.ಪ್ರಸ್ತಾವಿತ 'ಸಾಗರೋತ್ತರ ಸಂಚಾರ (ನೆರವು ಮತ್ತು ಕಲ್ಯಾಣ) ಮಸೂದೆ'ಯು1983ರ ವಲಸೆ ಕಾಯ್ದೆಯ ಬದಲಿಗೆ ಜಾರಿಯಾಗಲಿದ್ದು, ಉದ್ಯೋಗಕ್ಕಾಗಿ ವಿದೇಶಕ್ಕೆ ವಲಸೆ ಹೋಗುವವರ ಪ್ರಯಾಣವನ್ನು ಸುಗಮಗೊಳಿಸಲಿದೆ.

ಕಾಂಗ್ರೆಸ್ ಸಂಸದ ಶಶಿ ತರೂರ್ ಅಧ್ಯಕ್ಷತೆಯ ವಿದೇಶಾಂಗ ವ್ಯವಹಾರಗಳ ಸಂಸದೀಯ ಸಮಿತಿಯುಸೋಮವಾರ ಸಂಸತ್ತಿನಲ್ಲಿ ಮಂಡಿಸಿದ ವರದಿಯಲ್ಲಿ ಈ ಮಸೂದೆಗೆ ಸಂಬಂಧಿಸಿದ ವಿವರ ಇದೆ.

## ಸ್ವಚ್ಛತೆ ಕಾಪಾಡುವುದು ಎಲ್ಲರ ಕರ್ತವ್ಯ



ಚಿಕ್ಕಮಗಳೂರು: ಮನೆ ಸುತ್ತಮುತ್ತಲು ಸ್ವಚ್ಛತೆ ಕಾಪಾಡುವ ಮೂಲಕ ರೋಗ ರುಜಿನ ದೂರವಿರಿಸಬೇಕು. ಆರೋಗ್ಯಪೂರ್ಣ ಸಮಾಜ ನಿರ್ಮಿಸುವಲ್ಲಿ ಪ್ರತಿಯೊಬ್ಬರು ಕೈಜೋಡಿಸಬೇಕು ಎಂದು ನಗರಸಭಾ ಸದಸ್ಯ ಅರುಣ್‌ಕುಮಾರ್ ಹೇಳಿದರು.ಕಲ್ಯಾಣನಗರದಲ್ಲಿ ನಗರ ವೆಲ್ಫೇರ್ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ ಬೀದಿಬದಿ ಸ್ವಚ್ಛತಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮನುಷ್ಯ ಶಾರೀರಿಕವಾಗಿ ಶುದ್ಧವಾಗುವ ಜೊತೆಗೆ ಮನೆಯಂಗಳ ಹಾಗೂ ಸುತ್ತಮುತ್ತಲು ಸ್ವಚ್ಛತೆ ಕಾಪಾಡುವುದನ್ನು ಕರ್ತವ್ಯವೆಂದು ಭಾವಿಸಬೇಕು. ಅಕ್ಕಪಕ್ಕದ ಅಥವಾ ವಾರ್ಡಿನ ನಿವಾಸಿಗಳು ಎಲ್ಲೆಂದರಲ್ಲಿ ಕಸ ಬೀಸಾಡುವುದನ್ನು ಕಂಡಲ್ಲಿ ತಿಳಿಹೇಳಿ, ಕಸದ ಗಾಡಿಗಳಿಗೆ ಹಾಕುವಂತೆ ಸೂಚಿಸಬೇಕು ಎಂದರು.


ಇತ್ತೀಚಿನ ದಿನಗಳಲ್ಲಿ ಸೋಂಕಿನಿಂದ ಮನುಷ್ಯನಿಗೆ ವಿವಿಧ ರೀತಿ ರೋಗಗಳು ಉಲ್ಬಣಿಸುತ್ತಿವೆ. ಅಲ್ಲದೇ ಕೆಲವರು ಬೀದಿ ಬದಿಗಳಲ್ಲಿ ಹಸಿಕಸ ಎಲ್ಲೆಂದರಲ್ಲೇ ಬೀಸಾಡುತ್ತಿದ್ದಾರೆ. ಆದರೆ ಕಾಲಕ್ರಮೇಣ ಕೊಳೆತು ವಾಸನೆಯಿಂದ ಮಕ್ಕಳು, ವೃದ್ದರು ಅನಾರೋಗ್ಯಕ್ಕೆ ತುತ್ತಾಗುವ ಸಂಭವವಿರುವ ಕಾರಣ ನಿವಾಸಿಗಳು ಎಚ್ಚೆತ್ತುಕೊಂಡು ಗಾಡಿಗಳಿಗೆ ಕಸ ಹಾಕಬೇಕು ಎಂದರು.

ನಗರ ವೆಲ್ಫೇರ್ ಟ್ರಸ್ಟ್ ಗೌರವಾಧ್ಯಕ್ಷ ಕಿಶೋರ್‌ಕುಮಾರ್ ಹೆಗ್ಡೆ ಮಾತನಾಡಿ, ಮಾನವ ಮೊದಲು ಸ್ವಚ್ಛತೆಗೆ ಆದ್ಯತೆ ಕೊಡಬೇಕು. ಕೇವಲ ಸುತ್ತಮುತ್ತ ಸ್ವಚ್ಛಂದಗೊಂಡರೆ ಸಾಲದು. ಸಾಮಾಜಿಕ ಕಾರ್ಯದ ಮೂಲಕ ಸಮಾಜಕ್ಕೆ ಮಾದರಿಯಾಗಿ ಬದುಕಿದರೆ ಮಾನವನಾಗಿ ಜನಿಸಿದ್ದಕ್ಕೂ ಸಾರ್ಥಕವಾದಂತೆ ಎಂದರು.

ಈ ಸಂದರ್ಭದಲ್ಲಿ ಟ್ರಸ್ಟಿನ ಅಧ್ಯಕ್ಷ ಹರೀಶ್, ಸದಸ್ಯರಾದ ನಿಂಗರಾಜ್, ಮಹಾಬಲ, ವಾರ್ಡಿನ ನಿವಾಸಿಗಳು ಹಾಜರಿದ್ದರು.

## ಕರ್ತಿಕೆರೆ ಗ್ರಾಮ ಪಂಚಾಯ್ತಿ ಉಪಾಧ್ಯಕ್ಷರ ಆಯ್ಕೆ

ಚಿಕ್ಕಮಗಳೂರು: ಇಲ್ಲಿನ ಕರ್ತಿಕೆರೆ ಗ್ರಾಪಂ ಉಪಾಧ್ಯಕ್ಷರಾಗಿ ಪುಟ್ಟಸ್ವಾಮಿ ಶೆಟ್ಟಿ ಅವಿರೋಧ ಆಯ್ಕೆಯಾದರು. ತೆರವಾಗಿದ್ದ ಉಪಾಧ್ಯಕ್ಷ ಸ್ಥಾನಕ್ಕೆ ಬುಧವಾರ ಚುನಾವಣೆ ನಡೆದಿದ್ದು, ಪುಟ್ಟಸ್ವಾಮಿ ಶೆಟ್ಟಿ ನಾಮಪತ್ರ ಸಲ್ಲಿಸಿದ್ದರು. ಉಳಿದಂತೆ ಯಾವುದೇ ನಾಮಪತ್ರ ಸಲ್ಲಿಕೆಯಾಗದ ಹಿನ್ನೆಲೆಯಲ್ಲಿ ಪುಟ್ಟಸ್ವಾಮಿ ಶೆಟ್ಟಿಯನ್ನು ಕರ್ತಿಕೆರೆ ಗ್ರಾಪಂ ಉಪಾಧ್ಯಕ್ಷರಾಗಿ ಚುನಾವಣಾಧಿಕಾರಿಯಾಗಿದ್ದ ಶಿಶು ಅಭಿವೃದ್ಧಿ ಯೋಜನಾಧಿಕಾರಿ ರಂಗನಾಥ್ ಘೋಷಣೆ ಮಾಡಿದರು.ನೂತನ ಉಪಾಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿದ ಬಿಜೆಪಿ ಮುಖಂಡ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಕೋಟೆ ರಂಗನಾಥ್, ಈ ಗ್ರಾಪಂ ವ್ಯಾಪ್ತಿಯ ಹಳ್ಳಿಗಳಲ್ಲಿ ಕುಡಿಯುವ ನೀರು, ಬೀದಿ ದೀಪ, ಸ್ವಚ್ಛತೆ ಸೇರಿದಂತೆ ಇನ್ನೂ ಮುಂತಾದ ಮೂಲಭೂತ ಸಮಸ್ಯೆಗಳನ್ನು ಈಡೇರಿಸಲು ಅಧ್ಯಕ್ಷರು, ಉಪಾಧ್ಯಕ್ಷರು ಮುಂದಾಗಬೇಕೆಂದು ಕಿವಿಮಾತು ಹೇಳಿದರು.ಮಾಜಿ ಜಿಪಂ ಉಪಾಧ್ಯಕ್ಷ ಬೀಕನಹಳ್ಳಿ ಸೋಮಶೇಖರ್ ಮಾತನಾಡಿ, ಹಿರಿಯ ಸದಸ್ಯರಾಗಿರುವ ಪುಟ್ಟಸ್ವಾಮಿ ಎಲ್ಲರನ್ನೂ ವಿಶ್ವಾಸಕ್ಕೆ ಪಂಚಾಯಿತಿ ಅಭಿವೃದ್ಧಿಪಡಿಸಲು ಆದ್ಯತೆ ನೀಡಬೇಕೆಂದು ಸಲಹೆ ನೀಡಿದರು. ಎಸ್‌ಸಿ ಮೋರ್ಚಾ ಜಿಲ್ಲಾಧ್ಯಕ್ಷ ಕೆ.ಪಿ.ವೆಂಕಟೇಶ್, ನೂತನ ಉಪಾಧ್ಯಕ್ಷ ಪುಟ್ಟಸ್ವಾಮಿ ಶೆಟ್ಟಿ ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾ.ಪಂ ಪಿಡಿಓ ಬಿ.ಪ್ರೇಮ, ಕಾರ್ಯದರ್ಶಿ ಎ.ಹೆಚ್.ಜಯರಾಂ, ಬಿಜೆಪಿ ಪಕ್ಷದ ಮುಖಂಡರಾದ ಜಯಣ್ಣ, ಕನಕರಾಜ್, ಜೆ.ಡಿ.ಲೋಕೇಶ್, ಗ್ರಾಮಸ್ಥರಾದ ಪ್ರಭು, ನೀಲಶೆಟ್ಟಿ, ಗ್ರಾಪಂ ಅಧ್ಯಕ್ಷ ಆರ್.ಎಲ್.ಭಾಗ್ಯ, ಸದಸ್ಯರಾದ ಟಿ.ಹೆಚ್.ಹೇಮಾವತಿ, ಗಣೇಶ್‌ರಾಜ್ ಅರಸ್, ಬಿ.ಮೋಹನ್, ಇನ್ನಿತರರಿದ್ದರು.



## ಕೈಗಾರಿಕಾ ಪ್ರದೇಶಗಳಲ್ಲಿ ಮೂಲಭೂತ ಅಭಿವೃದ್ಧಿ

ಶಿವಮೊಗ್ಗ: ಕೈಗಾರಿಕಾ ಪ್ರದೇಶಗಳಲ್ಲಿ ಕುಡಿಯುವ ನೀರು, ಬೀದಿ ದೀಪ, ಯುಜಿಡಿ ಸೇರಿದಂತೆ ಮೂಲಭೂತ ಸೌಕರ್ಯಗಳಿಗೆ ಒತ್ತು ನೀಡಿ, ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದರು.

ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ ಹಾಗೂ ಕೈಗಾರಿಕಾ ಸ್ಪಂದನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಕೈಗಾರಿಕಾ ಪ್ರದೇಶಗಳನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಪ್ರಸ್ತುತ ಇರುವ ಸಮಸ್ಯೆಗಳನ್ನು ಬಗೆಹರಿಸಲಾಗುವುದು. ಕುಡಿಯುವ ನೀರು, ಬೀದಿ ದೀಪ, ಯುಜಿಡಿ, ತ್ಯಾಜ್ಯ ನಿರ್ವಹಣೆಯನ್ನು ಪಾಲಿಕೆ, ಸ್ಥಳೀಯ ಸಂಸ್ಥೆಗಳ ಸಮನ್ವಯದೊಂದಿಗೆ ನಿರ್ವಹಿಸಲಾಗುವುದು ಎಂದರು.

ಕೈಗಾರಿಕಾ ಸಂಘಗಳ ಅಧ್ಯಕ್ಷರು, ಶಾಹಿ ಎಕ್ಸ್‌ಪೋರ್ಟ್ಸ್‌ನ ಅಪಾಯಕಾರಿ ತ್ಯಾಜ್ಯ ತುಂಬಿರುವ ವಾಹನಗಳು ಮತ್ತು ಐಓಸಿಲ್‌ನ ಅನಿಲ ತುಂಬಿರುವ ವಾಹನಗಳು ಮಾಚೇನಹಳ್ಳಿ ಕೈಗಾರಿಕಾ ಪ್ರದೇಶದ ಮುಖ್ಯ ರಸ್ತೆಯನ್ನು ಬಳಸಿಕೊಳ್ಳುತ್ತಿರುವುದರಿಂದ ತೊಂದ–ರೆಯಾಗುತ್ತಿದೆ. ಗಾರ್ಮೆಂಟ್ಸ್‌ನ ವಾಯುಮಾಲಿನ್ಯ ಮತ್ತು ಜಲ ಮಾಲಿನ್ಯ ನಿಯಂತ್ರಿಸಲು ಕ್ರಮ ವಹಿಸಬೇಕು. ಹಾಗೂ 0ಜಿಟಿಟಿಸಿ ಆವರಣದ ಮುಂದೆ ಮತ್ತು ಇಲ್ಲಿರುವ ಕ್ಯಾಂಟಿನ್ ಬಳಿ ಐಓಸಿಲ್‌ನ ವಾಹನಗಳನ್ನು ನಿಲ್ಲಿಸಲಾಗುತ್ತಿದೆ. ಇದನ್ನು ನಿಯಂತ್ರಿಸಬೇಕೆಂದು ಕೋರಿದರು.

ಜಿಲ್ಲಾಧಿಕಾರಿಗಳು, ಶಾಹಿ ಎಕ್ಸ್‌ಪೋರ್ಟ್ಸ್ ಮತ್ತು ಐಓಸಿಲ್ ವಾಹನಗಳನ್ನು ತಮ್ಮ ಪ್ರತ್ಯೇಕ ರಸ್ತೆಗಳಲ್ಲಿ ಬರುವಂತೆ ಕ್ರಮ ವಹಿಸಬೇಕು. ಹಾಗೂ ಅಪಾಯಕಾರಿ ತ್ಯಾಜ್ಯಗಳನ್ನು ಸಾಗಿಸುವಾಗ ಎಚ್ಚರಿಕೆ ವಹಿಸಬೇಕೆಂದು ಸೂಚಿಸಿದರು.



ಶಾಹಿ ಎಕ್ಸ್‌ಪೋರ್ಟ್ಸ್ ಸುತ್ತಮುತ್ತಲ ಪ್ರದೇಶದಲ್ಲಿ ಆಸಿಡ್ ವಾಸನೆ ಬರುತ್ತಿದೆ ಎಂಬ ದೂರು ಸಹ ಇದೆ. ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಬೇಕು ಎಂದರು.

ಇ–ಖಾತಾ : ಶಿವಮೊಗ್ಗ ಆಟೋ ಕಾಂಪ್ಲೆಕ್ಸ್‌ನಲ್ಲಿ ನಿವೇಶನ ಹಾಗೂ ಕಟ್ಟಡಗಳ ಇ–ಖಾತಾ ಮಾಡಿಸಲು ತೊಂದರೆಯಾಗುತ್ತಿದೆ. ಸುಮಾರು 27 ವರ್ಷಗಳ ಹಿಂದೆ ಕೆಐಎಡಿಬಿಯಿಂದ ಅಭಿವೃದ್ಧಿ ಪಡಿಸಿದ ಈ ಪ್ರದೇಶವನ್ನು ಒಂದೆರಡು ವರ್ಷಗಳ ಹಿಂದೆ ಪಾಲಿಕೆಗೆ ಹಸ್ತಾಂತರವಾಗಿವೆ. ಪಾಲಿಕೆಯವರು ಇ–ಖಾತಾ ಮಾಡಿಸಲು ಅನುಮತಿ ಪತ್ರ ಕೇಳುತ್ತಿದ್ದಾರೆ. ದಿಕ್ಕುಗಳಲ್ಲಿ ವ್ಯತ್ಯಾಸವಿದೆ ಎಂದೆಲ್ಲ ಹೇಳುತ್ತಿದ್ದಾರೆ. ಈ ಸಮಸ್ಯೆಗಳನ್ನು ಬಗೆಹರಿಸಿ ಇ–ಖಾತಾ ಮಾಡಿಸಿಕೊಡಬೇಕೆಂದು ಕೈಗಾರಿಕೋದ್ಯಮಿಗಳು ಕೋರಿದರು.

ಭದ್ರಾವತಿ ಇಂಡಸ್ಟ್ರಿಯಲ್ ಎಸ್ಟೇಟ್‌ನಲ್ಲಿ ಬೌಂಡ್ರಿ ಫೆನ್ಸಿಂಗ್, ಅಸಮರ್ಪಕ ಬೆಳಕು, ಕೆಲವು ಆಂತರಿಕ ರಸ್ತೆಗಳ ದುರಸ್ತಿ ಇದೆ. ಮಾಚೇನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಬೀದಿ ದೀಪಗಳು ದುರಸ್ತಿಯಲ್ಲಿವೆ. ಹಾಗೂ ಪಾಲಿಕೆಯಿಂದ ಕೈಗಾರಿಕೆಗಳಿಗೆ ಸಮರ್ಪಕ ನೀರು ಪೂರೈಕೆಯಾಗುತ್ತಿಲ್ಲ. ಕನಿಷ್ಠ 2 ಗಂಟೆ ನೀರು ಬಿಡಬೇಕೆಂದು ಮನವಿ ಮಾಡಿದರು.

ಸಾಗರ ರಸ್ತೆ ಕೆಎಸ್‌ಎಸ್‌ಐಡಿಸಿ ಕೈಗಾರಿಕಾ ವಸಾಹತು ಪಾಲಿಕೆಗೆ ಹಸ್ತಾಂತರವಾಗಿದ್ದು ವಸಾಹತುವಿನ ನಿರ್ವಹಣೆ ಮಾಡಬೇಕು. ಮಾಚೇನಹಳ್ಳಿ ಆಟೋ ಕಾಂಪ್ಲೆಕ್ಸ್ ಬಳಿ ಸುಲಭ ಶೌಚಾಲಯ ನಿರ್ಮಿಸುವಂತೆ, ಕಲ್ಲೂರು–ಮಂಡ್ಲಿ ಪ್ರದೇಶದಲ್ಲಿ ಎಲೆಕ್ಟ್ರಿಕಲ್ ಸಬ್ ಸ್ಟೇಷನ್ ನಿರ್ಮಿಸಲು ಅವಕಾಶ ಮಾಡಿಕೊಡುವಂತೆ ಕೈಗಾರಿಕೋದ್ಯಮಿಗಳು ಮನವಿ ಮಾಡಿದರು.

> ಇ–ಖಾತಾ, ಕುಡಿಯುವ ನೀರು, ಯುಜಿಡಿ ಸೇರಿದಂತೆ ಪಾಲಿಕೆ ಸಮಸ್ಯೆಗಳ ಕುರಿತು ಆಯುಕ್ತರೊಂದಿಗೆ ಪ್ರತ್ಯೇಕ ಸಭೆ ನಡೆಸಿ ಒಂದೊಂದೇಸಮಸ್ಯೆಗಳನ್ನುಪರಿಹರಿಸಲಾಗುವುದು. ಭದ್ರಾವತಿ ಇಂಡಸ್ಟ್ರಿಯಲ್ ಎಸ್ಟೇಟ್‌ನಲ್ಲಿ ನಗರಸಭೆ ವತಿಯಿಂದ ಆದ್ಯತೆ ಮೇರೆಗೆ ಫೆನ್ಸಿಂಗ್ ಮತ್ತು ಬೀದಿ ದೀಪ ಇತರೆ ಕೆಲಸಗಳನ್ನು ಮಾಡಬೇಕು.
>
> **–ಗುರುದತ್ತ ಹೆಗಡೆ,** ಜಿಲ್ಲಾಧಿಕಾರಿ.

ಸಾಗರ ರಸ್ತೆಯ ಎಪಿಎಂಸಿಯಿಂದ ಆಟೋ ಕಾಂಪ್ಲೆಕ್ಸ್‌ಗೆ ಟ್ರಾವೆಲ್ಸ್‌ಗಳ ಬಸ್‌ಗಳು ಪಾರ್ಕಿಂಗ್ ಮಾಡುತ್ತಿದ್ದು, ಅಪಘಾತ ಮತ್ತು ಅವಘಡಗಳು ಹೆಚ್ಚುತ್ತಿವೆ ಎಂಬ ದೂರನ್ನು ಆಲಿಸಿದ ಜಿಲ್ಲಾಧಿಕಾರಿಗಳು ಎಸ್‌ಪಿ ಯವರೊಂದಿಗೆ ಮಾತನಾಡಿ, ಈ ಭಾಗದಲ್ಲಿ ಟ್ರಾವೆಲ್ಸ್ ಬಸ್, ವಾಹನಗಳು ಪಾರ್ಕಿಂಗ್ ಮಾಡದಂತೆ ಕ್ರಮ ವಹಿಸಲು ಕೋರಿದರು.

ಸಭೆಯಲ್ಲಿ ಜಿ.ಪಂ ಸಿಇಓ ಹೇಮಂ ಎನ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಗಣೇಶ್, ಕೆಐಎಡಿಬಿ ಕಾರ್ಯಪಾಲಕ ಅಭಿಯಂತರ ನಾರಾಯಣಪ್ಪ, ಕರ್ನಾಟಕ ನಗರ ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾರ್ಯಪಾಲಕ ಅಭಿಯಂತರರು, ಪರಿಸರ ಅಧಿಕಾರಿಗಳು, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘ, ಜಿಲ್ಲಾ ಕೈಗಾರಿಕಾ ಸಂಘ, ಮಾಚೇನಹಳ್ಳಿ ಕೈಗಾರಿಕಾ ಪ್ರದೇಶ ಕೈಗಾರಿಕೋದ್ಯಮಿಗಳ ಸಂಘ, ಕೆಎಸ್‌ಎಸ್‌ಐಡಿಸಿ ಸಂಘ, ಆಟೋ ಕಾಂಪ್ಲೆಕ್ಸ್ ಅಸೋಸಿಯೇಷನ್‌ನ ಅಧ್ಯಕ್ಷರುಗಳು, ಪದಾಧಿಕಾರಿಗಳು, ಅಧಿಕಾರಿಗಳು ಹಾಜರಿದ್ದರು.

## ಅನೈತಿಕ ಸಂಬಂಧ: ಮಹಿಳೆಯರಿಬ್ಬರ ಬರ್ಬರ ಹತ್ಯೆ

ಬೆಂಗಳೂರು: ಅನೈತಿಕ ಸಂಬಂಧದ ಶಂಕೆ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಎರಡು ಕೊಲೆಗಳಾಗಿವೆ. ತನ್ನ ಸ್ನೇಹಿತನ ಜೊತೆ ಅನೈತಿಕ ಸಂಬಂಧ ಇಟ್ಟುಕೊಂಡಿದ್ದಾಳೆ ಎಂದು ಆರೋಪಿಸಿ ಮೋಹನ್ ರಾಜ್ ಎಂಬಾತ ಪತ್ನಿ ಶ್ರೀಗಂಗಾಳನ್ನು ಚೂರಿಯಿಂದ ಇರಿದು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಆನೇಕಲ್ ನ ಹೆಬ್ಬಗೋಡಿಯ ವಿನಾಯಕನಗರದಲ್ಲಿ ನಡೆದಿದೆ. ಈ ಪ್ರಕರಣ ಸಂಬಂಧ ಪೊಲೀಸರು ಮೋಹನ್ ರಾಜ್ ನನ್ನು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ. ಮತ್ತೊಂದೆಡೆ ತಾನು ಕೆಲಸಕ್ಕೆ ಹೋಗಿದ್ದಾಗ ಪರಪುರುಷರ ಜೊತೆ ಕಾಲ ಕಳೆಯುತ್ತಾಳೆ ಎಂದು ಶಂಕಿಸಿ ನಿಜಾಮುದ್ದೀನ್ ಎಂಬಾತ ತನ್ನ ಪತ್ನಿ ರಬಿಯಾಳನ್ನು ಕತ್ತು ಹಿಸುಕಿ ಹತ್ಯೆ ಮಾಡಿದ್ದು ನಂತರ ಸೂಲಿಬೆಲೆ ಪೊಲೀಸ್ ಠಾಣೆಗೆ ಹೋಗಿ ಶರಣಾಗಿದ್ದಾನೆ.

## ಬೆಂಗಳೂರು: 311 ಬಾರಿ ಸಂಚಾರ ನಿಯಮ ಉಲ್ಲಂಘನೆ; 1.61 ಲಕ್ಷ ದಂಡ ಕಟ್ಟಿದ ಬೈಕ್ ಸವಾರ!

ಬೆಂಗಳೂರು: ಗೇರ್ ಇಲ್ಲದ ಸ್ಕೂಟರ್ ನಲ್ಲಿ ಬೆಂಗಳೂರೆಲ್ಲಾ ಸುತ್ತಾಡುತ್ತಾ 311 ಬಾರಿ ಸಂಚಾರ ನಿಯಮ ಉಲ್ಲಂಘಿಸಿದ್ದ ಬೈಕ್ ಸವಾರನೊಬ್ಬ ಕೊನೆಗೆ ರೂ. 1.61 ಲಕ್ಷ ದಂಡ ಪಾವತಿಸಿ, ಸೀಜ್ ಆಗಿದ್ದ ತನ್ನ ಬೈಕ್ ನ್ನು ಮನೆಗೆ ತೆಗೆದುಕೊಂಡು ಹೋಗಿದ್ದಾನೆ ಎಂದು ಅಧಿಕಾರಿಗಳು ಬುಧವಾರ ಹೇಳಿದ್ದಾರೆ.ಬೆಂಗಳೂರಿನ ನಿವಾಸಿ ಸುದೀಪ್ ಆ ಮಹಾನುಭವ. ಈ ಸಂಬಂಧ ಪೊಲೀಸರು ಕೇಸ್ ದಾಖಲಿಸಿಕೊಂಡು ಆತನ ಮನೆಗೆ ನೋಟಿಸ್ ಕಳುಹಿಸಿದ್ದರು. ಆದರೆ ಯಾವುದೇ ಪ್ರತಿಕ್ರಿಯೆ ಬಂದಿರಲಿಲ್ಲ. ಸಂಚಾರ ಪೊಲೀಸರು ಕೂಡಾ ಆತನನ್ನು ಹಿಡಿಯುವತ್ತ ಯಾವುದೇ ಗಮನ ಹರಿಸಿರಲಿಲ್ಲ.ಆದರೆ ಶಿಬಮ್ ಎಂಬ ವ್ಯಕ್ತಿ ಸಾಮಾಜಿಕ ಮಾಧ್ಯಮ ಥ ನಲ್ಲಿ ಸುದೀಪ್ ಅವರ ಸಂಚಾರ ನಿಯಮ ಉಲ್ಲಂಘನೆ ವಿವರಗಳು, ವಿಧಿಸಲಾದ ದಂಡದ ಮೊತ್ತವನ್ನು ರಶೀದಿಯೊಂದಿಗೆ ಪೋಸ್ಟ್ ಮಾಡಿದ್ದರು.ಬಳಿಕ ಬೆಂಗಳೂರು ನಗರ ಸಂಚಾರ ಪೊಲೀಸರು ಇನ್ನೂ ವಾಹನವನ್ನು ಏಕೆ ವಶಪಡಿಸಿಕೊಂಡಿಲ್ಲ ಎಂದು ಕೆಲ ನೆಟ್ಟಿಗರು ಪ್ರಶ್ನಿಸಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ ಪೊಲೀಸರು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದರು. ಅದರಂತೆ ಸಿಟಿ ಮಾರ್ಕೆಟ್ ಸಂಚಾರ ಪೊಲೀಸರು ಸುದೀಪ್ ಅವರನ್ನು ಸುತ್ತುವರೆದು ಫೆಬ್ರವರಿ 3 ರಂದು ಬಂಧಿಸಿದ್ದರು. ಫೆಬ್ರವರಿ 4 ರಂದು ಮಾಲೀಕ ರೂ. 1,61,500 ರೂ. ದಂಡವನ್ನು ಪಾವತಿಸಿದ ನಂತರ ಸೀಜ್ ಆಗಿದ್ದ ಬೈಕ್ ನ್ನು ಬಿಡುಗಡೆ ಮಾಡಲಾಗಿದ್ದು, ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸವಾರನಿಗೆ ಸೂಚಿಸಲಾಗಿದೆ ಎಂದು ಸಂಚಾರಿ ಪೊಲೀಸರು ತಿಳಿಸಿದ್ದಾರೆ.

## ಬ್ಯಾಂಕ್ ಗಳಿಂದ ವಸೂಲಿಯಾದ ಸಾಲದ ವಿವರ ಕೋರಿ ಹೈಕೋರ್ಟ್ ಗೆ ವಿಜಯ್ ಮಲ್ಯ ಅರ್ಜಿ

ಬೆಂಗಳೂರು: ಬ್ಯಾಂಕ್ ಗಳಿಂದ ವಸೂಲಿಯಾದ ಸಾಲದ ವಿವರ ಕೋರಿ ಆರ್ಥಿಕ ಅಪರಾಧಿಯಾಗಿ ವಿದೇಶದಲ್ಲಿ ತಲೆಮರೆಸಿಕೊಂಡಿರುವ ಉದ್ಯಮಿ ವಿಜಯ್ ಮಲ್ಯ ಕರ್ನಾಟಕ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದಾರೆ. ಮಲ್ಯ ಪರವಾಗಿ ಹಿರಿಯ ವಕೀಲ ಸಾಜನ್ ಪೂವಯ್ಯ ವಾದ ಮಂಡಿಸಿದ್ದಾರೆ. ರೂ. 6,200 ಕೋಟಿ ಮರು ಪಾವತಿಸಬೇಕಿತ್ತು. ಆದರೆ ರೂ. 14,000 ಕೋಟಿ ವಸೂಲಿ ಮಾಡಲಾಗಿದೆ.ಇದನ್ನು ಲೋಕಸಭೆಗೆ ಹಣಕಾಸು ಸಚಿವರು ತಿಳಿಸಿದ್ದಾರೆ ಎಂದು ಮಲ್ಯ ಪರ ವಕೀಲರು ಹೇಳಿದ್ದಾರೆ.ರೂ. 10, 200 ಕೋಟಿ ವಸೂಲಿಯಾಗಿದೆ ಎಂದು ಸಾಲ ವಸೂಲಾತಿ ಅಧಿಕಾರಿ ಹೇಳಿಕೆ ನೀಡಿದ್ದಾರೆ ಎಂದು ಮಲ್ಯ ಪರ ವಕೀಲರು ವಾದಿಸಿದ್ದಾರೆ. ಸಂಪೂರ್ಣ ಸಾಲದ ಮೊತ್ತವನ್ನು ತೆರವುಗೊಳಿಸಲಾಗಿದ್ದರೂ ಪ್ರಕ್ರಿಯೆ ಇನ್ನೂ ಮುಂದುವರೆದಿದೆ. ವಸೂಲಾದ ಸಾಲದ ಮೊತ್ತದ ವಿವರ ನೀಡುವಂತೆ ಬ್ಯಾಂಕ್ ಗಳಿಗೆ ನಿರ್ದೇಶನ ನೀಡುವಂತೆ ಮನವಿ ಮಾಡಿದ್ದಾರೆ. ಮಲ್ಯ ಅವರ ಅರ್ಜಿಯನ್ನು ಆಧರಿಸಿ ನ್ಯಾಯಮೂರ್ತಿ ಆರ್. ದೇವದಾಸ್ ನೇತೃತ್ವದ ಹೈಕೋರ್ಟ್ ಪೀಠ, ಬ್ಯಾಂಕ್ ಗಳು ಮತ್ತು ಸಾಲ ವಸೂಲಾತಿ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡಿದೆ.ಈ ಹಿಂದೆ 2024 ಡಿಸೆಂಬರ್ 18 ರಂದು ವಿಜಯ್ ಮಲ್ಯ ಅವರು ರೂ. 6,203 ಕೋಟಿ ಸಾಲದ ವಿರುದ್ಧ ಬ್ಯಾಂಕ್ ಗಳು ರೂ. 14, 131.60 ಕೋಟಿ ವಸೂಲಿ ಮಾಡಿದ್ದಾರೆ ಎಂದು ಹೇಳಿದ್ದರು. ಈಗಲೂ ಅವರು ಆರ್ಥಿಕ ಅಪರಾಧಿಯಾಗಿಯೇ ಮುಂದುವರೆದಿದ್ದು, ಲಂಡನ್ ನಲ್ಲಿದ್ದಾರೆ. ಸಾಲ ಮರುಪಾವತಿಸದ ಆರೋಪ ಹೊತ್ತಿರುವ ವಿಜಯ್ ಮಲ್ಯ ಅವರನ್ನು ದೇಶಕ್ಕೆ ಹಸ್ತಾಂತರಿಸಲು ಭಾರತ ಸರ್ಕಾರ ಪ್ರಯತ್ನ ನಡೆಸುತ್ತಿದೆ.




# ಸಿಲಿಕಾನ್ ಸಿಟಿಗೆ ಪ್ರತಿಮೆಗಳ ಅನಾವರಣ



ಬಸವಣ್ಣ ಮತ್ತು ಬೆಂಗಳೂರು ನಿರ್ಮಾತೃ

ಬೆಂಗಳೂರು: ದೇಶ–ನಾಡು ಕಂಡ ಮಹಾಪುರುಷರು ಕಾಲಾನಂತರವೂ ನಗರಕ್ಕೆ ಜೀವಕಳೆ ತುಂಬುತ್ತಿದ್ದಾರೆ. ಅವರನ್ನೇ ಹೋಲುವ ಬೃಹದಾಕಾರದ ಪ್ರತಿಮೆಗಳು ರಾಜಧಾನಿಯ ಬಗೆಗೆ ಬೆರಗು ಹುಟ್ಟಿಸಿದರೆ, ಉದ್ಯಾನ-ವೃತ್ತಗಳಲ್ಲಿರುವ ಪುತ್ಥಳಿಗಳು ಮೆರಗು ನೀಡುತ್ತಿವೆ.

ಅಧಿಕಾರಕ್ಕೇರಿದ ಎಲ್ಲ ಪಕ್ಷಗಳೂ ಪ್ರತಿಮೆಗಳ ನಿರ್ಮಾಣಕ್ಕೆ ಆದ್ಯತೆ ನೀಡುತ್ತಾ ಬಂದಿವೆ. ಇದರಿಂದಾಗಿ ವರ್ಷದಿಂದ ವರ್ಷಕ್ಕೆ ಪ್ರತಿಮೆಗಳ ಪಟ್ಟಿ ಬೆಳೆಯುತ್ತಲೇ ಇದೆ.

ಆಡಳಿತ ಕೇಂದ್ರವಾದ ವಿಧಾನಸೌಧದ ಆವರಣದಲ್ಲಿಯೇ ಹಲವು ಪ್ರತಿಮೆಗಳಿಗೆ ನೆಲೆ ಒದಗಿಸಲಾಗಿದೆ. ಇದರಿಂದಾಗಿ ವಿಧಾನಸೌಧಕ್ಕೆ ಭೇಟಿ ನೀಡಿದವರಿಗೆ ಗಾಂಧೀಜಿ, ನೆಹರೂ, ಅಂಬೇಡ್ಕರ್, ಬಸವಣ್ಣ, ಕೆಂಗಲ್ ಹನುಮಂತಯ್ಯ, ಕೆಂಪೇಗೌಡ ಸೇರಿ ಹಲವರ ಪ್ರತಿಮೆಗಳ ದರ್ಶನವಾಗಲಿದೆ. ಈಗಹೊಸದಾಗಿ 25 ಅಡಿ ಎತ್ತರದ ಕನ್ನಡಾಂಬೆ ಭುವನೇಶ್ವರಿಯ ಕಂಚಿನ ಪ್ರತಿಮೆಯೂಈ ಪಟ್ಟಿಗೆ ಸೇರಿದೆ.

ಇಲ್ಲಿನ ಪ್ರತಿಮೆಗಳ ಬಗ್ಗೆಯೇ 'ಇಂಡಿಯನ್ ಫೌಂಡೇಷನ್ ಫಾರ್ ದಿ ಆರ್ಟ್ಸ್ ' ಸಂಸ್ಥೆಯುಸಂಶೋಧನೆ ನಡೆಸಿದೆ. 14 ತಿಂಗಳು ನಡೆಸಿದ ಈ ಸಂಶೋಧನೆಯಲ್ಲಿ 800 ಪ್ರತಿಮೆ-ಪುತ್ಥಳಿಗಳನ್ನು ಗುರುತಿಸಲಾಗಿದೆ. ಇವುಗಳಲ್ಲಿ ಅರ್ಧದಷ್ಟು ಪ್ರತಿಮೆ-ಪುತ್ಥಳಿಗಳು ಕಳೆದ 10 ವರ್ಷಗಳಲ್ಲಿಯೇ ತಲೆಯೆತ್ತಿವೆ. ಕೆಂಪೇಗೌಡ ಹಾಗೂ ರಾಜ್ಕುಮಾರ್ ಅವರ ಪ್ರತಿಮೆ-ಪುತ್ಥಳಿಗಳು ಹೆಚ್ಚಿನ ಸಂಖ್ಯೆಯಲ್ಲಿವೆ. ಬೃಹತ್ ಪ್ರತಿಮೆಗಳನ್ನು ಸರ್ಕಾರ ನಿರ್ಮಿಸಿದರೆ, ಸಣ್ಣ ಪ್ರತಿಮೆಗಳು ಹಾಗೂ ಪುತ್ಥಳಿಗಳು ವಿವಿಧ ಸಂಘ-ಸಂಸ್ಥೆಗಳ ನೆರವಿನಿಂದ ತಲೆಯೆತ್ತಿವೆ. ಸಾರ್ವಜನಿಕ ಕಟ್ಟಡಗಳ ಮುಂ ಭಾಗ, ಉದ್ಯಾನಗಳು ಹಾಗೂ ವೃತ್ತಗಳಲ್ಲಿಯೇ ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿಮೆಗಳು ಕಾಣಸಿಗುತ್ತವೆ.

ಬೃಹತ್ ಪ್ರತಿಮೆ: ಈ ಹಿಂದೆ ಭುವನೇಶ್ವರಿ ಪ್ರತಿಮೆಯ ಸ್ಥಳದ ಬಗ್ಗೆ ಗೊಂದಲಗಳು ಉಂಟಾಗಿದ್ದವು. ಕನ್ನಡ ಭವನದ ಆವರಣ ಅಥವಾ ಕಲಾಗ್ರಾಮದಲ್ಲಿ ನಿರ್ಮಿಸುವ ಬಗ್ಗೆಯೂಚರ್ಚೆಗಳು ನಡೆದಿದ್ದವು. ಶಕ್ತಿಸೌಧದ ಪಶ್ಚಿಮ ದ್ವಾರದಲ್ಲಿ ಈಗ ನಿರ್ಮಿಸಲಾಗಿರುವ 25 ಅಡಿ ಎತ್ತರದ ಭುವನೇಶ್ವರಿ ಕಂಚಿನ ಪ್ರತಿಮೆಗೆ ನಿತ್ಯವೂ ಅರ್ಚನೆ ನಡೆಯಲಿದೆ. ನೆಲಮಟ್ಟದಿಂದ ಪ್ರತಿಮೆಯು43.6 ಅಡಿ ಎತ್ತರವಿದೆ. ಪ್ರತಿಮೆಯ ಸುತ್ತಲೂ ಉದ್ಯಾನ, ಆವರಣದ ಸುತ್ತಲೂ ವಿದ್ಯುತ್ ದೀಪಾಲಂಕಾರ ವ್ಯವಸ್ಥೆ ಮಾಡಲಾಗಿದೆ. ನಾಡದೇವಿಯ ಪ್ರತಿಮೆ ವೀಕ್ಷಣೆಗೆ ಸಾರ್ವಜನಿಕರಿಗೆ ಮುಕ್ತ ಅವಕಾಶವನ್ನೂ ಕಲ್ಪಿಸಲಾಗಿದೆ.

ಹನ್ನೆರಡನೇ ಶತಮಾನದ ಸಾಮಾಜಿಕ ಹರಿಕಾರ






ಕೆಂಪೇಗೌಡರ ಭವ್ಯವಾದ ಅಶ್ವಾರೂಢ ಭಂಗಿಯ ಪ್ರತಿಮೆಗಳು ವಿಧಾನಸೌಧದ ಮುಂಭಾಗ 2023ರಲ್ಲಿ ಅನಾವರಣಗೊಂಡಿದ್ದವು. ಅಲ್ಲಿ



ನಿರ್ಮಾಣವಾದ ಪ್ರತಿಮೆಗಳ ಪಟ್ಟಿಗೆ ಈಗ ಭುವನೇಶ್ವರಿ ಪ್ರತಿಮೆ ಸೇರ್ಪಡೆಯಾಗಿದೆ.

'ದಕ್ಷಿಣ ಭಾರತದ ನಗರಗಳಲ್ಲಿ ಪ್ರತಿಮೆಗಳು ಅಧಿಕ ಸಂಖ್ಯೆಯಲ್ಲಿ ಕಾಣಸಿಗುತ್ತವೆ. ಪ್ರತಿಮೆಗಳು ವಿವಿಧ ಸಮುದಾಯಗಳ ಧ್ವನಿಯೂಆಗಿವೆ. ಕನ್ನಡದ ಬಗ್ಗೆ ಜಾಗೃತಿ ಮೂಡಿಸಲು ರಾಜ್ಕುಮಾರ್ ಅವರ ಪುತ್ಥಳಿಗಳನ್ನು ವಿವಿಧೆಡೆ ನಿರ್ಮಿಸಲಾಗುತ್ತಿದೆ. ಜಿಂಕೆ ಪಾರ್ಕ್ ಸೇರಿ ವಿವಿಧೆಡೆ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಪುತ್ಥಳಿಗಳಿವೆ. ರಾಜಕೀಯ ಉದ್ದೇಶದಿಂದಲೂ ಪ್ರತಿಮೆಗಳನ್ನು ನಿರ್ಮಿಸಲಾಗುತ್ತಿದೆ' ಎನ್ನುತ್ತಾರೆ ಪ್ರತಿಮೆಗಳ ಕುರಿತ ಸಂಶೋಧಕರೂ ಆಗಿರುವ ದೃಶ್ಯ ಕಲಾವಿದ ರವಿಕುಮಾರ್ ಕಾಶಿ.



ಕೆ.ಆರ್. ವೃತ್ತದಲ್ಲಿರುವ ಸರ್.ಎಂ.ವಿಶ್ವೇಶ್ವರಯ್ಯ ಪ್ರತಿಮೆ

108 ಅಡಿ ಎತ್ತರದ ಪ್ರತಿಮೆ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ 108 ಅಡಿ ಎತ್ತರದ ಕೆಂಪೇಗೌಡರ ಕಂಚಿನ ಪ್ರತಿಮೆ ನಿರ್ಮಿಸಲಾಗಿದೆ. ಇದನ್ನು 2022ರಲ್ಲಿ ಅನಾವರಣಮಾಡಲಾಗಿದ್ದು 'ಪ್ರಗತಿ ಪ್ರತಿಮೆ' ಎಂದು ನಾಮಕರಣಮಾಡಲಾಗಿದೆ. ಇದು ಬೆಂಗಳೂರಿನಲ್ಲಿರುವ ಅತಿ ಎತ್ತರದ ಪ್ರತಿಮೆಯಾಗಿದೆ. 64 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ಈ ಪ್ರತಿಮೆಯು218 ಟನ್ ತೂಕವಿದೆ. ಪ್ರತಿಮೆಯ ಖಡ್ಗವೇ 4 ಟನ್ ತೂಕವಿದೆ. ರಾಮ್ ವಿ.ಸುತಾರ ಅವರು ಈ ಪ್ರತಿಮೆಯನ್ನು ನಿರ್ಮಿಸಿದ್ದಾರೆ. 90 ಅಡಿ ಎತ್ತರದ ಕಂಚಿನ ಪ್ರತಿಮೆಯನ್ನು 18 ಅಡಿ ಎತ್ತರದ ಕಾಂಕ್ರೀಟ್ ಪೀಠದ ಮೇ ಲೆ ಸ್ಥಾಪಿಸಲಾಗಿದೆ. ಪ್ರತಿಮೆಗೆ 98 ಟನ್ ಕಂಚು ಮತ್ತು ಪೀಠಕ್ಕೆ 120 ಟನ್ ಉಕ್ಕು ಬಳಸಲಾಗಿದೆ. ಪ್ರತಿಮೆಯ ಸುತ್ತ 23 ಎಕರೆ ಪ್ರದೇಶದಲ್ಲಿ ಕೆಂಪೇಗೌಡ ಥೀಮ್ ಪಾರ್ಕ್‌ಗೆ ಅವಕಾಶ ಕಲ್ಪಿಸಲಾಗಿದೆ.

ಪ್ರವಾಸೋ ದ್ಯಮ ಉದ್ಯೋಗ ಸೃಷ್ಟಿ ಇತ್ತೀಚಿನ ವರ್ಷಗಳಲ್ಲಿ ವಿವಿಧ ಸಮುದಾಯಗಳ ಓಲೈಕೆಗೆ ಸಂಘ-ಸಂಸ್ಥೆಗಳ ಒತ್ತಾಯಕ್ಕೆ ಮಣಿದು ಪ್ರತಿಮೆಗಳನ್ನು ನಿರ್ಮಿಸಲಾಗುತ್ತಿದೆ. ಇನ್ನೊಂದೆಡೆ ಮಹಾನ್ ವ್ಯಕ್ತಿಗಳಿಗೆ ಗೌರವ ಸಮರ್ಪಣೆಯ ಉದ್ದೇಶವೂ ಇದೆ. ಪ್ರತಿಮೆಗಳ ಸುತ್ತಮುತ್ತ ಥೀಮ್ ಪಾರ್ಕ್ ನಿರ್ಮಾಣದಂತಹ ಕ್ರಮದಿಂದ ಪ್ರವಾಸೋ ದ್ಯಮ ಅಭಿವೃದ್ಧಿಯಾಗುತ್ತಿದೆ. ಜಾಗತಿಕ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಪ್ರತಿಮೆ ಇರುವ ಸ್ಥಳವು ಗುರುತಿಸಲ್ಪಡುತ್ತಿದೆ. ಮಹಾನ್ ವ್ಯಕ್ತಿಗಳ ಸಾಧನೆಗಳ ಬಗ್ಗೆ ಮಾಹಿತಿ ಪಸರಿಸುವಿಕೆಯೂ ಸಾಧ್ಯವಾಗುತ್ತಿದೆ. ಇನ್ನೊಂದೆಡೆ ಶಿಲ್ಪಿಗಳು ಸೇರಿ ಹಲವರಿಗೆ ಉದ್ಯೋ ಗಾವಕಾಶಕ್ಕೂ ನೆರವಾಗಲಿದೆ. ಇಲ್ಲಿನ ಕಲೆಮತ್ತು ಸಂಸ್ಕೃತಿಯನ್ನೂ ಪ್ರತಿಮೆ-ಪುತ್ಥಳಿಗಳು ಬಿಂಬಿಸಲಿವೆ.

ಮಹಿಳೆಯರ ಪ್ರತಿಮೆ ವಿರಳ 'ಇಂಡಿಯನ್ ಫೌಂಡೇಷನ್ ಫಾರ್ ದಿ ಆರ್ಟ್ಸ್ ' ಸಂಸ್ಥೆಯ ಅಧ್ಯಯನದ ಪ್ರಕಾರ ನಗರದಲ್ಲಿರುವ 800 ಪ್ರತಿಮೆ ಪುತ್ಥಳಿಗಳಲ್ಲಿ 13 ಪ್ರತಿಮೆಗಳುಮಾತ್ರ ಮಹಿಳೆಯರದ್ದಾಗಿವೆ. ಕಾವೇರಿ ಕಿತ್ತೂರು ರಾಣಿ ಚನ್ನಮ್ಮ ರಾಣಿ ಅಬ್ಬಕ್ಕ ಅಕ್ಕಮಹಾದೇವಿ ಪಾರ್ವತಮ್ಮ ರಾಜ್ಕುಮಾರ್ ಕೆಂಪೇಗೌಡ ಅವರ ಸೊಸೆ ಲಕ್ಷ್ಮೀದೇವಿ ಇಂದಿರಾಗಾಂಧಿ ಅವರ ಪ್ರತಿಮೆಯನ್ನು ವಿವಿಧೆಡೆ ಗುರುತಿಸಲಾಗಿದೆ.

ರಾಜ್ಕುಮಾರ್ ಅಂಬೇಡ್ಕರ್ ಅಧಿಕ ನಗರದಲ್ಲಿ ರಾಜ್ಕುಮಾರ್ ಅವರ ಪ್ರತಿಮೆ ಪುತ್ಥಳಿಗಳು 100ಕ್ಕೂ ಅಧಿಕ ಇವೆ. ಅಂಬೇಡ್ಕರ್ ಅವರದ್ದು 60ಕ್ಕಿಂತ ಅಧಿಕವಿವೆ. ಗಾಂಧೀಜಿ ಕೆಂಪೇಗೌಡ ವಿವೇಕಾನಂದ ಬಸವಣ್ಣ ಸಂಗೊಳ್ಳಿ ರಾಯಣ್ಣ ವಿಷ್ಣುವರ್ಧನ್ ಶಂಕರ್ನಾಗ್ ಪುನೀತ್ ರಾಜ್ಕುಮಾರ್ ಅವರ ಪ್ರತಿಮೆ ಮತ್ತು ಪುತ್ಥಳಿಗಳು ಹೆಚ್ಚಿನ ಸಂಖ್ಯೆಯಲ್ಲಿವೆ. ತಮಿಳಿನ ಪ್ರಸಿದ್ಧ ಕವಿ ಮತ್ತು ತತ್ವಜ್ಞಾನಿ ತಿರುವಳ್ಳುವರ್ ಅವರ ಪ್ರತಿಮೆಯೂಇಲ್ಲಿನ ಹಲಸೂರಿನಲ್ಲಿದೆ. ಕನ್ನಡಪರ ಸಂಘಟನೆಗಳ ವಿರೋಧದ ಕಾರಣದಿಂದಾಗಿ ಇದರ ಅನಾವರಣ ವಿಳಂಬವಾಗಿತ್ತು.



# ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

**ದಾವಣಗೆರೆ :** ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಫೆಬ್ರವರಿ 14 ಮತ್ತು 15 ರಂದು ಆಯೋಜಿಸಲಾಗಿದೆ.

ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ವಿವಿಧ ಕೋರ್ಸ್‌ಗಳ ಪ್ರವೇಶಕ್ಕೆ ಅವಕಾಶ

**ದಾವಣಗೆರೆ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಪ್ರಸಕ್ತ ಶೈಕ್ಷಣಿಕ ಸಾಲಿನ (ಜನವರಿ ಅವೃತ್ತಿ) ಪ್ರಥಮ ವರ್ಷದ ಬಿ.ಎ, ಬಿ.ಕಾಂ, ಬಿ.ಎಸ್ಸಿ., ಬಿ.ಲಿಬ್. ಐ.ಎಸ್ಸಿ., ಬಿ.ಸಿ.ಎ., ಬಿ.ಬಿ.ಎ, ಬಿ.ಎಸ್.ಡಬ್ಲ್ಯೂ, ಎಂ.ಎ, ಎಂ.ಕಾಂ, ಎಂ.ಎ–ಎಂ.ಸಿ.ಜೆ., ಎಂ.ಲಿಬ್, ಐಎಸ್ಸಿ., ಎಂ.ಬಿ.ಎ, ಎಂ.ಎಸ್ಸಿ ಎಂ.ಸಿ.ಎ, ಎಂ.ಎಸ್.ಡಬ್ಲ್ಯೂ, ಸ್ನಾತಕ, ಸ್ನಾತಕೋತ್ತರ ಪದವಿಗಳಿಗೆ ಮತ್ತು ಪಿಜಿ–ಡಿಪ್ಲೊಮಾ, ಡಿಪ್ಲೊಮಾ, ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರವೇಶಾವಕಾಶ ಪ್ರಾರಂಭವಾಗಿದೆ.

ಎರಡು ಶೈಕ್ಷಣಿಕ ಕೋರ್ಸ್‌ಗಳನ್ನು ಏಕಕಾಲದಲ್ಲಿ ಒಂದು ಭೌತಿಕ ಕ್ರಮದಲ್ಲಿ ಮತ್ತೊಂದು ದೂರಶಿಕ್ಷಣ ಕ್ರಮದಲ್ಲಿ ಓದಲು ಅವಕಾಶವಿದೆ. ವಿದ್ಯಾರ್ಥಿಗಳು ವೆಬ್‌ಸೈಟ್ ತಿತಿತಿ.ಞಚಿಣಟಥಿಣಡಿಣ.ಚಿಛಿ.ಟಿ ಮೂಲಕ ಅರ್ಜಿಯನ್ನು ಭರ್ತಿ ಮಾಡಿ, ದಾವಣಗೆರೆ ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಆನ್‌ಲೈನ್ ಮುಖಾಂತರ ಪ್ರವೇಶಾತಿ ಶುಲ್ಕವನ್ನು ಪಾವತಿಸಿ ಪ್ರವೇಶ ಪಡೆಯಬಹುದು. ಬಿಪಿಎಲ್ ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿನಿಯರಿಗೆ, ಡಿಫೆನ್ಸ್ ಹಾಗೂ ಮಾಜಿ ಸೈನಿಕ ವಿದ್ಯಾರ್ಥಿಗಳಿಗೆ ಮತ್ತು ಆಟೋ, ಕ್ಯಾಬ್ ಚಾಲಕರು ಮತ್ತು ಅವರ ಮಕ್ಕಳಿಗೆ ಬೋಧನಾ ಶುಲ್ಕದಲ್ಲಿ ರಿಯಾಯಿತಿ ನೀಡಲಾಗುವುದು. ಅಲ್ಲದೇ ಕೋವಿಡ್–19 ನಿಂದ ಮೃತಪಟ್ಟವರ ಮಕ್ಕಳಿಗೆ, ತೃತೀಯ ಲಿಂಗಿಗಳಿಗೆ, ದೃಷ್ಠಿಹೀನ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮೊ.ಸಂ: 9844926125, 8971004272, 8310676181, 9902517906, 9008905457, 8747919317, ಸಂಪರ್ಕಿಸಲು ಅಥವಾ ಖುದ್ದಾಗಿ ಕ.ರಾ.ಮು.ವಿ. ಪ್ರಾದೇಶಿಕ ಕೇಂದ್ರ, ಜೆ.ಹೆಚ್.ಪಟೇಲ್ ಬಡಾವಣೆ, ಶಾಮನೂರು ಹಿಂಭಾಗ, ನಾಗನೂರು ರಸ್ತೆಯಲ್ಲಿರುವ ಕಚೇರಿಯನ್ನು ಸಂಪರ್ಕಿಸಲು ಕ.ರಾ.ಮು.ವಿ ಪ್ರಾದೇಶಿಕ ಕೇಂದ್ರದ ಪ್ರಾದೇಶಿಕ ನಿರ್ದೇಶಕರಾದ ಡಾ.ವಿಜಯ್ ಪ್ರಕಾಶ್ ತಿಳಿಸಿದ್ದಾರೆ.

# ಶ್ರೀಬಿಸಲೇರಿ ಬಸಮ್ಮ ಭೀಮಪ್ಪ ಪ್ರೌಢಶಾಲೆ ಪುನಾರಂಭ

**ದಾವಣಗೆರೆ:** ಹೈಕೋರ್ಟ್ ಮಧ್ಯಂತರ ಆದೇಶದಂತೆ ಹಾಗೂ ಇಲಾಖೆ ಮುಂದಿನ ಆದೇಶದವರೆಗೆ ದಾವಣಗೆರೆ ಉತ್ತರ ವಲಯ, ಕಾಡಜ್ಜಿ ಗ್ರಾಮದ ಶ್ರೀಬಿಸಲೇರಿ ಬಸಮ್ಮ ಭೀಮಪ್ಪ ಪ್ರೌಢಶಾಲೆಯನ್ನು ಫೆಬ್ರವರಿ 10 ರಿಂದ ಪುನಾರಂಭಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಗದಗ:** ಜಿಲ್ಲೆಯ ಗೃಹ ರಕ್ಷಕದಳದ ವಿವಿಧ ಘಟಕಗಳಲ್ಲಿ ಖಾಲಿ ಇರುವ ಒಟ್ಟು 51 ಸ್ವಯಂ ಸೇವಕ ಗೃಹ ರಕ್ಷಕ ಸದಸ್ಯ ಸ್ಥಾನಗಳಲ್ಲಿ ನೋಂದಣಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಈ ಸೇವೆಯು ನಿಷ್ಕಾಮ ಸೇವೆಯಾಗಿದ್ದು ಯಾವುದೇ ರೀತಿಯ ಮಾಸಿಕ ಸಂಬಳ ಇರುವುದಿಲ್ಲಾ ಜಿಲ್ಲೆಯ ಗೃಹರಕ್ಷಕ ದಳದ ಘಟಕಗಳಾದ ಗದಗ ನರೇಗಲ್ಲ, ನರಗುಂದ , ಗಜೇಂದ್ರಗಡ , ಕುರ್ತಕಲೋಟಿ ಹಾಗೂ ಲಕ್ಷ್ಮೇ?ಮೇಶ್ವರ , ಗದಗ ಜಿಲ್ಲೆಯ ಹಾಗೂ ಎಲ್ಲಾ ತಾಲೂಕಿನ ಅಭ್ಯರ್ಥಿಗಳು ಅರ್ಜಿಗಳನ್ನು ಪಡೆದು ಫೆಬ್ರುವರಿ 19 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

# ತೆಂಗಿನ ಬೆಳೆಯಲ್ಲಿ ಸುಸ್ಥಿರ ಉತ್ಪಾದನೆ

**ಹಾಸನ :** ಕಾಸರಗೋಡು ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆ, ಕೊಚ್ಚಿಯ ತೆಂಗು ಅಭಿವೃದ್ಧಿ ಮಂಡಳಿ, ಅರಸೀಕೆರೆ ತೋಟಗಾರಿಕೆ ಸಂಶೋಧನಾ ಕೇಂದ್ರ, (ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆ) ಹಾಗೂ ಹಾಸನ ಜಿಲ್ಲಾ ತೋಟಗಾರಿಕೆ ಇಲಾಖೆಯ ವತಿಯಿಂದ ತೆಂಗಿನಬೆಳೆಯಲ್ಲಿ ಸುಸ್ಥಿರ ಉತ್ಪಾದನೆಗಾಗಿ ಸಮಗ್ರ ನಿರ್ವಹಣಾ ಪದ್ಧತಿಗಳು ಎಂಬುದರ ಕುರಿತು ಕಚೇರಿಯಲ್ಲಿ ಫೆ.7 ರಂದು ಒಂದು ದಿನದ ಕಾರ್ಯಾಗಾರ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಾಗಾರದಲ್ಲಿ ತೆಂಗಿನ ಬೆಳೆಯಲ್ಲಿ ಅಳವಡಿಸಬೇಕಾದ ಸಮಗ್ರ ಮಣ್ಣು, ನೀರು, ಪೋ?ಕಾಂಶಗಳ ನಿರ್ವಹಣೆ ಪದ್ಧತಿಗಳು ಹಾಗೂ ಪ್ರಸ್ತುತ ಇರುವ ಕೀಟ/ರೋಗಗಳ ಸಮಗ್ರ ನಿರ್ವಹಣೆ ಮತ್ತು ಈ ಬೇಸಿಗೆಯಲ್ಲಿ ಉಲ್ಬಣಿಸಬಹುದಾದ ಕೀಟ ಮತ್ತು ರೋಗಗಳ ಹತೋಟಿಯ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಯಿತು. ಕಾರ್ಯಕ್ರಮದಲ್ಲಿ ಕಾಸರಗೋಡು ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆ ಯ ನಿರ್ದೇಶಕರಾದ ಡಾ॥ ಬಿ.ಕೆ. ಹೆಬ್ಬಾರ, ಕಾಸರಗೋಡು ಸಸ್ಯ ಸಂರಕ್ಷಣೆ ವಿಭಾಗದ ಮುಖ್ಯಸ್ಥರಾದ ಡಾ.ವಿನಾಯಕಹೆಗ್ಡೆ, ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆ ಕಾಸರಗೋಡು ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆಯ ಪ್ರಧಾನ ವಿಜ್ಞಾನಿಗಳಾದ ಡಾ.ಮಹೇಶ್ವರಪ್ಪ ಹೆಚ್.ಪಿ, ಅರಸೀಕೆರೆ ತೋಟಗಾರಿಕೆ ಸಂಶೋಧನಾ ಕೇಂದ್ರದ ಸಹಾಯಕ ಪ್ರಾಧ್ಯಾಪಕರಾದ ಡಾ.ಚಂದ್ರಶೇಖರ್ಜಿ ಎಸ್, ಜಿಲ್ಲಾ ತೋಟಗಾರಿಕೆ ಉಪನಿರ್ದೇಶಕರಾದ ಮಂಗಳ .ಕೆ ಹಾಗೂ ಬೆಂಗಳೂರಿನ ಪ್ರಾದೇಶಿಕ ತೆಂಗು ಅಭಿವೃದ್ಧಿ ಮಂಡಳಿಯ ಅಭಿವೃದ್ಧಿ ಅಧಿಕಾರಿಗಳಾದ ಕಿಶೋರ್ ಕುಮಾರ್ ಹೆಚ್.ಡಿ ರವರು ಮತ್ತು ರಾಜ್ಯದ ಪ್ರಮುಖ ತೆಂಗು ಬೆಳೆಯುವ ಜಿಲ್ಲೆಗಳಾದ ತುಮಕೂರು, ಹಾಸನ, ಚಿತ್ರದುರ್ಗ, ಚಿಕ್ಕಮಗಳೂರು, ದಾವಣಗೆರೆ, ಮಂಡ್ಯ, ಮೈಸೂರು, ರಾಮನಗರ ಜಿಲ್ಲೆಯ ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಪ್ರಧಾನ ಕಾರ್ಯದರ್ಶಿ ಆಗಿ ಸೋನಿಯಾ ಆಯ್ಕೆ

**ಶಿವಮೊಗ್ಗ:** ಇತ್ತೀಚಿಗೆ ನಡೆದ ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ನ ಆಂತರಿಕ ಚುನಾವಣೆಯಲ್ಲಿ ಶಿವಮೊಗ್ಗ ಜಿಲ್ಲೆಯಿಂದ ಮೊಟ್ಟಮೊದಲ ಬಾರಿಗೆ ಏಕೈಕ ಮಹಿಳಾ ಅಭ್ಯರ್ಥಿ ಯಾಗಿ 15 ಸಾವಿರಕ್ಕೂ ಹೆಚ್ಚು ಮತಗಳಿಂದ ರಾಜ್ಯ ಪ್ರಧಾನ ಕಾರ್ಯದರ್ಶಿ ಯಾಗಿ ಸೋನಿಯಾ ಎಂ. ಆಯ್ಕೆಯಾಗಿದ್ದಾರೆ. ಯುವ ಕಾಂಗ್ರೆಸ್ ಬೂತ್ ಅಧ್ಯಕ್ಷರಾಗಿ, ವಾರ್ಡ್ ಅಧ್ಯಕ್ಷರಾಗಿ, ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿ, ಮಹಿಳಾ ಕೋಟದಡಿ ಮೊಟ್ಟ ಮೊದಲ ಬಾರಿಗೆ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದಾರೆ.

# ಮ್ಯಾಜಿಕ್ ಹಣದ ಮಹತ್ವ

ಹಣವು ನಮ್ಮ ದಿನನಿತ್ಯದ ಜೀವನದಲ್ಲಿ ಮಹತ್ವದ ಪಾತ್ರವನ್ನು ವಹಿಸುತ್ತದೆ ಹಣವೇ ಸರ್ವಸ್ವವಲ್ಲದಿದ್ದರೂ ಬದುಕಲು ಹಣ ಬೇಕೇ ಬೇಕು ಹಣವು ಜೀವನದ ಮೂಲಭೂತ ಅಗತ್ಯಗಳನ್ನು ಪೂರೈಸುವ ಮೂಲ ಸಾಧನವಾಗಿದೆ. ಆಧುನಿಕ ಜಗತ್ತಿನಲ್ಲಿ ಮನುಷ್ಯನ ಜೀವನಶೈಲಿ ಬದಲಾದಂತೆ ದಿನನಿತ್ಯದ ಜೀವನದ ವೆಚ್ಚ ಸಹ ಹೆಚ್ಚುತ್ತಲೆ ಇದೆ ಮನುಷ್ಯನ ತನ್ನ ಕನಸುಗಳನ್ನು ನನಸು ಮಾಡಿಕೊಳ್ಳಲು ಹಣ ಗಳಿಸಲು ಹುಚ್ಚು ಕುದುರೆಯಂತೆ ಓಡುತ್ತಿದ್ದಾನೆ. ಈ ಒತ್ತಡದ ಬದುಕಿನಲ್ಲಿ ಅವರವರ ಯೋಗ್ಯತೆಗೆ ಅನುಗುಣವಾಗಿ ಹಣ ಗಳಿಸುವುದು ಅನಿವಾರ್ಯತೆ ಆಗಿದೆ ದುಡ್ಡಿದ್ರೆ ದೊಡ್ಡಪ್ಪ ದುಡ್ಡು ಇಲ್ಲದಿದ್ದರೆ ನೀನ್ಯಾರೆಪ್ಪ ಅನ್ನುವ ಪರಿಸ್ಥಿತಿ ಉಂಟಾಗಿದೆ. ಹಣವಿಲ್ಲದ ವ್ಯಕ್ತಿಗೆ ಮೂರು ಕಾಸಿನ ಬೆಲೆ ಸಹ ಇಲ್ಲದಂತಹ ಸ್ಥಿತಿಗೆ ತಲುಪುತ್ತಿದೆ. ನೀರು ಇಲ್ಲದ ಬಾವಿ ದುಡ್ಡಿಲ್ಲದ ಮನುಷ್ಯನ ಹತ್ತಿರ ಯಾರು ಸುಳಿಯುವುದಿಲ್ಲ ಅನ್ನುವ ಹಾಗೆ ದುಡ್ಡು ಇಲ್ಲದ ಮನುಷ್ಯನಿಗೆ ?ಹೂ ಆರ್ ಯು? ಅಂತ ಕೇಳಿದ್ರೆ ದುಡ್ಡು ಇರುವವರಿಗೆ 'ಹೌ ಆರ್ ಯು? ಅಂತ ಕೇಳುತ್ತಾರೆ. ದೇವಸ್ಥಾನದಿಂದ ಹಿಡಿದು ಸ್ಮಶಾನಕ್ಕೂ ಸಹ ದುಡ್ಡು ಬೇಕೇ ಬೇಕು. ಒಟ್ಟಿನಲ್ಲಿ ಇವತ್ತಿನ ದಿನ ಹಣ ಸರ್ವಾಂತರಯಾಮಿಯಾಗಿದೆ. ಶ್ರೀಮಂತರು ಐಷಾರಾಮಿ ಜೀವನ ನಡೆಸಲು ಉಸಿರು ಕಟ್ಟಿ ದುಡಿದರೆ ಬಡವರು ಒಂದೊತ್ತಿನ ಊಟಕ್ಕೆ ಉಸಿರು ಕಟ್ಟಿ ದುಡಿಯುತ್ತಿದ್ದಾರೆ. ಸಮಾಜದಲ್ಲಿ ತನ್ನ ಘನತೆ ಗೌರವ ಬೆಲೆಯನ್ನು ಹೆಚ್ಚಿಸಿಕೊಳ್ಳಲು ಶ್ರೀಮಂತಿಕೆಯ ತೋರಿಕೆಗಾಗಿ ಎಲ್ಲಾ ಕ್ಷೇತ್ರಗಳಲ್ಲಿಯೂ ಹೋರಾಟ, ಹಾರಾಟ, ಒಡೆದಾಟ, ಜಗಳಾಟ, ಪರದಾಟ, ಕಿತ್ತಾಟ, ಅಲೆದಾಟ, ದ್ವೇಷ, ಕೊಲೆ ಹೀಗೆ ಏನಾದರೂ ಮಾಡಿ ಹಣ ಗಳಿಸುವ ಹುಚ್ಚಿನಲ್ಲಿ ಒತ್ತಡದಲ್ಲಿ ಸಿಲುಕಿಕೊಂಡು ಇರುವ ನೆಮ್ಮದಿ ಕಳೆದುಕೊಳ್ಳುತ್ತಿದ್ದಾನೆ.

ಹಣ ಆಸ್ತಿ ಅಧಿಕಾರಕ್ಕೋಸ್ಕರ ಜಗಳ, ದ್ವೇಷ, ಕೋರ್ಟ್ ಕಚೇರಿಗೆ ಅಲೆದಾಡುವ ಜನ ದಿನೇ ದಿನೇ ಹೆಚ್ಚುತ್ತಲೇ ಇದೆ ಯಾವ ಸ್ಥಿತಿಗೆ ತಲುಪಿದೆ ಎಂದರೆ ಹಣ ಇಲ್ಲದ ಮನುಷ್ಯನನ್ನು ಕಟ್ಟಿಕೊಂಡ ಹೆಂಡತಿ ಮತ್ತು ಮಕ್ಕಳು ಸಹ ಇಷ್ಟಪಡುವುದಿಲ್ಲ, ವೈಶ್ಯೆಯರು ಸಹ ದೂರ ಸರಿಯುತ್ತಾರೆ. ದುಡಿಯದವನಿಗೆ ಹೆಣ್ಣು ಕೊಡಲು ಯೋಚಿಸುತ್ತಾರೆ, ಹಣವಿಲ್ಲದವನ ಬಾಳು ಬರಿ ಗೋಳು ಆಗಿದೆ. ಇವತ್ತಿನ ದಿನ ಗುಣಕ್ಕಿಂತ ಹಣಕ್ಕೆ ಹೆಚ್ಚು ಬೆಲೆ. ಹಣ ನೋಡಿ ಸ್ನೇಹ ಸಂಬಂಧ ಮಾಡುವವರು ಸಂಖ್ಯೆ ಹೆಚ್ಚುತ್ತಿದೆ. ಹಣವಂತರಿಗೆ ಹಣ ಗುಲಾಮನಾಗಿ ಕಂಡರೆ ಬಡವರಿಗೆ ಹಣವೇ ಮಾಲೀಕನಾಗಿ ಕಾಣುತ್ತದೆ. ಇವತ್ತಿನ ಕೆಲವು ಸೋಮಾರಿ ಯುವಕರು ಕಷ್ಟಪಟ್ಟು ದುಡಿಯದೆ ಸೋಮಾರಿತನದಿಂದ ಕಾಲ ಕಳೆಯುತ್ತಾರೆ. ಇಂತವರು ಭವಿಷ್ಯದಲ್ಲಿ ತೊಂದರೆಗೀಡಾಗುತ್ತಾರೆ, ದುಡಿಯೆಮೇ ಭವಿಷ್ಯಕ್ಕೆ ಭದ್ರ ಬುನಾದಿ. 'ಕಾಯಕವೇ ಕೈಲಾಸ? ವೆಂದು 12ನೇ ಶತಮಾನದಲ್ಲಿಯೇ ಬಸವಣ್ಣ ಸಾರಿದ್ದಾನೆ, ಬದುಕಿನ ಎಷ್ಟೋ ಕಾಯಿಲೆಗಳಿಗೆ ಕಾಯಕವೇ ಔಷಧಿ.

ಹಣ ಯಾವಾಗಲೂ ಪರಿಶ್ರಮಿಗಳ, ಜ್ಞಾನಿಗಳ, ಸಾಧಕರ, ಕಾಯಕ ಜೀವಿಗಳ ಸೊತ್ತಾಗಿರುತ್ತದೆ. ಸೋಮಾರಿಗಳ ಸೊತ್ತಾಗುವುದಿಲ್ಲ, ಇದಕ್ಕೆ ಹಣ ಒಂದು ಮಾತು ಹೇಳುತ್ತದೆ. ಯೌವನದಲ್ಲಿ 'ನೀನು ನನ್ನನ್ನು ಕಷ್ಟಪಟ್ಟು ದುಡಿದು ಉಳಿಸಿಕೋ? 'ನಿನಗೆ ವಯಸ್ಸಾದ ಮೇಲೆ ನಾನು ನಿನ್ನನ್ನು ಉಳಿಸಿಕೊಂಡು ಸಾಕುತ್ತೇನೆ ಎಂದು ಕೆಲವೇ ಕೆಲವು ಜನ ಶ್ರೀಮಂತರಾಗಲು ಕಾರಣ ಅವರ ಜ್ಞಾನ, ಪರಿಶ್ರಮ ಮತ್ತು ಸ್ಮಾರ್ಟ್ ವರ್ಕ್ ಕಾರಣವಾಗಿರುತ್ತದೆ. ಅವರ ಆದಾಯ ಅವರ ಖರ್ಚಿಗಿಂತ ಹೆಚ್ಚು ಇರುತ್ತದೆ. ಅವರ ಆಸೆಗಳು ಮಿತಿಯಲ್ಲಿ ಮತ್ತು ಆದಾಯಕ್ಕೆ ಅನುಗುಣವಾಗಿ




ಇರುತ್ತದೆ. ಶ್ರೀಮಂತರು ಹಣ ಉಳಿತಾಯಕ್ಕಿಂತ ಹಣ ಗಳಿಸುವುದರ ಬಗ್ಗೆ ಹೆಚ್ಚು ಯೋಚಿಸುತ್ತಾರೆ. ಪ್ರಯತ್ನ, ಪರಿಶ್ರಮದಿಂದ ಹಣೆ ಬರಹ ಸಹ ಬದಲಿಸಬಹುದು ಎಂಬ ಮಾತನ್ನು ಅರಿತು ಬದುಕುತ್ತಾರೆ.

ಹಣ ಗಳಿಸುವುದು ಎಷ್ಟು ಮುಖ್ಯನೋ ಗಳಿಸಿದ ಹಣ ಉಳಿತಾಯ ಮಾಡಿ ಉಳಿಸಿ ಬೆಳೆಸುವುದು ಸಹ ಅಷ್ಟೇ ಮುಖ್ಯ. ಒಂದು ರೂಪಾಯಿ ಉಳಿಸಿದರೂ ಒಂದು ರೂಪಾಯಿ ಗಳಿಸಿದಂತೆ. ದುಡಿದ ಹಣದಿಂದಲೇ ಹಣ ದುಡಿಸುವುದು ಒಂದು ಕಲೆ. ಹಣ ಉಳಿಸಿದರೆ, ಹಣ ದುಡಿದಂತೆ ಖರ್ಚು ಮಾಡುತ್ತಾ ಹೋದರೆ ಕೊನೆಯೇ ಇಲ್ಲ. ಕುಂತು ಉಂಡರೆ ಕೊಪ್ಪರಿಗೆ ಉಗ್ಗಿ ಆದರೂ ಸಾಲದು ಅನ್ನುವ ಹಾಗೆ ನಿಮಗೆ ಎಷ್ಟು ದೊಡ್ಡ ಸಂಬಳ ಮತ್ತು ಆದಾಯ ಬರುತ್ತೆ ಅನ್ನುವುದರ ಮೇಲೆ ನೀವು ಶ್ರೀಮಂತರ ಆಗುವುದಿಲ್ಲ ಬಂದ ಹಣವನ್ನು ಹೇಗೆ ನಿರ್ವಹಣೆ ಮಾಡಿ ಬಳಸುತ್ತೇವೆ ಅನ್ನುವುದರ ಮೇಲೆ ನಿಮ್ಮ ಶ್ರೀಮಂತಿಕೆ ಅವಲಂಬಿತವಾಗಿರುತ್ತದೆ. ಹಣ ನಿರ್ವಹಣೆ ಮತ್ತು ಯೋಜನೆಯಲ್ಲಿ ಬಹಳಷ್ಟು ಜನ ಎಡವುತ್ತಾರೆ. ವಿಶ್ವದ ಶ್ರೀಮಂತರಲ್ಲಿ ಒಬ್ಬರಾದ ಬಿಲ್‌ಗೇಟ್ಸ್ ಹೇಳಿದ ಮಾತು ನೆನಪಿಗೆ ಬರುತ್ತದೆ. ?ಬಡವರಾಗಿ ಹುಟಿದ್ದು ನಮ್ಮ ತಪ್ಪಲ್ಲ. ಆದರೆ ಬಡವರಾಗಿಯೇ ಸತ್ತರೆ ಅದು ಸ್ವಯಂಕೃತ ಅಪರಾಧವಾದವೆಂದು ಸಂದೇಶ ಕೊಟ್ಟಿದ್ದಾರೆ. ಅತಿ ಬೇಗ ಹಣ ಮಾಡಬೇಕು ಎಂಬ ಜನರೇ ಜಗತ್ತಿನಲ್ಲಿ ಹೆಚ್ಚಿದ್ದಾರೆ. ಹಣ ಬೇಕು ಆದರೆ ಬೇರೊಬ್ಬರಿಗೆ ಮೋಸಮಾಡಿ, ಮನಸ್ಸಿಗೆ ನೋವುಂಟು ಮಾಡಿ ಹಣ ಹಾಗೂ ಸ್ಥಾನಮಾನ ಹೆಚ್ಚಿಸಿಕೊಳ್ಳುವುದು ತಾತ್ಕಾಲಿಕ ಸುಖವಷ್ಟೆ. ಅದು ಶಾಶ್ವತವದ ನೆಮ್ಮದಿ ತೃಪ್ತಿ ಕೂಡುವುದಿಲ್ಲ. ಸಹಜವಾಗಿ ಕೆಲವು ಚಟಗಳಿಂದಾಗಿ ಮನುಷ್ಯ ಹಣ ಕಳೆದುಕೊಳ್ಳುತ್ತಾನೆ. ಆದರೆ ಜೂಜು ಮತ್ತು ಹೆಣ್ಣಿನ ವ್ಯಾಮೋಗಳಿಗೆ ಬಿದ್ದು ಮೇಲೆ ರಾತ್ರೋರಾತ್ರಿ ತನ್ನ ಇಡೀ ಹಣ ಆಸ್ತಿ ಅಧಿಕಾರ ಗೌರವ ಎಲ್ಲವನ್ನು ಕಳೆದು ಬಂಗಲೆಯಿಂದ ಬೀದಿಗೆ ಬರುತ್ತಾನೆ. ಸಣ್ಣ ಖರ್ಚುಗಳನ್ನು ಸಹ ಯೋಚಿಸಿ ಮಾಡಬೇಕು. ಒಂದು ಸಣ್ಣ ರಂಧ್ರ (ಹೋಲ್) ದೊಡ್ಡ ಹಡಗನ್ನೇ ಮುಳುಗಿಸುತ್ತದೆ. ಹಣ ಗಳಿಸುವ ದಾರಿಯನ್ನು ಮತ್ತು ಸಾಮರ್ಥ್ಯವನ್ನು ಆಲೋಚಿಸಿ ಬೆಳೆಸಿಕೊಳ್ಳಲೇಬೇಕು. ಸತತ ಪ್ರಯತ್ನದಿಂದ ಬದುಕನ್ನೇ ಬದಲಿಸಬಹುದು ಬದುಕಿನಲ್ಲಿ ಕಷ್ಟಕ್ಕೂ ಸುಖಕ್ಕೂ ಈ ಮ್ಯಾಜಿಕ್ ಹಣದ ಪಾತ್ರ ಬಹು ದೊಡ್ಡದು. ಹಣವು ಜೀವನವನ್ನು ಸುಗಮಗೊಳಿಸುವ ಸಾಧನ. ಆದರೆ ಅದನ್ನು ಪ್ರಾಮಾಣಿಕವಾದ ರೀತಿಯಲ್ಲಿ ಸಂಪಾದನೆ ಮತ್ತು ಸಮರ್ಥ ರೀತಿಯಲ್ಲಿ ಯೋಜನೆ ಮತ್ತು ನಿರ್ವಹಣೆಯೊಂದಿಗೆ ಬಳಕೆ ಮಾಡುವುದು ಅತ್ಯಗತ್ಯ.

ಜೀವಿಸುವುದಕ್ಕಾಗಿ ಹಣ ಸಂಪಾದಿಸಬೇಕೆ ಹೊರತು ಹಣ ಸಂಪಾದನೆಯೇ ಜೀವನ ಆಗಬಾರದು. ಹಣ ಗಳಿಸುವುದು ಎಷ್ಟು ಮುಖ್ಯನೂ ಗಳಿಸಿದ ಹಣದಿಂದ ಭೋಗಗಳನ್ನು ಅನುಭವಿಸಿ ಆನಂದಿಸುವುದು. ಸತ್ಕಾರ್ಯ, ಸೇವೆಗಳಿಗೆ ಬಳಸುವುದು ಸಹ ಅಷ್ಟೇ ಮುಖ್ಯ. ಸುಮ್ಮನೆ ಹಣವನ್ನು ಕೂಡಿಟ್ಟರೆ ಬದುಕೇ ವ್ಯರ್ಥ, ಹಾಗಾಗಿ ಹಣಕ್ಕಿಂತ ಭೋಗ ಮುಖ್ಯ. ಇಷ್ಟೆಲ್ಲಾ ಮ್ಯಾಜಿಕ್ ಹಣದ ಮಹತ್ವ ಅರಿತು ಚರ್ಚಿಸಿದರೂ ಕೊನೆಯದಾಗಿ ನನ್ನ ಅನಿಸಿಕೆ ಹಣ, ಆಸ್ತಿ, ಸಂಪತ್ತು ಹೊಂದಿದ ಶ್ರೀಮಂತರಿಗಿಂತ ಆರೋಗ್ಯ, ನೆಮ್ಮದಿ, ತೃಪ್ತಿ ಸಂತೋಷ ಹೊಂದಿರುವಂತಹ ವ್ಯಕ್ತಿಯೇ ದೊಡ್ಡ ಶ್ರೀಮಂತ ಸಂತೋಷ ಮತ್ತು ನೆಮ್ಮದಿಗಿಂತ ಸುಖವಿಲ್ಲ. ಅದ್ದರಿಂದ ನೆಮ್ಮದಿಯಲ್ಲಿ ಶ್ರೀಮಂತರಾಗೋಣ.

**ಹೆಚ್. ವಿ. ಮಂಜುನಾಥ ಸ್ವಾಮಿ**
**ಮೊ : 9844882366**

# ಫೆ.15 ರಂದು ಸಮಗ್ರ ಕೃಷಿ ಪದ್ಧತಿ ಉತ್ಕೃಷ್ಟ ಕೇಂದ್ರದ ಕಟ್ಟಡ ಉದ್ಘಾಟನೆ

**ಹಾಸನ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ಹಾಗೂ ನಬಾರ್ಡ್ ಸಹಯೋಗದಲ್ಲಿ ಸಕಲೇಶಪುರದ ಎ.ಪಿ.ಎಂ.ಸಿ ಆವರಣದಲ್ಲಿ ಫೆ.15 ರಂದು ಬೆ.10 ಗಂಟೆಗೆ ಸಮಗ್ರ ಕೃಷಿ ಪದ್ಧತಿ ಉತ್ಕೃಷ್ಟ ಕೇಂದ್ರದ ಕಟ್ಟಡ ಉದ್ಘಾಟನೆ ಹಾಗೂ ಕೃಷಿ ವಸ್ತು ಪ್ರದರ್ಶನ ಮತ್ತು ಸವಲತ್ತು ವಿತರಣಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಮಾಜಿ ಪ್ರಧಾನ ಮಂತ್ರಿಗಳು ಹಾಗೂ ರಾಜ್ಯಸಭಾ ಸದಸ್ಯರಾದ ಹೆಚ್.ಡಿ.ದೇವೇಗೌಡ ಅವರು ಗೌರವ ಉಪಸ್ಥಿತಿ ವಹಿಸಲಿದ್ದಾರೆ.

ಸಹಕಾರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎನ್.ರಾಜಣ್ಣ ಕಟ್ಟಡ ಉದ್ಘಾಟನೆ ಮಾಡಲಿದ್ದಾರೆ,

ರಾಜ್ಯ ಕೃಷಿ ಸಚಿವರಾದ ಎನ್. ಚಲುವರಾಯಸ್ವಾಮಿ ಕೃಷಿ ವಸ್ತು ಪ್ರದರ್ಶನ ಉದ್ಘಾಟನೆ ಮತ್ತು ಸವಲತ್ತು ವಿತರಣೆ ಮಾಡಲಿದ್ದಾರೆ, ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ ಘನ ಉಪಸ್ಥಿತಿವಹಿಸಲಿದ್ದಾರೆ, ಶಾಸಕರಾದ ಸಿಮೆಂಟ್ ಮಂಜು (ಎಸ್ ಮಂಜಿನಾಥ್) ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಸಂಸದರಾದ ಶ್ರೇಯಸ್ ಎಂ.ಪಟೇಲ್, ಶಾಸಕರುಗಳಾದ ಹೆಚ್.ಡಿ.ರೇವಣ್ಣ, ಡಾ.



ಸಿ.ಎನ್.ಬಾಲಕೃ?, ಎ.ಮಂಜು, ಹೆಚ್. ಕೆ.ಸುರೇಶ್, ಸ್ವರೂಪ್ ಪ್ರಕಾಶ್, ವಿಧಾನ ಪರಿ?ತ್ ಶಾಸಕರುಗಳಾದ ಮಧು ಜಿ.ಮಾದೇಗೌಡ, ಕೆ.ವಿವೇಕಾನಂದ,

ಡಾ॥ ಸೂರಜ್ ರೇವಣ್ಣ ಹಾಗೂ ಸಕಲೇಶಪುರ ಪುರಸಭೆಯ ಅಧ್ಯಕ್ಷರಾದ ಜ್ಯೋತಿ ರಾಜ್‌ಕುಮಾರ್, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾದ ಡಾ. ಎಂ.ಸಿ. ರಂಗಸ್ವಾಮಿ, ಸಕಲೇಶಪುರ ತಾಲ್ಲೂಕು ಕೃಷಿಕ ಸಮಾಜದ ಅಧ್ಯಕ್ಷರಾದ ದೇವರಾಜು ಹೆಚ್.ಎಂ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

# ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಖಂಡನೆ

## 5ನೇ ದಿನಕ್ಕೆ ಕಾಲಿಟ್ಟ ಭೂಮಿ ವಂಚಿತರ ಹೋರಾಟ ಸಮಿತಿ ಅಹೋರಾತ್ರಿ ಧರಣಿ ಸತ್ಯಾಗ್ರಹ । ಜಿಲ್ಲಾಧಿಕಾರಿಗಳಿಗೆ ಮನವಿ

**ಶಿವಮೊಗ್ಗ:** ದಲಿತ ವಿರೋಧಿ ನೀತಿ ಅನುಸರಿಸುತ್ತಿರುವ ಕಂದಾಯ ಅಧಿಕಾರಿಗಳ ವಿರುದ್ಧ ಪಿಟಿಸಿಎಲ್ ಕಾಯ್ದೆ ಭೂಮಿ ವಂಚಿತರ ಹೋರಾಟ ಸಮಿತಿಯ ಅಹೋರಾತ್ರಿ ಧರಣಿ ಸತ್ಯಾಗ್ರಹ 5ನೇ ದಿನಕ್ಕೆ ಕಾಲಿಟ್ಟಿದೆ.

ಶಿವಮೊಗ್ಗ ತಾಲ್ಲೂಕು, ಹಸೂಡಿ ಗ್ರಾಮದ ಸರ್ವೆ ನಂ. 134/6 ರಲ್ಲಿ 2 ಎಕರೆ ಜಮೀನನ್ನು ಪಿ.ಟಿ.ಸಿ.ಎಲ್. ಕಾಯ್ದೆ ಅಡಿಯಲ್ಲಿ ಜಮೀನನ್ನು ಮರುಸ್ವಾಧೀನಪಡಿಸಿ ಕೊಡಬೇಕೆಂದು ಈ ಹಿಂದೆ ಮಾನ್ಯ ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಪಿ.ಟಿ.ಸಿ.ಎಲ್. ಸಿ.ಆರ್. ನಂ. 29/1980–81,, ದಿನಾಂಕ: 11–12–1985 ರಂದು ಆದೇಶವಾಗಿದ್ದು ಹಾಗೂ ಹೈಕೋರ್ಟ್‌ನಲ್ಲಿ ಜಮೀನು ತೆರವುಗೊಳಿಸುವ ನೋಟಿಸ್ ನೀಡಿ ಶೀಘ್ರದಲ್ಲಿ ಜಮೀನನ್ನು ಸ್ವಾಧೀನ ಮರುಸ್ಥಾಪಿಸಬೇಕೆಂದು ಆದೇಶಿಸಿದ್ದು, ಕಂದಾಯ ಅಧಿಕಾರಿಗಳು ಹೈಕೋರ್ಟ್ ಆದೇಶಕ್ಕೂ ಮನ್ನಣೆ ನೀಡದೇ ಕಾಲಹರಣ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಹೈಕೋರ್ಟ್ ಆದೇಶದಂತೆ ಜ.09ರಂದು ಜಮೀನನ್ನು ನಮಗೆ ಜಿ.ಜೆ. ವೆಂಕಟೇಶ್ ಬಿನ್



ಜಗದೀಶ್ ಕೆ ಇವರಿಂದ ಬಿಡಿಸಿಕೊಡಬೇಕೆಂದು ಜೆ.ಪಿ.ಉಮಾದೇವಿ ಅವರು ಕೇಳಿಕೊಂಡಿದ್ದರು ಸಹ ಉಪವಿಬಾಗಾಧಿಕಾರಿಗಳು ಹಾಗೂ ಕಂದಾಯ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಅಹೋರಾತ್ರಿ ಧರಣಿ ಸತ್ಯಾಗ್ರಹದಲ್ಲಿ ರಾಜ್ಯಾಧ್ಯಕ್ಷ ಮಂಜುನಾಥ್, ಉಪಾಧ್ಯಕ್ಷ ಜಗದೀಶ್, ಉಮಾದೇವಿ, ಶಿರಾ,ವೇಣುಗೋಪಾಲ್,ಚಂದ್ರಪ್ಪ,ಕರಿಯಪ್ಪ, ಚನ್ನಕೇಶವ ಬಾಧಿತರು,ರುದ್ರಮ್ಮ ಸೇರಿದಂತೆ ಮತ್ತಿತರರಿದ್ದರು.

# ನಾಡಿನ ಆರು ಸಾಧಕರಿಗೆ "ದೇವರಾಜ ಅರಸು ಪ್ರಶಸ್ತಿ"

## ಫೆ.16 ರಂದು "ಧ್ವನಿ ಕೊಟ್ಟ ಧಣಿ ರಾಜ್ಯ ಪ್ರಶಸ್ತಿ ಪ್ರದಾನ

**ಮೈಸೂರು:** ಸಾಮಾಜಿಕ ನ್ಯಾಯ, ಹಿಂದುಳಿದ ವರ್ಗಗಳ ಹರಿಕಾರ, ಮಾಜಿ ಮುಖ್ಯಮಂತ್ರಿಗಳಾದ ಡಿ.ದೇವರಾಜ್ ಅರಸು ಅವರ ಹೆಸರಿನಲ್ಲಿ ಮೈಸೂರಿನ ಅನ್ವೇಷಣಾ ಸೇವಾ ಟ್ರಸ್ಟ್ ಕೊಡಮಾಡುವ "ಧ್ವನಿ ಕೊಟ್ಟ ಧಣಿ? ರಾಜ್ಯ ಪ್ರಶಸ್ತಿಗೆ ನಾಡಿನ ಆರು ಜನ ಸಾಧಕರು ಆಯ್ಕೆಯಾಗಿದ್ದಾರೆ ಎಂದು ಅನ್ವೇಷಣಾ ಸೇವಾ ಟ್ರಸ್ಟ್ ಅಧ್ಯಕ್ಷರಾದ ಡಾ.ಎಂ.ಜಿ.ಆರ್.ಅರಸ್ ತಿಳಿಸಿದ್ದಾರೆ.

ಮೈಸೂರಿನ ಹಿರಿಯ ಪತ್ರಕರ್ತ, ಚಿಂತಕ ಟಿ. ಗುರುರಾಜ್, ಸಂಘಟಕ, ಹೋರಾಟಗಾರ ರಮೇಶ್ ಸುರ್ವೆ, ಹಿರಿಯ ಸಾಹಿತಿ ಸಿ.ಕೆ. ಜೋರಾಪುರ, ಅಖಿಲಭಾರತ ಅಂಚೆ ನೌಕರರ ಸಂಘ ಅಧ್ಯಕ್ಷರಾದ ಎನ್. ಕೃಷ್ಣ, ಹಾಸನ ಜಿಲ್ಲೆಯ ಖ್ಯಾತ ಯೋಗ ಶಿಕ್ಷಕಿ ಪ್ರೇಮಾ ಮಂಜುನಾಥ್, ಚಿತ್ರದುರ್ಗದ ಪತ್ರಕರ್ತ, ಸಂಶೋಧಕ ಮಾಲತೇಶ್ ಅರಸ್ ಅವರಿಗೆ ಫೆಬ್ರವರಿ 16 ರಂದು ಮೈಸೂರು ನಗರದ ಜೆ. ಎಲ್. ಬಿ ರಸ್ತೆಯ ದಿ ಇನಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಪ್ರಶಸ್ತಿ ಪ್ರದಾನ ನಡೆಯಲಿದೆ.

ಅಖಿಲ ಭಾರತ ರಾಷ್ಟ್ರೀಯ ಕಾಂಗ್ರೆಸ್ ಸಮಿತಿ ರಾಷ್ಟ್ರೀಯ ಕಾರ್ಯದರ್ಶಿಗಳು, ಗ್ಯಾರಂಟಿ ಯೋಜನೆ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷರೂ ದೇವರಾಜ ಅರಸು ಮೊಮ್ಮಗ ಸೂರಜ್ ಹೆಗ್ಡೆ ಅವರು ಸಮಾರಂಭ

ಉದ್ಘಾಟಿಸಲಿದ್ದಾರೆ. ವಿಧಾನ ಪರಿಷತ್ ಸದಸ್ಯರೂ ಅರಸು ಜಾಗೃತಿ ಅಕಾಡೆಮಿ ಅಧ್ಯಕ್ಷರಾದ ಡಾ.ಡಿ.ತಿಮ್ಮಯ್ಯ, ದೇವರಾಜ ಅರಸ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವರು.

ಧ್ವನಿಕೊಟ್ಟ ಧಣಿ ಪ್ರಶಸ್ತಿಯನ್ನು ಗಂಗೂಬಾಯ್ ಹಾನಗಲ್ ಸಂಗೀತ ವಿಶ್ವ ವಿದ್ಯಾನಿಲಯ, ಮೈಸೂರು ಕುಲಪತಿಗಳಾದ ಡಾ. ನಾಗೇಶ್ ವಿ. ಬೆಟ್ಟಕೋಟೆ ಪ್ರದಾನ ಮಾಡಲಿದ್ದಾರೆ.

"ಅರಸು ಪತ್ರಿಕೆ' 12ನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ಹೊರತಂದಿರುವ ವಿಶೇಷ




ಸಂಚಿಕೆ ಲೋಕಾರ್ಪಣೆಯನ್ನು ಆರ್ಯ ಅಮರ್‌ನಾಥರಾಜೇ ಅರಸ್ ಸ್ಥಾಪಕ ಅಧ್ಯಕ್ಷರು, ಅನ್ವೇಷಣಾ ಸೇವಾ ಟ್ರಸ್ಟ್ ನೆರವೇರಿಸಲಿದ್ದಾರೆ. ಕರ್ನಾಟಕ ಸರ್ಕಾರದ ಕಂಠೀರವ ಸ್ಟುಡಿಯೋ ಮಾಜಿ ಅಧ್ಯಕ್ಷರಾದ ಶ್ರೀಮತಿ ವಿಜಯಲಕ್ಷ್ಮಿ ಅರಸ್ ಅವರು ಅಧ್ಯಕ್ಷತೆ ವಹಿಸುವರು.

ಪುಸ್ತಕ ತಾಂಬೂಲ ವಿತರಣೆಯನ್ನು ಹೆಚ್.ವಿ. ರಾಜೀವ ಸ್ವಚ್ಛ ಭಾರತ ರೂವಾರಿಗಳು ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಎಂ. ಶಿವಣ್ಣ ಮಾಜಿ ಹಣಕಾಸು ಮಂತ್ರಿಗಳು, ಕರ್ನಾಟಕ ಸರ್ಕಾರ, ಎಚ್.ಎ. ವೆಂಕಟೇಶ್ ಉಪಾಧ್ಯಕ್ಷರು, ಅರಸು ಜಾಗೃತಿ ಅಕಾಡೆಮಿ ಚಾರಿಟಬಲ್ ಟ್ರಸ್ಟ್ ಭಾಗವಹಿಸುವರು ಎಂದು ಅಧ್ಯಕ್ಷರಾದ ಡಾ.ಎಂ.ಜಿ.ಆರ್. ಅರಸ್ ತಿಳಿಸಿದ್ದಾರೆ.( ಮಾಹಿತಿಗಾಗಿ: 94484 02092. )

ಅರಸು ಪ್ರಶಸ್ತಿ ಪುರಸ್ಕೃತರು

ಮಾಜಿ ಮುಖ್ಯಮಂತ್ರಿಗಳಾದ ಡಿ.ದೇವರಾಜ್ ಅರಸು ಅವರ ಹೆಸರಿನಲ್ಲಿ ಮೈಸೂರಿನ ಅನ್ವೇಷಣ ಕೊಡಮಾಡುವ "ಧ್ವನಿ ಕೊಟ್ಟ ಧಣಿ? ರಾಜ್ಯ ಪ್ರಶಸ್ತಿಗೆ ಮೈಸೂರಿನ ಹಿರಿಯ

ಪತ್ರಕರ್ತ, ಚಿಂತಕ ಟಿ. ಗುರುರಾಜ್, ಸಂಘಟಕ, ಕೊಪ್ಪಳದ ಹೋರಾಟಗಾರ ರಮೇಶ್ ಸುರ್ವೆ, ಹಿರಿಯ ಸಾಹಿತಿ ಸಿ.ಕೆ. ಜೋರಾಪುರ, ಅಖಿಲಭಾರತ ಅಂಚೆ ನೌಕರರ ಸಂಘ ಅಧ್ಯಕ್ಷರಾದ ಎನ್.ಕೃಷ್ಣ, ಹಾಸನ ಜಿಲ್ಲೆಯ ಖ್ಯಾತ ಯೋಗ ಶಿಕ್ಷಕಿ ಪ್ರೇಮಾ ಮಂಜುನಾಥ್, ಚಿತ್ರದುರ್ಗದ ಪತ್ರಕರ್ತ, ಸಂಶೋಧಕ ಮಾಲತೇಶ್ ಅರಸ್ ಇವರಿಗೆ ಪ್ರಶಸ್ತಿ ಲಭಿಸಿದೆ.

# ಬಿ.ಎಸ್ಸಿ ಅಲೈಡ್ ಹೆಲ್ತ್ ಸೈನ್ಸ್ : ಆಯ್ಕೆ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲು ಆಹ್ವಾನ

**ಶಿವಮೊಗ್ಗ:** ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಶಿವಮೊಗ್ಗ ಇಲ್ಲಿ ಬಿ.ಎಸ್ಸಿ. ಅಲೈಡ್ ಹೆಲ್ತ್ ಸೈನ್ಸ್ ವಿಭಾಗದ 2024–25 ನೇ ಸಾಲಿಗೆ ಕೆಇಎ ನಲ್ಲಿ ಆನ್‌ಲೈನ್ ಅರ್ಜಿಗಳನ್ನು ಹಾಕಿದ ವಿದ್ಯಾರ್ಥಿಗಳು ಎಲ್ಲ ಮೂಲ ದಾಖಲಾತಿಗಳೊಂದಿಗೆ ಫೆ.13 ರಂದು ಖುದ್ದಾಗಿ ಬಂದು ಸಿಮ್ಸ್ ಕಚೇರಿಯಲ್ಲಿ ಆಯ್ಕೆ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬೇಕು. ಬ್ಯಾಚುಲರ್ ಆಫ್ ಸೈನ್ಸ್ ಇನ್ ಅನಸ್ತೇಷಿಯಾ & ಆಪರೇಷನ್ ಟೆಕ್ನಾಲಜಿ, ಬ್ಯಾಚುಲರ್ ಆಫ್ ಸೈನ್ಸ್ ಇನ್ ಕಾರ್ಡಿಯಾಕ್ ಕೇರ್ ಟೆಕ್ನಾಲಜಿ, ಬ್ಯಾಚುಲರ್ ಆಫ್ ಸೈನ್ಸ್ ಇನ್ ರೆಸ್ಪಿರೇಟರಿ ಕೇರ್ ಟೆಕ್ನಾಲಜಿ, ಬ್ಯಾಚುಲರ್ ಆಫ್ ಸೈನ್ಸ್ ಇನ್ ಮೆಡಿಕಲ್ ಇಮೇಜಿಂಗ್ ಟೆಕ್ನಾಲಜಿ, ಬ್ಯಾಚುಲರ್ ಆಫ್ ಸೈನ್ಸ್ ಇನ್ ಮೆಡಿಕಲ್ ಲ್ಯಾಬೊರೇಟರಿ ಟೆಕ್ನಾಲಜಿ ಈ ಐದು ಕೋರ್ಸ್‌ಗಳಿಗೆ ಕೆಇಎ ನಲ್ಲಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಮಾತ್ರ ಪಾಲ್ಗೊಳ್ಳಬೇಕು. ಹೆಚ್ಚಿನ ಮಾಹಿತಿಗೆ ದೂ.ಸಂ: 08182 269710 ನ್ನು ಸಂಪರ್ಕಿಸಬಹುದೆಂದು ಸಿಮ್ಸ್ ನಿರ್ದೇಶಕರು ತಿಳಿಸಿದ್ದಾರೆ.

# ಗ್ರಾಮೀಣ ಅಂಚೆ ಸೇವಕರ ನೇಮಕಾತಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಅಂಚೆ ಇಲಾಖೆಯಲ್ಲಿ ಖಾಲಿ ಇರುವ ಶಾಖಾ ಅಂಚೆ ಪಾಲಕ, ಸಹಾಯಕ ಶಾಖಾ ಅಂಚೆ ಪಾಲಕ ಮತ್ತು ಡಾಕ್ ಸೇವಕ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ.

ದಿನಾಂಕ: 03–03–2025 ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದ್ದು ವೆಬ್‌ಸೈಟ್ www.indiapostgdsonline.gov.in ಮೂಲಕವೇ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಬೇಕು. ಎಲ್ಲಾ ಹುದ್ದೆಗಳಿಗೆ 10 ನೇ ತರಗತಿ ತೇರ್ಗಡೆ ಕಡ್ಡಾಯ. ಗಣಿತ ಮತ್ತು ಇಂಗ್ಲಿಷ್‌ನಲ್ಲಿ ಕನಿಷ್ಟ ತೇರ್ಗಡೆ ಅಂಕ ಹೊಂದಿರಬೇಕು. ಕನ್ನಡವನ್ನು ಹತ್ತನೇ ತರಗತಿಯಲ್ಲಿ ಒಂದು ಭಾಷೆಯಾಗಿ ಅಧ್ಯಯನ ಮಾಡಿರಬೇಕು.

18 ರಿಂದ 40 ವರ್ಷ ವಯೋಮಿತಿ ಹೊಂದಿರುವ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದು. ಶಿವಮೊಗ್ಗ ಅಂಚೆ ವಿಭಾಗದಲ್ಲಿ 36 ಹುದ್ದೆಗಳು ಖಾಲಿ ಇರುತ್ತವೆ. ಹೆಚ್ಚಿನ ಮಾಹಿತಿಗೆ ಆಯಾ ವಿಭಾಗದ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದು. ಶಿವಮೊಗ್ಗ ಅಂಚೆ ವಿಭಾಗದ ಸಂಪರ್ಕ ಸಂಖ್ಯೆ 08182–222516 ಆಗಿರುತ್ತದೆ ಎಂದು ಶಿವಮೊಗ್ಗ ಅಂಚೆ ವಿಭಾಗದ ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.

# ಪ್ರಾಥಮಿಕ ಆರೋಗ್ಯ, ಕೌಶಲ್ಯ ಅಭಿವೃದ್ಧಿಗೆ ಎಸ್‌ಎಂಎಫ್‌ಜಿ ಹಲವು ಯೋಜನೆ

**ದಾವಣಗೆರೆ:** ರಾಜ್ಯದ ವಿವಿಧೆಡೆ ಪ್ರಾಥಮಿಕ ಆರೋಗ್ಯ, ಕಣ್ಣಿನ ಆರೈಕೆ, ಕೌಶಲ್ಯ ಅಭಿವೃದ್ಧಿ, ಜಾನುವಾರು ಆರೈಕೆ ಮೂಲಕ ಜನಸಾಮಾನ್ಯರ ಜೀವನ ಸುಧಾರಣೆಗೆ ನೆರವಾಗುವ ಹಲವು ಸಿಎಸ್‌ಆರ್ ಯೋಜನೆಗಳನ್ನು ಎಸ್‌ಎಂಎಫ್‌ಜಿ ಇಂಡಿಯಾ ಕ್ರೆಡಿಟ್ ಪ್ರಕಟಿಸಿದೆ.

ಕಳೆದ ಹಲವು ವರ್ಷಗಳಿಂದ ರಾಜ್ಯದಲ್ಲಿ ಈ ಸಿಎಸ್‌ಆರ್ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ನಿರ್ಮಯ ಪ್ರಾಥಮಿಕ ಆರೋಗ್ಯ ಯೋಜನೆಯಡಿ ರಾಯಚೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ 2 ಮೊಬೈಲ್ ಹೆಲ್ತ್ ವ್ಯಾನ್‌ಗಳನ್ನು ಒದಗಿಸಿದ್ದು, ಕಳೆದ ಮೂರು ವರ್ಷಗಳಲ್ಲಿ ರಾಜ್ಯದ 1.4 ಲಕ್ಷಕ್ಕೂ ಹೆಚ್ಚು ಜನರಿಗೆ ವೈದ್ಯಕೀಯ ನೆರವು ಒದಗಿಸಿದೆ. ಜ್ಯೋತಿ ಯೋಜನೆ ಮೂಲಕ ಮನೆಬಾಗಿಲಿನಲ್ಲಿ ಗುಣಮಟ್ಟದ ನೇತ್ರ ಚಿಕಿತ್ಸೆ ಒದಗಿಸುತ್ತಿದ್ದು, 43 ಸಾವಿರಕ್ಕೂ ಹೆಚ್ಚು ಮಂದಿ ಇದರ ಪ್ರಯೋಜನ ಪಡೆದಿದ್ದಾರೆ ಎಂದು ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸ್ವಾಮಿನಾಥನ್ ಸುಬ್ರಮಣಿಯನ್ ಪ್ರಕಟಣೆಯಲ್ಲಿ ಹೇಳಿದ್ದಾರೆ.

ಯುವ ಕೌಶಲ್ ಯೋಜನೆಯ ಮೂಲಕ ಯುವಕರಿಗೆ ಕೌಶಲ್ಯ ಅಭಿವೃದ್ಧಿ ತರಬೇತಿ ನೀಡಲಾಗುತ್ತಿದ್ದು, ಉತ್ತಮ ವೃತ್ತಿ ಅವಕಾಶಗಳನ್ನು ಕಲ್ಪಿಸಿಕೊಡಲಾಗಿದೆ. ಕೌಶಲ್ಯಾಭಿವೃದ್ಧಿ ಮತ್ತು ಸಮುದಾಯ ನೆರವು ಕಾರ್ಯಕ್ರಮಗಳ ಮೂಲಕ 18,500 ಕ್ಕೂ ಹೆಚ್ಚು ಜನರಿಗೆ ಪ್ರಯೋಜನವನ್ನು ನೀಡಿದೆ. ಪಶು ವಿಕಾಸ್ ಡೇ ಯೋಜನೆಯ ಮೂಲಕ 12,500 ಜಾನುವಾರುಗಳ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ವಿವರಿಸಿದ್ದಾರೆ.

"ನಮ್ಮ ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು ಬದಲಾವಣೆಯ ವೇಗವರ್ಧಕವಾಗಿ ಕಾರ್ಯನಿರ್ವಹಿಸುತ್ತವೆ. ಗ್ರಾಮೀಣ ಸಮುದಾಯಗಳ ಜೀವನ ಉತ್ತಮಗೊಳಿಸುವುದು, ಒಟ್ಟಾರೆ ಜೀವನದ ಗುಣಮಟ್ಟವನ್ನು ಹೆಚ್ಚಿಸುವುದು ಮತ್ತು ಆದಾಯ ಹೆಚ್ಚಿಸುವುದು ಈ ಯೋಜನೆಗಳ ಗುರಿ ಆಗಿದೆ. ನವೀನ ಮತ್ತು ಸುಸ್ಥಿರ ಸಾಮಾಜಿಕ-ಆರ್ಥಿಕ ಯೋಜನೆಗಳ ಮೂಲಕ ಆರ್ಥಿಕವಾಗಿ ಹಿಂದುಳಿದ ಸಮುದಾಯಗಳಲ್ಲಿ ಬೆಳವಣಿಗೆಗೆ ಪ್ರೋತ್ಸಾಹ ನೀಡಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.

# ಕಿಡಿಗೇಡಿಗಳಿಂದ ಶೆಡ್‌ಗೆ ಬೆಂಕಿ 20 ಲಕ್ಷ ರೂ. ಮೌಲ್ಯದ ವಸ್ತುಗಳು ಭಸ್ಮ



**ಬೀರೂರು:** ದೇವಾಲಯಕ್ಕೆ ಜಾಗ ನೀಡಲಿಲ್ಲವೆಂಬ ಸಬೂಬು ಮಾಡಿಕೊಂಡು ಮಿನಿಟ್ರಾಕ್ಟರ್, ಮೋಟಾರು, ಕೇಬಲ್, ಹುಲ್ಲಿನ ಬವಣೆ, 3 ಸಾವಿರ ಕೊಬ್ಬರಿ ಇದ್ದ ಶೆಡ್ಡಿಗೆ ಗ್ರಾಮದ ಕಿಡಿಗೇಡಿಗಳು ಬೆಂಕಿ ಹಾಕಿದ ಪರಿಣಾಮ 20 ಲಕ್ಷಕ್ಕೂ ಅಧಿಕ ವಸ್ತುಗಳು ಸುಟ್ಟು ಕರಕಲಾಗಿರುವ ಘಟನೆ ಸೋಮವಾರ ರಾತ್ರಿ ನಡೆದಿದೆ. ಬೀರೂರು ಸಮೀಪದ ದೊಡ್ಡಘಟ್ಟ ಗ್ರಾಮದ ತೆಲುಗುಗೌಡ ಸಮಾಜದ ಮೈಲಾರಪ್ಪ, ಜಯಮ್ಮ ದಂಪತಿಗಳಿಗೆ ಸೇರಿದ್ದ ಶೆಡ್‌ನಲ್ಲಿ ಈ ಅಹಿತಕರ ಘಟನೆ ನಡೆದಿದ್ದು, ಬಡಕುಟುಂಬದ ಆಕ್ರಂದನದ ಜೊತೆ ನಮಗೆ ನ್ಯಾಯ ನೀಡುವವರು ಯಾರು ಎಂದು ಗೋಳಾಡುತ್ತಿದ್ದು ಮಂಗಳವಾರ ಬೆಳಗ್ಗೆ ಕಂಡು ಬಂದಿದೆ.

ಘಟನೆ ವಿವರ: ದೊಡ್ಡಘಟ್ಟ ಗ್ರಾಮದಲ್ಲಿ ಸುಮಾರು 90 ಮನೆಗಳಿದ್ದು, ತೆಲುಗುಗೌಡ ಜನಾಂಗ ಸೇರಿದಂತೆ ಮತ್ತಿತರರ ಸಮಾಜದವರು ವಾಸಿಸುತ್ತಿದ್ದಾರೆ. ಇದೇ ಗ್ರಾಮದ ಮುಂಭಾಗದಲ್ಲಿ ಸುಮಾರು ವರ್ಷಗಳ ಹಿಂದೆ ಊರಿನ ಹಿರಿಯರು ಗ್ರಾಮಕ್ಕೆ ಗುಳ್ಳಮ್ಮದೇವಿ ಕಟ್ಟಿಸಬೇಕು ಎಂದು ತೀರ್ಮಾನಿಸಿದ್ದರು. ಅದರಂತೆ ಗ್ರಾಮದವರೆಲ್ಲ ಒಂದಾಗಿ ದೇವಸ್ಥಾನ ನಿರ್ಮಾಣದ ಕಾಮಗಾರಿ ಆರಂಭಿಸಿದಾಗ ದೇವಾಲಯದ ಜೊತೆ ಶಿಕ್ಷಣಕ್ಕೆ ಆದ್ಯತೆ ನೀಡಿ ಶಾಲೆ ಕಟ್ಟಿಸಲು ಇನ್ನು ಹೆಚ್ಚಿನ ಜಾಗ ಬೇಕು ಎಂದು ಊರಿನ ಹಿರಿಯರು ತೀರ್ಮಾನಿಸಿ, ಅದರಂತೆ ದೇವಾಲಯ ಮುಂಭಾಗದ ಸರ್ವೆ.ನಂ 74ರ ಮೈಲಾರಪ್ಪನವರ ತಂದೆಯ ಜಮೀನು ಬಿಡುವಂತೆ ಕೇಳಿದಾಗ ಅವರು ಒಪ್ಪಿ ಶಾಲೆ, ದೇವಸ್ಥಾನಕ್ಕೆ 18 ಗುಂಟೆ ಜಮೀನು ಬಿಟ್ಟುಕೊಟ್ಟಿದ್ದಾರೆ.

ಪತ್ರಿಕೆಯೊಂದಿಗೆ ಮಾತನಾಡಿದ ನೊಂದ ಜಯಮ್ಮ, ಇತ್ತೀಚೆಗೆ ಗ್ರಾಮದ ಮುಖಂಡರು ದೇವಿಯ ಜಾತ್ರೆ ಸಮಯದಲ್ಲಿ ರಥ ತಿರುಗಲು, ಪಾನಕದ ಬಂಡಿ ಓಡಿಸಲು, ಸಾಂಸ್ಕೃತಿಕ ಕಾರ್ಯಕ್ರಮ ನಡೆಸಲು ದೇವಸ್ಥಾನಕ್ಕೆ ಜಾಗ ಸಾಕಾಗುತ್ತಿಲ್ಲ. ನಿಮ್ಮ ಬಳಿ ಇರುವ ಒಂದು ಎಕರೆ ಕೃಷಿ ಭೂಮಿ ಬಿಡುವಂತೆ ಒತ್ತಾಯಿಸಿದರು. ಮೈಲಾರಪ್ಪ ಮತ್ತು ಕುಟುಂಬದವರನ್ನು ಕರೆಸಿ ಗ್ರಾಮದಲ್ಲೇ ಪಂಚಾಯ್ತಿ ನಡೆಸಿಗಾದ ಅಂದು ಕುಟುಂಬದವರು ಒಪ್ಪದೆ ಇದ್ದ ಹಿನ್ನಲೆಯಲ್ಲಿ ಕೆಲವು ಮುಖಂಡರು ನಮ್ಮನ್ನು ಊರಿಂದ ಒಂದು ತಿಂಗಳ ಕಾಲ ಬಹಿಷ್ಕಾರ ಹಾಕಿದ್ದರು.

ತದ ನಂತರದ ದಿನಗಳಲ್ಲಿ ಇದರ ವಿರುದ್ಧ ಜಿಲ್ಲಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆಗೆ ದೂರು ನೀಡಿದ ವಿಷಯ ಗ್ರಾಮದ ಮುಖಂಡರಿಗೆ ತಿಳಿದಾಗ ಮತ್ತೆ ಪಂಚಾಯ್ತಿ ನಡೆಸಿ ಗ್ರಾಮಸ್ಥರು, ಹಲ್ಲೆ ನಡೆಸಿದರು. ದೇವಸ್ಥಾನದ ಕಾರ್ಯಕ್ರಮಗಳಿಗೆ ಗ್ರಾಮದ ಹತ್ತಿರದಲ್ಲೇ ಸರ್ಕಾರ 3 ಎಕರೆ ಜಮೀನು ನೀಡಿದ್ದರು ಸಹ ನಮ್ಮ ಜಮೀನು ಯಾಕೆ. ಊರಿನವರೆಲ್ಲ ಒಂದಾಗಿ ನಮಗೆ ಜೀವನ ಸಾಗಿಸಲು ಬಿಡುತ್ತಿಲ್ಲ. ನಾವೇನು ಅನ್ಯಾಯ ಮಾಡಿದ್ದೇವೆ. ಈ ಅನ್ಯಾಯವನ್ನು ಸರ್ಕಾರ, ಜಿಲ್ಲಾಧಿಕಾರಿಗಳು ಪರಿಶೀಲಿಸಿ ನಮಗೆ ನ್ಯಾಯ ದೊರತಕಿಸಿ ಕೊಡಬೇಕು ಎಂದು ಪತ್ರಿಕೆಯೊಂದಿಗೆ ಕಣ್ಣೀರಿಟ್ಟರು.

ಮಗ ಪ್ರದೀಪ್ ಮಾತನಾಡಿ, ಗ್ರಾಮದ ಗೌಡರು ಇಂತಹ ಪ್ರಜಾಪ್ರಭುತ್ವ ದೇಶದಲ್ಲಿ ನಮಗೆ ಬದುಕಲು ಬಿಡುತ್ತಿಲ್ಲ. ಇದನ್ನು ಸಹಿಸದ ಕಿಡಿಗೇಡಿಗಳು ಕಳೆದ ರಾತ್ರಿ 11.45ರ ಸುಮಾರಿನಲ್ಲಿ ಇಂತಹ ಕೃತ್ಯ ಎಸಗಿದ್ದಾರೆ. ಅನ್ಯಾಯವೆಸಗಿದವರ ವಿರುದ್ಧ ನ್ಯಾಯ ಒದಗಿಸುವಂತೆ ಬೀರೂರು ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ ಎಂದರು.

# ಕೃಷಿ ಕಾಯ್ದೆ ವಾಪಸ್ ಪಡೆಯಲು ಆಗ್ರಹ



**ಚನ್ನಗಿರಿ:** ರೈತ ವಿರೋಧಿ ಕೃಷಿ ಕಾಯ್ದೆಗಳನ್ನು ವಾಪಾಸ್ ಪಡೆಯುವುದಾಗಿ ಚುನಾವಣೆಯ ಸಂದರ್ಭದಲ್ಲಿ ಪ್ರಣಾಳಿಕೆಯಲ್ಲಿ ಹೇಳಿ ಲಿಖಿತ ಭರವಸೆ ಕೊಟ್ಟು ಮಾತಿಗೆ ತಪ್ಪಿದ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ನಡೆ ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಕಾರ್ಯಕರ್ತರು ತಾಲೂಕು ಸಂಘದ ಅಧ್ಯಕ್ಷ ಮಲಹಾಳ್ ತಿಪ್ಪೇಶಪ್ಪ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ತಹಸೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಲಹಾಳ್ ತಿಪ್ಪೇಶಪ್ಪ, ಕೇಂದ್ರ ಸರ್ಕಾರ ಕಾರ್ಪೋರೇಟ್ ಕಂಪನಿಗಳ ಪರವಾಗಿ ರೈತರ ವಿರೋಧಿಯಾದ ಮೂರು ಕೃಷಿ ಕಾಯ್ದೆಗಳನ್ನು ಜಾರಿಗೆ ತಂದಿತ್ತು. ರೈತರ ಮರಣ ಶಾಸನಗಳಾಗಿದ್ದ ಈ ಕಾಯ್ದೆಗಳನ್ನು ಹಿಂಪಡಿಯಬೇಕು ಎಂದು ದೇಶದ 562 ರೈತ ಸಂಘಟನೆಗಳ ಒಗ್ಗೂಡಿ 14 ತಿಂಗಳುಗಳ ಕಾಲ ದೆಹಲಿಯಲ್ಲಿ ಪ್ರತಿಭಟನೆ ನಡೆಸಿದ್ದರ ಪ್ರತಿಫಲವಾಗಿ ಕೇಂದ್ರ ಸರ್ಕಾರ ನಮ್ಮ ಹೋರಾಟಕ್ಕೆ ಮಣಿದು ರೈತ ವಿರೋಧಿ 3 ಕೃಷಿ ಕಾಯ್ದೆಗಳನ್ನು ವಾಪಸ್ಸು ಪಡೆಯಿತು.

ಆದರೆ ರಾಜ್ಯದಲ್ಲಿ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ 3 ಕೃಷಿ ಕಾಯ್ದೆಗಳನ್ನು ವಾಪಸ್ಸು ಪಡೆಯುವುದಾಗಿ ಮತ್ತು ವಿದ್ಯುತ್ ಖಾಸಗೀಕರಣ ಮಾಡುವುದಿಲ್ಲ ಎಂದು ಹೇಳಿದ್ದರು. ಆದರೆ ಅಧಿಕಾರಕ್ಕೆ ಬಂದ ಮೇಲೆ ಈ ಕಾಯ್ದೆಗಳನ್ನು ರದ್ದು ಮಾಡದೆ ಆ ಕಾಯ್ದೆಗಳಿಗೆ ಮತ್ತಷ್ಟು ಶಕ್ತಿ ತುಂಬುವ ಕೆಲಸವನ್ನು ರಾಜ್ಯ ಸರ್ಕಾರ ಮಾಡುತ್ತಿರುವುದು ಸರಿಯಲ್ಲ ಎಂದರು.

ಪ್ರತಿಭಟನೆಯಲ್ಲಿ ಹಸಿರು ಸೇನೆಯ ತಾಲೂಕು ಅಧ್ಯಕ್ಷ ಶಾಂತಕುಮಾರ್, ಬಿ.ಎಸ್.ಶಿವಕುಮಾರ್, ಎನ್.ಎಂ.ನಿಂಗಪ್ಪ, ಮಹಾಂತೇಶ್ ಸೇರಿದಂತೆ ರೈತರು ಹಾಜರಿದ್ದರು.

# ಇನ್ಫೋಸಿಸ್‌ನಲ್ಲಿ ಸಾಮೂಹಿಕ ವಜಾ: ರಾತ್ರೋರಾತ್ರಿ ಟ್ರೇನಿಗಳನ್ನು ಹೊರ ಹಾಕಿದ ಐಟಿ ಕಂಪನಿ ವಿರುದ್ಧ ಆಕ್ರೋಶ



**ಮೈಸೂರು:** ಆಂತರಿಕ ಮೌಲ್ಯಮಾಪನ ಪರೀಕ್ಷೆಯಲ್ಲಿ ಫೇಲ್ ಆಗಿದ್ದಾರೆ ಎಂದು ಮೈಸೂರಿನ ಕ್ಯಾಂಪಸ್‌ನಲ್ಲಿ ಸುಮಾರು 400 ಟ್ರೇನಿಗಳನ್ನು ಏಕಾಏಕಿ ವಜಾಗೊಳಿಸಿ, ರಾತ್ರೋರಾತ್ರಿ ಹೊರಹಾಕಿದ ಐಟಿ ದೈತ್ಯ ಇನ್ಫೋಸಿಸ್ ವಿರುದ್ಧ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ಕಂಪನಿಯು ಟ್ರೇನಿಗಳನ್ನು ವಜಾಗೊಳಿಸಿದ ದಿನವೇ ಅವರನ್ನು ಬಲವಂತವಾಗಿ ಕ್ಯಾಂಪಸ್ ನಿಂದ ಹೊರಹಾಕಿದ್ದಕ್ಕೆ ತೀವ್ರ ಟೀಕೆಗೆ ಗುರಿಯಾಗಿದೆ. ಇವತ್ತು ಒಂದು ರಾತ್ರಿಯ ಉಳಿದುಕೊಳ್ಳಲು ಅವಕಾಶ ನೀಡಿ ಎಂಬ ಟ್ರೇನಿಗಳ ಮನವಿಯನ್ನು ಕಂಪನಿ ನಿರಾಕರಿಸಿದೆ ಎಂದು ಫೆಬ್ರವರಿ 7 ರಂದು ವಜಾಗೊಂಡ ಟ್ರೇನಿಗಳ ಸಂಕಷ್ಟವನ್ನು ಮನಿ ಕಂಟ್ರೋಲ್ ವರದಿ ವಿವರಿಸಿದೆ.

ವಜಾಗೊಳಿಸಿದ ಟ್ರೇನಿಗಳಲ್ಲಿ ಒಬ್ಬರಾದ ಮಧ್ಯಪ್ರದೇಶದ ಮಹಿಳೆಯೊಬ್ಬರು "ದಯವಿಟ್ಟು ನನಗೆ ಒಂದು ರಾತ್ರಿ ಉಳಿಯಲು ಅವಕಾಶ ನೀಡಿ, ನಾನು ನಾಳೆ ಹೊರಡುತ್ತೇನೆ. ನಾನು ಈಗ ಎಲ್ಲಿಗೆ ಹೋಗಬೇಕು?" ಎಂದು ಕಣ್ಣೀರು ಹಾಕಿದರೂ ಅಧಿಕಾರಿಗಳು ಕೇಳಲಿಲ್ಲ ಎಂದು ವರದಿ ತಿಳಿಸಿದೆ.

ನಮಗೆ ಗೊತ್ತಿಲ್ಲ. ನೀವು ಇನ್ನು ಮುಂದೆ ಕಂಪನಿಯ ಭಾಗವಲ್ಲ. ಸಂಜೆ 6 ಗಂಟೆಯೊಳಗೆ ಕ್ಯಾಂಪಸ್ ಖಾಲಿ ಮಾಡಬೇಕು" ಎಂದು ಅಧಿಕಾರಿ ಹೇಳಿದ್ದಾರೆ.

ಮೌಲ್ಯಮಾಪನ ಪರೀಕ್ಷೆಗಳಲ್ಲಿ ಮೂರು ಬಾರಿ ಅನುತ್ತೀರ್ಣರಾದ ನಂತರ ಟ್ರೇನಿಗಳ ಮೇಲೆ ಈ ಕ್ರಮ ಕೈಗೊಂಡಿದೆ ಎಂದು ಮೂಲಗಳನ್ನು ಉಲ್ಲೇಖಿಸಿ ಮನಿ ಕಂಟ್ರೋಲ್ ವರದಿ ಮಾಡಿದೆ.

ಮನಿ ಕಂಟ್ರೋಲ್ ಪ್ರಕಾರ, ಸುಮಾರು 50 ಮಂದಿಯ ಬ್ಯಾಚ್‌ಗಳಲ್ಲಿ ತರಬೇತಿ ಪಡೆದವರನ್ನು ಕರೆಯಲಾಗುತ್ತಿದ್ದು, ಪರಸ್ಪರ ಬೇರ್ಪಡಿಕೆ ಪತ್ರಗಳಿಗೆ(ಮ್ಯೂಚುವಲ್ ಸಪರೇಷನ್ ಲೆಟರ್) ಸಹಿ ಹಾಕುವಂತೆ ಮಾಡಲಾಗುತ್ತಿದೆ. ಕಂಪನಿಯು ಏಕಪಕ್ಷೀಯ ನಿರ್ಧಾರ ತೆಗೆದುಕೊಂಡು ಬೌನ್ಸರ್‌ಗಳು ಮತ್ತು ಭದ್ರತಾ ಸಿಬ್ಬಂದಿಯ ಮೂಲಕ ಬೆದರಿಕೆ ಹಾಕಿದೆ.

ಇನ್ನು ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಇನ್ಫೋಸಿಸ್, "ಸಂಸ್ಥೆಯಲ್ಲಿ ಕಠಿಣ ನೇಮಕಾತಿ ಪ್ರಕ್ರಿಯೆಯನ್ನು ನಾವು ಹೊಂದಿದ್ದೇವೆ. ನಮ್ಮ ಮೈಸೂರು ಕ್ಯಾಂಪಸ್‌ನಲ್ಲಿ ಪ್ರಾಥಮಿಕ ತರಬೇತಿ ಪಡೆದ ನಂತರ ಎಲ್ಲಾ ಹೊಸಬರು ಆಂತರಿಕ ಮೌಲ್ಯಮಾಪನಗಳಲ್ಲಿ ಉತ್ತೀರ್ಣರಾಗಬೇಕು. ಎಲ್ಲಾ ಹೊಸಬರಿಗೆ ಇದರಲ್ಲಿ ಉತ್ತೀರ್ಣರಾಗಲು ಮೂರು ಅವಕಾಶಗಳನ್ನು ನೀಡಲಾಗುತ್ತದೆ. ಇದರಲ್ಲಿ ವಿಫಲವಾದಲ್ಲಿ ಅವರು ಸಂಸ್ಥೆಯೊಂದಿಗೆ ಮುಂದುವರಿಯಲು ಸಾಧ್ಯವಿಲ್ಲ. ಅವರ ಜೊತೆಗಿನ ಒಪ್ಪಂದದಲ್ಲಿಯೂ ಇದನ್ನು ಉಲ್ಲೇಖಿಸಲಾಗಿರುತ್ತದೆ. ಈ ಪ್ರಕ್ರಿಯೆ ಎರಡು ದಶಕಗಳಿಂದಲೂ ಚಾಲ್ತಿಯಲ್ಲಿದೆ. ನಮ್ಮ ಗ್ರಾಹಕರಿಗೆ ಉತ್ತಮ ಗುಣಮಟ್ಟದ ಪ್ರತಿಭೆಗಳ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಈ ವ್ಯವಸ್ಥೆಯನ್ನು ಹೊಂದಿದ್ದೇವೆ" ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಜಿಲ್ಲೆಯಲ್ಲಿ ಬೇರೆ ರಾಜ್ಯದ ವಾಹನಗಳ ಓಡಾಡಿದ ವಾಹನ ಮಾಹಿತಿ ಕೇಳಿದ ಉಪ ಲೋಕಾಯುಕ್ತ ಗೌರವಾನ್ವಿತ ನ್ಯಾಯಮೂರ್ತಿಗಳು




**ಹಾವೇರಿ :** ಜಿಲ್ಲೆಯಲ್ಲಿ ಬೇರೆ ರಾಜ್ಯದ ವಾಹನಗಳ ಓಡಾಡಿದ ಸಂಖ್ಯೆ ಹಾಗೂ ಆ ವಾಹನಗಳು ಟ್ಯಾಕ್ಸ್ ಪಾವತಿಸಿದ ಮಾಹಿತಿ ಇದೇಯಾ ಎಂದು ಹಾವೇರಿ ಸಾರಿಗೆ ಪ್ರಾದೇಶಿಕ ಅಧಿಕಾರಿಗಳನ್ನು ಕರ್ನಾಟಕ ಉಪ ಲೋಕಾಯುಕ್ತ ಗೌರವಾನ್ವಿತ ನ್ಯಾಯಮೂರ್ತಿಗಳಾದ ಬಿ.ವೀರಪ್ಪ ಅವರು ಪ್ರಶ್ನಿಸಿದರು.

ಬುಧವಾರ ಬೆಳಿಗ್ಗೆ 6 ಗಂಟೆಯಿಂದ ನಿರಂತರ ನಗರದ ಎ.ಪಿ.ಎಂ.ಸಿ. ಹಾಗೂ ವಿವಿಧ ಕಚೇರಿಗಳಿಗೆ ಭೇಟಿ ನೀಡಿದ ಅವರು, ಸಂಜೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಗೆ ಭೇಟಿ ನೀಡಿ, ಕಚೇರಿಯ ವಿವಿಧ ಕಡತಗಳನ್ನು ಪರಿಶೀಲಿಸಿದರು.

ಜಿಲ್ಲೆಯಲ್ಲಿ ಟ್ರ್ಯಾಕ್ಟರ್‌ಗಳ ನೋಂದಣಿ, ಅಂತರಾಷ್ಟ್ರೀಯ ವಾಹನಗಳಿಗೆ 30 ದಿನಗಳ ನಂತರ ಟ್ಯಾಕ್ಸ್ ಅನ್ವಯವಾಗುತ್ತದೆ, ಇನ್ಸೂರೆನ್ಸ್ ಇಲ್ಲ ವಾನಗಳ ಸಂಖ್ಯೆ, ಸಿಜ್ ಮಾಡಲಾದ ವಾಹನಗಳ ಸಂಖ್ಯೆ, ವೈಟ್ ಬೋರ್ಡ್ ವಾಹನಗಳ ಸಂಖ್ಯೆ ಹಾಗೂ ಎಷ್ಟು ವಾಹನ ಚಾಲನಾ ತರಬೇತಿ ಶಾಲೆಗಳಿಗೆ ಪರವಾನಿಗೆ ನೀಡಲಾಗಿದೆ ಎಂದು ಸಾರಿಗೆ ಪ್ರಾದೇಶಿಕ ಅಧಿಕಾರಿಗಳನ್ನು ಪ್ರಶ್ನಿಸಿದರು.

ಎಫ್.ಸಿ.ಮುಗಿದ ವಾಹನಗಳ ವಶಕ್ಕೆ ಸೂಚನೆ: ಜಿಲ್ಲೆಯಲ್ಲಿ ನೋಂದಣಿಗೆ ಎಫ್ ಸಿ ಮುಗಿದುಹೋಗಿರುವ ವಾಹನಗಳನ್ನು ಕೂಡಲೇ ವಶ ಪಡಿಸಿಕೊಳ್ಳಬೇಕು. ಈ ವಾಹನಗಳು ಇತರೆ ಅಪರಾಧ ಪ್ರಕಾರಣಗಳಲ್ಲಿ ಬಳಕೆಯಾಗುವ ಸಂಭವ ಇರುವುದರಿಂದ ಕೂಡಲೇ ಅಧಿಕಾರಿಗಳು ಎಚ್ಚತ್ತುಕೊಂಡು ಎಫ್ ಸಿ ಮುಗಿದ ವಾಹನಗಳು ರಸ್ತೆಗೆ ಇಳಿಯದಂತೆ ಕಟ್ಟುನಿಟ್ಟಾಗಿ ನಿಗಾವಹಿಸಬೇಕು ಎಂದು ಸಾರಿಗೆ ಅಧಿಕಾರಿಗಳಿಗೆ ತಿಳಿಸಿದರು.

ಪರವಾನಿಗೆ ಇಲ್ಲದ ವಾಹನಗಳ ಪರಿಶೀಲನೆ ಮಾಡಿ: 46 ಶಾಲಾ ಮಕ್ಕಳ ಬಸ್‌ಗಳಿಗೆ ಲೈಸನ್ಸ್ ಮತ್ತು ಇನ್ಶೂರೆನ್ಸ್ ಇಲ್ಲದೆ ಚಾಲನೆ ಮಾಡಿರುವ ಬಗ್ಗೆ ದೂರು ಬಂದಿದೆ, ಈ ಕುರಿತು ಯಾಕೆ ಪರಿಶೀಲನೆ ಮಾಡಿಲ್ಲ ಎಂದು ಕೇಳಿದರು.

ನಾಲ್ಕು ಜನರಿಗೆ ನೋಟೀಸ್: ಪ್ರಾದೇಶಿಕ ಸಾರಿಗೆ ಅಧಿಕಾರಿ ಹಾಗೂ ಮೂರು ಜನ ಸಿಬ್ಬಂದಿಗಳು ಸೇರಿದಂತೆ ಒಟ್ಟು ನಾಲ್ಕು ಜನರಿಗೆ ನೋಟೀಸ್ ಜಾರಿ ಮಾಡಿ, ವರದಿ ಸಲ್ಲಿಸುವಂತೆ ಸೂಚನೆ ನೀಡಿದರು.

ಶಾಲಾ ವಾಹನಗಳ ವಶಕ್ಕೆ ಸೂಚನೆ: ಜಿಲ್ಲೆಯಲ್ಲಿ 2.5 ಲಕ್ಷ ವಾಹನಗಳಿದ್ದು, ಈ ಪೈಕಿ 58,555 ವಾಹನಗಳ ಎಫ್.ಸಿ. ಅವಧಿ ಮುಗಿದ್ದು, ಈ ವಾಹನಗಳ ಪೈಕಿ 26 ಶಾಲಾ ವಾಹನಗಳಿವೆ. ಈ ಶಾಲಾ ವಾಹನಗಳನ್ನು ವಶಕ್ಕೆ ಪಡೆದು ವರದಿ ನೀಡುವಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಿದ್ಯಾರ್ಥಿ ನಿಲಯಕ್ಕೆ ಭೇಟಿ: ನಗರದ ಶ್ರೀ ದೇವರಾಜ ಅರಸು ಮೇಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಭೇಟಿ ನೀಡಿದ ಉಪ ಲೋಕಾಯುಕ್ತರು, 6 ನೇ ತರಗತಿಯಿಂದ 10 ತರಗತಿ ವರೆಗಿನ ವಿದ್ಯಾರ್ಥಿನಿಯರೊಂದಿಗೆ ಮಾತನಾಡಿ, ಶೌಚಾಲಯ ವ್ಯವಸ್ಥೆ, ಊಟದ ವ್ಯವಸ್ಥೆ, ಪುಸ್ತಕ, ರಾತ್ರಿ ಕಾವಲುಗರರು ಬಗ್ಗೆ ಮಾಹಿತಿ ಪಡೆದುಕೊಂಡರು.

ಬೆಳಿಗೆ ಬೇಗ ಎದ್ದು ಯೋಗ ಮಾಡಿ ಒಳ್ಳೆಯ ಉದ್ದೇಶದೊಂದಿಗೆ ಚನ್ನಾಗಿ ಓದಿ ನಿಮ್ಮ ತಂದೆ -ತಾಯಿ ಹೆಸರು ಉಳಿಸಿ. ಯಾವುದೇ ಆಮಿಷಗಳಿಗೆ ಒಳಗಾಗಬೇಡಿ ಚನ್ನಾಗಿ ಓದಿ ಸರ್ಕಾರ ನಿಮಗಾಗಿ ಸಾಕಷ್ಟು ಸೌಕರ್ಯಗಳನ್ನು ಕಲ್ಪಿಸಿದೆ ಅದನ್ನು ಸರಿಯಾಗಿ ಬಳಸಿಕೊಳುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಬಿ.ಆರ್. ಮುತಾಲಿಕದೇಸಾಯಿ, ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಕ್ಷಯ ಶ್ರೀಧರ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಡಜನರನ್ನು ಶೋಷಣೆಯಿಂದ ರಕ್ಷಣೆಗೆ ಮಹತ್ವದ ಕಾನೂನು ಇದಾಗಿದೆ: ಸಚಿವ ಎಚ್.ಕೆ. ಪಾಟೀಲ



**ಗದಗ:** ಮೈಕ್ರೋ ಸಾಲ, ಸಣ್ಣ ಸಾಲ ಬಲವಂತದ ವಸೂಲಿ ಪ್ರತಿಬಂಧಕ ಅದ್ಯಾದೇಶಕ್ಕೆ ರಾಜ್ಯಪಾಲರಿಂದ ಬುಧವಾರ ಒಪ್ಪಿಗೆ ಸಿಕ್ಕಿದೆ. ಕಾನೂನು ಬಾಹಿರ ಲೇವಾದೇವಿ ವ್ಯವಹಾರ ಮಾಡಿ ಸಾಲ ಪಡೆದವರನ್ನು ಹಿಂಸಿಸುವ, ಒತ್ತೆ ಆಳುಗಳನ್ನಾಗಿ ಮಾಡಿಕೊಳ್ಳುವ, ದೈಹಿಕ ಹಿಂಸೆ ಮಾಡುವ ಅಕ್ರಮ ಕೃತ್ಯವನ್ನು ನಿ0ಯಂತ್ರಿಸಲು ಮತ್ತು ಅಕ್ರಮ ಲೇವಾದೇವಿ ವ್ಯವಹಾರದ ಮೇಲೆ ನಿ0ಯಂತ್ರಿಸಲು ಈ ಸುಗ್ರೀವಾಜ್ಞೆ ಮೂಲಕ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ರಾಜ್ಯದ ಕಾನೂನು, ನ್ಯಾ0ಯ ಮತ್ತು ಮಾನವ ಹಕ್ಕುಗಳು, ಸಂಸದೀ0ಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ ಸುದ್ದಿಗೋಷ್ಟಿ ನಡೆಸಿ ಮಾತನಾಡಿದ ಅವರು, ರಾಜ್ಯಪಾಲರು ಒಪ್ಪಿಗೆ ನೀಡಿದ್ದರಿಂದ ಬಡವರ ರಕ್ಷಣೆಗೆ ಸರ್ಕಾರಕ್ಕೆ ಬಲ ಬಂದಂತಾಗಿದೆ. ಸಾಲಗಾರರಿಂದ ಜನರನ್ನು ರಕ್ಷಿಸಲು ಜನಪರ ಕಾನೂನು ಅವಶ್ಯವಿತ್ತು. ಸಾಲ ವಸೂಲಿ ಹೆಸರಲ್ಲಿ ಕಿರುಕುಳ, ಅಮಾನವೀ0ಯ ಕೃತ್ಯಗಳು, ವಿಪರೀತ ಬಡ್ಡಿ, ಮೀಟರ್ ಬಡ್ಡಿ ದಂಧೆಗಳಿಗೆ ತಡೆ ನೀಡಬೇಕು ಎಂಬ ನಿಲುವು ಸರ್ಕಾರ ಹೊಂದಿದೆ. ಇದರ ಪರಿಣಾಮವೇ ಸುಗ್ರೀವಾಜ್ಞೆ ಎಂದು ಹೇಳಿದರು.

ಸುಗ್ರೀವಾಜ್ಞೆ ತರುವ ಸಂದರ್ಭದಲ್ಲಿ ರಾಜ್ಯದಲ್ಲಿ ಸಂವಾದ, ವಾದ, ವಿವಾದ, ಆಲೋಚನೆಗಳನ್ನು ಸಮದೂಗಿಸಿ ಜನಪರ ಸುಗ್ರೀವಾಜ್ಞೆ ತರಲಾಗಿದೆ. ರೈತರು, ಮಹಿಳೆ, ಮಹಿಳಾ ಸ್ವಸಹಾ0ಯ ಗುಂಪು, ಮಹಿಳಾ ರೈತರು, ಫೂಟ್ ಪಾತ್ ಉದ್ದಿಮೆಗಳು, ಅಂಗಂಡಿಗಳಲ್ಲಿ ಕೆಲಸ ಮಾಡುವರು, ಬಡವರು, ಆರ್ಥಿಕವಾಗಿ ಹಿಂದುಳಿದವರ ರಕ್ಷಣೆ ಮಾಡಲು ಈ ಸುಗ್ರೀವಾಜ್ಞೆ ಅನುಕೂಲ ಆಗಲಿದೆ.

ನೋಂದಾಯಿತ ಅಲ್ಲದ, ಕಾನೂನು ಬಾಹಿರ ಲೇವಾದೇವಿ ವ್ಯವಹಾರ ಮಾಡುವರ ಮೇಲೆ ಕ್ರಮ ಕೈಗೊಳ್ಳಲಾಗುವುದು. ಸಾಲ ಪಡೆದವರಿಗೆ ಒತ್ತಾ0ಯ ಪೂರ್ವಕ ಕಿರುಕುಳ, ಅವರನ್ನು ಒತ್ತೆ ಆಳುಗಳಾಗಿ ಮಾಡಿಕೊಳ್ಳುವುದು ಕಾನೂನು ಬಾಹಿರ ಚಟುವಟಿಕೆ ಆಗಿತ್ತು. ಲೇವಾದೇವಿ ವ್ಯವ್ಯಹಾರ ಮಾಡುವರಿಂದ ಕಿರುಕಳಕ್ಕೆ ಒಳಪ್ಪಟ್ಟವರನ್ನು ರಕ್ಷಣೆ ಮಾಡುವ ಕಾನೂನು ಅಗತ್ಯ ಇತ್ತು. ಇಂತಹ ಕಾನೂನಿಂದ ಜನರ ರಕ್ಷಣೆ0ಯನ್ನು ಕಾನೂನು ಚೌಕಟ್ಟಿನ ಒಳಗೆ ತಂದಂತಾಯಿತು ಎಂದು ಎಚ್.ಕೆ. ಪಾಟೀಲ ಹೇಳಿದರು.

ಈ ಸುಗ್ರೀವಾಜ್ಞೆ ಮೂಲಕ ಸಾಲಗಾರನ ಜೀವನದ ಘನತೆಯನ್ನು ಕಾಪಾಡಿ,ಬಡಜನರ ಶೋಷಣೆಯನ್ನು ತಡೆಯಲಿಕ್ಕೆ ಅನುಕೂಲವಾಗಿದ್ದು ಸಮಾಜದಲ್ಲಿರುವ ಬಡವರ ರಕ್ಷಣೆಗೆ ಸಹಾಯಕವಾಗಿದೆ ಸಾಲ ಪಡೆದವರು ಬದುಕಿನಲ್ಲಿ ಅಂಜದೆ ಸಮಾದಾನ ಬದುಕು ನಡೆಸಬಹುದಾಗಿದೆ ಎಂದು ರಾಜ್ಯದ ಕಾನೂನು, ನ್ಯಾ0ಯ ಮತ್ತು ಮಾನವ ಹಕ್ಕುಗಳು, ಸಂಸದೀ0ಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಹೇಳಿದರು.

ನಗಾರಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರ ಸಾಬ ಬಬರ್ಚಿ,ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ,ಡಿಸಿಎಫ್ ಸಂತೋಷಕುಮಾರ ಸಿದ್ದು ಪಾಟೀಲ, ಬಿ.ಬಿ.ಅಸೂಟಿ, ಅಶೋಕ ಮಂದಾಲಿ ಇತರರು ಇದ್ದರು.

# ಪ್ರತಿದಿನ ಧ್ಯಾನ ಮಾಡುವುದರಿಂದ ಲವಲವಿಕೆ ಸಾಧ್ಯ : ಎನ್. ಸುಬ್ರಹ್ಮಣ್ಯ

**ಚಿಕ್ಕಮಗಳೂರು:** ಪ್ರತಿನಿತ್ಯ ಬೆಳಿಗ್ಗೆ ಮತ್ತು ಸಂಜೆ ಧ್ಯಾನ ಮಾಡುವುದರಿಂದ ಇಡೀ ದಿನ ಲವಲವಿಕೆಯಿಂದ ಇರಲು ಸಾಧ್ಯ ಎಂದು ಮಡಿಕೇರಿಯ ಕೌಟುಂಬಿಕ ನ್ಯಾಯಾಲಯದ ಪ್ರಧಾನ ಜಿಲ್ಲಾ ನ್ಯಾಯಾಧೀಶ ಎನ್.ಸುಬ್ರಹ್ಮಣ್ಯ ಹೇಳಿದರು.

ತಾಲೂಕಿನ ಆಣೂರು ಬಳಿಯ ಕಲ್ಲುಗುಡ್ಡೆ ರಂಗನಾಥ ಸ್ವಾಮಿ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ "ಸ್ನೇಹಮಿಲನ" ಕಾರ್ಯಕ್ರಮದಲ್ಲಿ ಸ್ನೇಹಿತರೊಡನೆ ಧ್ಯಾನದ ಬಗ್ಗೆ ಉಪನ್ಯಾಸ ನೀಡಿ ಯಾವ ರೀತಿ ಧ್ಯಾನ ಮಾಡಬೇಕು ಎಂಬುದರ ಬಗ್ಗೆ ಕೆಲವರಿಗೆ ಅನುಮಾನವಿದೆ ತುಂಬಾ ಸರಳವಾಗಿ ಧ್ಯಾನ ಮಾಡಲು ಶುರು ಮಾಡುವುದು ಹೇಗೆ ಎಂಬುದನ್ನು ತಿಳಿಸಿಕೊಟ್ಟ ಅವರು, ಪ್ರಶಾಂತ ಸ್ಥಳದಲ್ಲಿ ಕುಳಿತು ಎರಡು ಕಣ್ಣುಗಳನ್ನ ಮುಚ್ಚಿ ಮೂಗಿನ ಮುಖಾಂತರ ಉಸಿರನ್ನು ನಿಧಾನವಾಗಿ ತೆಗೆದುಕೊಂಡು ಅಷ್ಟೇ ನಿಧಾನವಾಗಿ ಉಸಿರನ್ನು ಹೊರಬಿಡುತ್ತ ಧ್ಯಾನ ಮಾಡಬೇಕು.

ನಮ್ಮ ಸಂಪೂರ್ಣ ಮನಸ್ಸು ಉಸಿರಿನ ಮೇಲೆ ಅವಲಂಬಿತವಾಗಿರಬೇಕು. ಉಸಿರು ತೆಗೆದುಕೊಳ್ಳುವ ಕ್ರಿಯೆ ಮತ್ತು ಉಸಿರು ಬಿಡುವ ಕ್ರಿಯೆಯನ್ನೇ ಧ್ಯಾನದಲ್ಲಿ ತೊಡಗಿಸಿಕೊಂಡರೆ ಹೊರಗಡೆ ಪ್ರಪಂಚದ ಯೋಚನೆಗಳು ಮನಸ್ಸಿಗೆ ಬರುವುದಿಲ್ಲ, ಈ ರೀತಿ ಮಾಡುವುದರಿಂದ ನಮ್ಮ ಶರೀರದಲ್ಲಿ ಅದೆಷ್ಟೋ ಖಾಯಿಲೆಗಳಿಗೆ ಔಷಧಿ ಅವಶ್ಯಕತೆ ಇರುವುದಿಲ್ಲ ತನ್ನಷ್ಟಕ್ಕೆ ತಾನೇ ಖಾಯಿಲೆಗಳು ಗುಣವಾಗಲಿದೆ ಎಂದರು.

ಧ್ಯಾನದಿಂದ ಅಪಾರವಾದ ಶುದ್ಧವಾದ ನಿದ್ದೆ ಮತ್ತು ಶಕ್ತಿ ಸಿಗುತ್ತದೆ ಇದರಿಂದ ಆತ್ಮ, ಮನಸ್ಸು ಮತ್ತು ಶರೀರ ಅತಿ ಶೀಘ್ರವಾಗಿ ಪ್ರಶಾಂತ ಸ್ಥಿತಿಯಲ್ಲಿರುತ್ತದೆ ಆಲೋಚನಾ ರಹಿತ ಸ್ಥಿತಿಯನು ಅತಿ ಶೀಘ್ರವಾಗಿ ಪಡೆಯಬಹುದಾಗಿದೆ ಎಂದರು. ಪ್ರತಿನಿತ್ಯ ಧ್ಯಾನ ಮಾಡುವುದರಿಂದ ಆರೋಗ್ಯ ವೃದ್ಧಿಯಾಗಿ ದೇಹ ವಜ್ರಕಾಯವಾಗುತ್ತದೆ. ನಾವು ಮಾಡುವ ಕೆಲಸ ಕಾರ್ಯಗಳಲ್ಲಿ ಜಯಶೀಲರಾಗುತ್ತೇವೆ ಪ್ರತಿನಿತ್ಯ ನಮ್ಮ ನಡೆ-ನುಡಿಯಲ್ಲಿ ಸೌಮ್ಯತೆ ಇರುತ್ತದೆ ನಮ್ಮ ಆಲೋಚನೆಗೆ ಮೀರುವಂತ ಮೂರನೇ ಕಣ್ಣಿನ ಅನುಭವವನ್ನು ಪಡೆಯುತ್ತೇವೆ ಎಲ್ಲರೊಂದಿಗೆ ಪ್ರೇಮತ್ವದಿಂದ ಇರುತ್ತೇವೆ ಮುಖ್ಯವಾಗಿ ನಮ್ಮ ಪಂಚೇಂದ್ರಿಯಗಳು ಚುರುಕುಗೊಳ್ಳುತ್ತವೆ ಎಂದರು.

ಶ್ವಾಸ ಮತ್ತು ಧ್ಯಾನ ಆತ್ಮವನ್ನು ಮೆರಗು ಪಡಿಸುತ್ತದೆ. ಮನಸ್ಸಿಗೆ ಸ್ಪಷ್ಟತೆ ಮತ್ತು ಬಲವನ್ನು ತರುತ್ತದೆ. ಎಂದು ರವಿಶಂಕರ್ ಗುರೂಜಿ ಅವರು ಹೇಳಿದ್ದಾರೆ. ನಮ್ಮ ಭಗವದ್ಗೀತೆಯಲ್ಲಿ ಕೂಡ ಧ್ಯಾನ ಸರ್ವರೋಗ ನಿವಾರಣಿ ಸರ್ವಭೋಗಕಾರಿಣಿ ಎಂದೆ ಉಲ್ಲೇಖಿಸಲಾಗಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**